ಸಂಪುಟ: ೦೬/ ಸಂಚಿಕೆ: ೨೯೮/ಸೋಮವಾರ ದಿನಾಂಕ : ೨೭

ಕಛೇರಿ ದೂರವಾಣಿ ಸಂಖ್ಯೆ 0831-3564491

# ಬೆಳಗಿನ ಸೂರ್ಯೋದಯ

ಕನ್ನಡ ಪ್ರಾದೇಶಿಕ ದಿನಪತ್ರಿಕೆ

ಬೆಳಗಾವಿ ■ ಧಾರವಾಡ ■ ಬಾಗಲಕೋಟ ■ ವಿಜಯಪುರ ■ ಗದಗ ■ ಕೊಪ್ಪಳ ■ ಹಾವೇರಿ ■ ಕಾರವಾರ

ಸಂಪಾದಕರು : ಗುರುರಾಜ ಈರಪ್ಪಾ. ಕದಮ, Editor : GURURAJ IRAPPA. KADAM Cell : 9620099959

Volume : 06/ ISSUE : 298/ MONDAY Date : 27-01-2025/ RNI No. KARKAN/2019/77640/ Postal Reg No. PMG/KA/NK/BM/135/25-26 / POST AT Vantamury Colony Post Office / email : belaginasuryodaya@gmail.com / Page : 6 / Rs. 2.00

## ಗಣರಾಜ್ಯೋತ್ಸವ : ಉಸ್ತುವಾರಿ ಸಚಿವರ ಸಂದೇಶ

## ಗಣತಂತ್ರ ವ್ಯವಸ್ಥೆ ಭಾರತೀಯರಿಗೆ ಸಾರ್ವಭೌಮಾಧಿಕಾರ ಕಲ್ಪಿಸಿಕೊಟ್ಟ ದಿನ: ಸಚಿವ ಸತೀಶ್ ಜಾರಕಿಹೊಳಿ



ಬೆಳಗಾವಿ, : ಭಾರತ ರಾಷ್ಟ್ರವು ಗಣ-ರಾಜ್ಯವೆಂದು 1950ರ ಜನವರಿ 26ರಂದು ಘೋಷಿಸಿಕೊಂಡಿತು. ಈ ದಿನವು ದೇಶದ ನಾಗರಿಕರಿಗೆ ರಾಷ್ಟ್ರದ ಜವಾಬ್ದಾರಿಯನ್ನು ನೀಡಿದ ದಿನವಾಗಿದೆ. ನಮ್ಮ ಸಂವಿಧಾನವನ್ನು ಒಪ್ಪಿಕೊಂಡ ದಿನವಿದು. ಗಣತಂತ್ರ ವ್ಯವಸ್ಥೆಯು ಭಾರತೀಯ-ರಿಗೆ ಸಾರ್ವಭೌಮಾಧಿಕಾರವನ್ನು ಕಲ್ಪಿಸಿಕೊಟ್ಟ ದಿನವಾಗಿದೆ ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ಹೇಳಿದರು.

ಭಾರತ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ರವಿವಾರ (ಜ.26) ನಗರದ ಜಿಲ್ಲಾ ಕ್ರೀಡಾಂಣದಲ್ಲಿ ಧ್ವಜಾರೋಹಣ ನೇರವೆರಿಸಿ ಸಚಿವರು ಸಂದೇಶ ನೀಡಿದರು.

ಬೆಳಗಾವಿಯ ಈ ನೆಲವು ರಾಷ್ಟ್ರಪಿತ ಮಹಾತ್ಮಾ ಗಾಂಧೀಜಿ, ಸಂವಿಧಾನಶಿಲ್ಪಿ ಡಾ.ಬಾಬಾಸಾಹೇಬ್ ಅಂಬೇಡ್ಕರ್ ಅವರಂತಹ ಮಹಾತ್ಮರು ನಡೆದಾಡಿದ ನೆಲವಾಗಿದೆ ಎಂದರು.

ಡಾ. ಬಿ.ಆರ್.ಅಂಬೇಡ್ಕರ್ ಅವರ ದೂರದೃಷ್ಟಿ, ಚಿಂತನೆಯ ಫಲವಾಗಿ ನಾವಿಂದು ಜಗತ್ತಿಗೆ ಮಾದರಿಯಾದ ಸಂವಿಧಾನದ ವಾರಸುದಾರರಾಗಿದ್ದೇವೆ. ಬ್ರಿಟೀಷರ ದಾಸ್ಯದಿಂದ ಮುಕ್ತಿ ಪಡೆದುಕೊಂಡ ಬಳಿಕ ಕೇವಲ 76 ವರ್ಷಗಳಲ್ಲಿ ಜಗತ್ತಿನ ಅತ್ಯಂತ ಬಲಿಷ್ಠ ಪ್ರಜಾತಂತ್ರ ರಾಷ್ಟ್ರವಾಗಿ ಹೊರಹೊಮ್ಮಲು ಈ ಸಂವಿಧಾನವೇ ಬುನಾದಿಯಾಗಿದೆ.

ಸಾಮಾಜಿಕ ನ್ಯಾಯ, ಸರ್ವ-ರಿಗೂ ಸಮಾನತೆ, ವ್ಯಕ್ತಿ ಹಾಗೂ ಅಭಿವ್ಯಕ್ತಿ ಸ್ವಾತಂತ್ರ್ಯ ನಮ್ಮ ಸಂವಿಧಾನ ನಮಗೆ ಕಲ್ಪಿಸಿಕೊಟ್ಟ ಬಹುದೊಡ್ಡ ಕೊಡುಗೆಗಳಾಗಿವೆ ಎಂದು ಲೋಕೋಪಯೋಗಿ ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಸತೀಶ್ ಜಾರಕಿಹೊಳಿ ಅವರು ತಿಳಿಸಿದರು.

**ಆಕರ್ಷಕ ಪಥಸಂಚಲನ:** ಜಿಲ್ಲಾ ಕ್ರೀಡಾಂಗಣದಲ್ಲಿ ರವಿವಾರ (ಜ.26) ಜರುಗಿದ ಗಣರಾಜ್ಯೋತ್ಸವ ದಿನಾಚರಣೆ ಪ್ರಯುಕ್ತ ಆರ್.ಪಿ.ಐ ಶಿವಾನಂದ ಗುಣದಾಳ ಅವರ ನೇತೃತ್ವದ ತಂಡಗಳು ಜಿಲ್ಲಾ ಉಸ್ತುವಾರಿ ಸಚಿವರಾದ ಸತೀಶ ಜಾರಕಿಹೊಳಿ ಅವರಿಗೆ ಗೌರವ ವಂದನೆ ಸಲ್ಲಿಸಿದವು.

ತದನಂತರ ಸಾರೇ ಜಹಾ ಚೇ ಅಚ್ಛಾ ಪೋಲಿಸ್ ಬ್ಯಾಂಡಿನ ಹಿಮ್ಮೇಳದೊಂದಿಗೆ ಜರುಗಿದ ಆಕರ್ಷಕ ಪಥಸಂಚಲನದಲ್ಲಿ ಡಿ.ಎ.ಆರ್. ಬೆಳಗಾವಿ, ಮಹಿಳಾ ಹಾಗೂ ಪುರುಷರ ನಾಗರೀಕ ಪೋಲಿಸ್ ತುಕುಡಿ, ಸಿ.ಎ.ಆರ್. ಬೆಳಗಾವಿ, ಕೆ.ಎಸ್.ಆರ್.ಪಿ ಮಹಿಳಾ, ಪುರುಷರ ತುಕುಡಿ, ಗೃಹ ರಕ್ಷಕ ದಳ, ಕರ್ನಾಟಕ ಅಬಕಾರಿ, ಅಗ್ನಿಶಾಮಕ ದಳ, ಎನ್.ಸಿ.ಸಿ. ಸಿನಿಯರ ಬಾಯ್ಸ ಮತ್ತು ಗರ್ಲ್ಸ್, ಅಗಸಗಾದ ಎಸ್.ಎಲ್.ವಿ.ಕೆ. ಪ್ರೌಢಶಾಲೆ, ಸಿದ್ಧರಾಮೇಶ್ವರ ಪ್ರೌಢ ಶಾಲೆಯ ಭಾರತ ಸೇವಾದಳ, ಗಾಂಧೀ ನಗರದ ನವೋದಯ ಶಾಲೆಯ ಸ್ಕೌಟ್ಸ್, ಲಿಟಲ್ ಸ್ಕಾಲರ್ಸ್ ಶಾಲೆಯ ಗೈಡ್ಸ್, ಸೇಂಟ್ಸ್ ಪೌಲ್ಸ್ ಪ್ರೌಢಶಾಲೆ, ವನಿತಾ ಕನ್ನಡ ಮಾಧ್ಯಮ ಪ್ರೌಢಶಾಲೆ, ಆರ್ಮಿ ಪಬ್ಲಿಕ ಸ್ಕೂಲ್, ಮಹಾಂತೇಶ ನಗರದ ಲವ ಡೇಲ್ ಸೆಂಟ್ರಲ್ ಶಾಲೆ, ಶಹಾಪುರ ಸರಸ್ವತಿ ಸರ್ಕಾರಿ ಪ್ರೌಢ ಶಾಲೆ, ಬೆಳಗಾವಿ ಪಬ್ಲಿಕ್ ಸ್ಕೂಲ, ಜಿ.ಎ. ಪ್ರೌಢ ಶಾಲೆ, ಮಹೇಶ್ವರಿ ಅಂಧ ಮಕ್ಕಳ ಶಾಲಾ ಮಕ್ಕಳು ಶಿಸ್ತು ಬದ್ಧವಾಗಿ ಪಥ ಸಂಚಲನದಲ್ಲಿ ಸಾಗಿದವು.

**ಸನ್ಮಾನ:** ಅಂತರಾಷ್ಟ್ರೀಯ ಪ್ಯಾರಾ ಥ್ರೋ ಬಾಲ್/ಬಾಸ್ಕೆಟಬಾಲ್‌ನಲ್ಲಿ ಚಿನ್ನದ ಪದಕ ಪಡೆದ ಸೂರಜ ಧಾಮಣೇಕರ, ಈರಣ್ಣ ಹೊಂಡಪ್ಪನವರ, ರಾಷ್ಟ್ರಮಟ್ಟದ ಈಜು ಸ್ಪರ್ಧೆಯಲ್ಲಿ ಚಿನ್ನ ಹಾಗೂ ಬೆಳ್ಳಿ ಪದಕ ಪಡೆದ ಅಮನ ಸುನಗಾರ, ರಾಷ್ಟ್ರ ಮಟ್ಟದ ಸಾಹಸ ಕ್ರೀಡೆಯಲ್ಲಿ ಪದಕ ಪಡೆದ ಪ್ರಕೃತಿ ಅಲಗೂಡೇಕರ, ಅಂತರಾಷ್ಟ್ರೀಯ ಮಟ್ಟದ ಮ್ಯಾರಾಥಾನ್/ಈಜು/ಸೈಕ್ಲಿಂಗ್ ಸ್ಪರ್ಧೆಯಲ್ಲಿ ಭಾಗವಹಿಸಿದ ಡಾ. ಸತೀಶ ಚೌಲಿಗೇರ, ಅಂಗಾಂಗ ದಾನ ಮಾಡಿದ ಫಕೀರಗೌಡ ಪಾಟೀಲ ಅಭಿಷೇಕ ವಾಲಿಶೆಟ್ಟಿ ಅವರ ಕುಟುಂಬಸ್ಥರಿಗೆ ಇದೇ ಸಂದರ್ಭದಲ್ಲಿ ಸಚಿವರು ಹಾಗೂ ಗಣ್ಯರು ಸನ್ಮಾನಿಸಿದರು.

**ಉಪಸ್ಥಿತಿ:** ಕಾರ್ಯಕ್ರಮದಲ್ಲಿ ಬೆಳಗಾವಿ ಉತ್ತರ ಶಾಸಕರಾದ ರಾಜು (ಆಸಿಫ್) ಸೇಠ, ಬುಡಾ ಅಧ್ಯಕ್ಷ ಲಕ್ಷ್ಮಣರಾವ ಚಿಂಗಳೆ, ನಗರಸೇವರಕು, ಜಿಲ್ಲಾಧಿಕಾರಿ ಮೊಹಮ್ಮದ್ ರೋಷನ್, ಜಿಲ್ಲಾ ಪೋಲಿಸ್ ಆಯುಕ್ತ



ಯಡಾ ಮಾರ್ಟಿನ್ ಮಾರ್ಬನ್ಯಾಂಗ್, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿ ಡಾ.ಭೀಮಾ ಶಂಕರ ಗುಳೇದ, ಅಪರ ಜಿಲ್ಲಾಧಿಕಾರಿ ವಿಜಯಕುಮಾರ ಹೊನಕೇರಿ, ವಿವಿಧ ಇಲಾಖೆ ಅಧಿಕಾ-ರಿಗಳು, ಶಾಲಾ ಕಾಲೇಜು ವಿಧ್ಯಾರ್ಥಿಗಳು, ಸಾರ್ವಜನಿಕರು ಉಪಸ್ಥಿತರಿದ್ದರು.

****

## ಮೈಕ್ರೋ ಫೈನಾನ್ಸ್‌ನವರಿಂದ ಬಡವರಿಗೆ ಕಿರುಕುಳ ತಡೆಗಟ್ಟಲು

## ಪೊಲೀಸರಿಗೆ ವಿಶೇಷ ಅಧಿಕಾರ : ಗೃಹ ಸಚಿವ ಜಿ ಪರಮೇಶ್ವರ್



ತುಮಕೂರು : ಮೈಕ್ರೋ ಫೈನಾನ್ಸ್‌ನವರಿಂದ ಬಡವರ ಮೇಲಾಗುತ್ತಿರುವ ಕಿರುಕುಳ ತಪ್ಪಿಸಲು ಪೊಲೀಸರಿಗೆ ಹೆಚ್ಚಿನ ಅಧಿಕಾರ ನೀಡಲು, ಕಾನೂನು ರಚಿಸುವ ಸಲುವಾಗಿ ರಾಜ್ಯಪಾಲರಿಗೆ ಪ್ರಸ್ತಾವನೆಯನ್ನು ಸಲ್ಲಿಸಲಾಗುತ್ತಿದೆ ಎಂದು ಗೃಹ ಸಚಿವ ಡಾ. ಜಿ ಪರಮೇಶ್ವರ್ ತಿಳಿಸಿದರು. ತುಮಕೂರಿನಲ್ಲಿ ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಮೈಕ್ರೋ ಫೈನಾನ್ಸ್ ಕುರಿತು ಸಿಎಂ, ಡಿಸಿಎಂ, ಕಾನೂನು ಸಚಿವರು ಹಾಗೂ ನಾನು ಚರ್ಚೆ ಮಾಡಿದ್ದೇವೆ. ಆರ್‌ಬಿಐ ಪ್ರತಿನಿಧಿಗಳು, ಮೈಕ್ರೋ ಫೈನಾನ್ಸ್ ಪ್ರತಿನಿಧಿ, ಪೊಲೀಸ್ ಇಲಾಖೆ, ರೆವೆನ್ಯೂ ಇಲಾಖೆ, ಹಣಕಾಸಿನ ಇಲಾಖೆಯವರೆಲ್ಲರೂ ಕುಳಿತು ಮಾತನಾಡಿದ್ದೇವೆ. ಸಿಎಂ ರಿವ್ಯೂ ಮಾಡುವಾಗ ಒಂದು ತೀರ್ಮಾನಕ್ಕೆ ಬಂದರು ಎಂದು ಹೇಳಿದರು.

ಅದರಲ್ಲಿ ಈಗಾಗಲೇ ಇರುವಂತಹ ಕಾನೂನನ್ನ ಭದ್ರ ಮಾಡುವಂತಹದ್ದು. ಮತ್ತು ಹೊಸದಾಗಿ ಏನಾದ್ರು ಪ್ರಾವಿಜನ್?ಅನ್ನ ಸೇರಿಸುವುದರ ಕು-ರಿತು ಚರ್ಚಿಸಿದ್ದೇವೆ. ಲೆಂಡಿಂಗ್ ಮಾಡುವವರಿಗೆ, ರಿಕವರಿ ಮಾಡುವವರಿಗೆ ಹಾಗೂ ಬೆನಿಫಿಷಿಯ-ರಿಗೆ ತೊಂದರೆ ಮಾಡದಂತೆ ಆರ್?ಬಿಐ ಗೈಡ್‌ಲೈನ್ಸ್‌ಗಳಿವೆ. ಅದರಲ್ಲಿ, 6 ಗಂಟೆ ಮೇಲೆ ಹಣ ರಿಕವರಿ ಮಾಡಬಾರದು ಅಂತ ಇದೆ. ಅವಾಚ್ಯ ಶಬ್ದ ಬಳಕೆ ಮಾಡಬಾರದು. ಮನೆಗಳ ಮೇಲೆ ದಾಳಿ ಮಾಡಬಾರದು, ಅವರ ವಸ್ತುಗಳನ್ನ ಹೊತ್ತೊಯ್ಯಬಾರದು ಅಂತ ಇದೆ. ಅದನ್ನು ಪಾಲಿಸಬೇಕು ಅಂತ ನಾವು ಹೇಳಿದ್ದೇವೆ. ಅದಕ್ಕೆ ಕಾನೂನು ಏನಾದ್ರು ಬದಲಾವಣೆ ಮಾಡುವುದಿದ್ರೆ ಅದನ್ನ ನಾವು ಮಾಡುತ್ತೇವೆ. ಹೊಸದಾಗಿ ತರಬೇಕಾದ ಕಾನೂನನ್ನ ಆರ್ಡಿನೆನ್ಸ್ ಮೂಲಕ ತರಬೇಕು ಅಂದುಕೊಂಡಿದ್ದೇವೆ. ಇನ್ನೊಂದು ವಾರದಲ್ಲಿ ಆರ್ಡಿನೆನ್ಸ್ ಮಾಡಿ ಕ್ಯಾಬಿನೆಟ್‌ನಲ್ಲಿ ಅಪ್ರೂವಲ್ ಪಡೆದು ಗವರ್ನರ್‌ಗೆ ಕಳುಹಿಸಿಕೊಡುತ್ತೇವೆ ಎಂದು ಮಾಹಿತಿ ನೀಡಿದರು.

ಅದು ಬಹಳ ಕಠಿಣವಾದ ಕಾನೂನು ಆಗಬೇಕು. ಹಾಗೆಯೇ ಪೊಲೀಸರಿಗೆ ಹೆಚ್ಚಿನ ಅಧಿಕಾರ ಕೊಡಬೇಕು ಎಂದು ನಿರ್ಧರಿಸಿದ್ದೇವೆ. ಏಕೆಂದ್ರೆ ಪೊಲೀಸರಿಗೆ ಈಗ ಸುಮೋಟೋ ಕೇಸ್? ದಾಖಲಿಸುವ ಅಧಿಕಾರ ಇಲ್ಲ. ಆದ್ದರಿಂದ ಅವ-ರಿಗೆ ಸ್ವಯಂ ಪ್ರೇರಿತ ಕೇಸು ದಾಖಲಿಸಿಕೊಳ್ಳುವ ಅಧಿಕಾರವನ್ನ ನೀಡಲು ನಿರ್ಧರಿಸಿದ್ದೇವೆ. ಐಪಿಸಿ ಸೆಕ್ಷನ್?ನಲ್ಲಿ ಏನೇನು ಪ್ರಾವಿಜನ್ ಮಾಡಬೇಕೋ ಅದನ್ನ ಈ ಆರ್ಡಿನೆನ್ಸ್? ಮೂಲಕ ಕೊಡುತ್ತೇವೆ. ಕೇಂದ್ರ ಸರ್ಕಾರ ಇದನ್ನೇ ಚಿಂತನೆ ಮಾಡುತ್ತಿದೆ. ಕಳೆದ ಎಂಟತ್ತು ವರ್ಷಗಳಿಂದ ಇದನ್ನು ತರಬೇಕು ಅಂತ ಇದ್ದಾರೆ, ಆದರೆ ತಂದಿಲ್ಲ. ಅವರಿಗೂ ನಾವು ಒತ್ತಾಯ ಮಾಡುತ್ತೇವೆ. ಈ ಬಗ್ಗೆ ಮುಖ್ಯಮಂತ್ರಿ ಅವರು ಪ್ರಧಾನಿಗೆ ಪತ್ರ ಬರೆಯುವುದಾಗಿ ಹೇಳಿದ್ದಾರೆ ಎಂದರು.

## ಶ್ರೀ ಯಲ್ಲಾಲಿಂಗನ ಮಠಕ್ಕೆ ರೊಟ್ಟಿಬುತ್ತಿ ಅರ್ಪಿಸಿದ ಶ್ರೀಮಠದ ಭಕ್ತರು





ಮುಗಳಖೋಡ: ಶುದ್ಧ ಭಾವನೆ, ಪ್ರೇಮದ ಹೃದಯ ಶ್ರದ್ಧೆ, ಭಕ್ತಿ, ನಂಬಿಕೆಯಿಂದ ಸಿದ್ಧಲಿಂಗ, ಯಲ್ಲಾಲಿಂಗ, ಸಿದ್ಧರಾಮ, ಮುರುಘರಾಜ ಎಂಬ ನಾಮ ಸ್ಮರಣೆಯಿಂದ ರೊಟ್ಟಿಯನ್ನು ತಟ್ಟಿ ಶ್ರೀಮಠಕ್ಕೆ ತಂದು ಇಲ್ಲಿ ಬರುವ ಭಕ್ತರಿಗೆ ಉಣಬಡಿಸುವ ಭಕ್ತಿ ಮುಗಳಖೋಡ ಭಕ್ತರದು ಎಂದು ಡಾ. ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು ಹೇಳಿದರು.

ಅವರು ಪಟ್ಟಣದ ಶ್ರೀ ಯಲ್ಲಾಲಿಂಗೇಶ್ವರ 39ನೇ ಪುಣ್ಯ ಸ್ಮರಣೋತ್ಸವದ ಪ್ರವಚನದಲ್ಲಿ ಮಾತನಾಡಿ ಮುಗಳಖೋಡ ಹಾಗೂ ಸುತ್ತಮುತ್ತಲಿನ ಗ್ರಾಮಗಳಿಂದ ಬಂದು ಶ್ರೀಮಠಕ್ಕೆ ರೊಟ್ಟಿ ಬುತ್ತಿ ಅರ್ಪಿಸಿದ ಭಕ್ತರನ್ನು ಉದ್ದೇಶಿಸಿ ಪುಣ್ಯದ ಭೂಮಿ, ತಪಸ್ಸಿನ ಭೂಮಿ ಇಲ್ಲಿ ಬಂದ ಭಕ್ತರ ರೋಗ ರುಜಿನಗಳನ್ನು ಕಿತ್ತೊಗೆಯುವ ಶಕ್ತಿ ಶ್ರೀಮಠಕ್ಕಿದೆ. ಧರ್ಮದಿಂದ ನಡೆದುಕೊಂಡ ಭಕ್ತರ ಬಾಳು ಬಂಗಾರವಾಗಲಿದೆ ಎಂದು ಆಶೀರ್ವಚನ ನೀಡಿದರು.

ಪಟ್ಟಣದ ಸುತ್ತಮುತ್ತಲಿನ ಗ್ರಾಮಗಳಿಂದ ಸಾವಿರಾರು ಸಂಖ್ಯೆಯಲ್ಲಿ ತಾಯಂದಿರು ಮೆರವಣಿಗೆಯ ಮೂಲಕ ಪಟಾಕಿ ಸಿಡಿಸುತ್ತಾ ರೊಟ್ಟಿ ಬುತ್ತಿಯನ್ನು ಹೊತ್ತು ತಂದು ಶ್ರೀಮಠಕ್ಕೆ ಅರ್ಪಿಸಿದರು. ಭಕ್ತರು ಡಾ. ಶ್ರೀ ಮುರುಘರಾಜೇಂದ್ರ ಶ್ರೀಗಳಿಗೆ ನಾಣ್ಯದ ತುಲಾಭಾರ ಸಮರ್ಪಿಸಿದರು.

**ಕೋಳಿಗುಡ್ಡದಿಂದ ಮುಗಳಖೋಡ ಮಠಕ್ಕೆ ಭಕ್ತರ ಪಾದಯಾತ್ರೆ....**

ರವಿವಾರ ಬೆಳಿಗ್ಗೆ ಶ್ರೀ ಮುರುಘರಾಜೇಂದ್ರ ಮಹಾಸ್ವಾಮಿಗಳು ಓಂಕಾರ ಭಜನೆಗೆ ಚಾಲನೆ ನೀಡಿದರು. ನಂತರ ಕೋಳಿಗುಡ್ಡ ಶ್ರೀಮಠದಿಂದ ಶ್ರೀ ಯಲ್ಲಾಲಿಂಗ ಮಹಾಪ್ರಭುಗಳ ಪಲ್ಲಕ್ಕಿ ಹೊತ್ತು ಪಾದಯಾತ್ರೆಯ ಮೂಲಕ ಭಕ್ತ ಸಾಗರ ಮುಗಳಖೋಡ ಮಠಕ್ಕೆ ಹರಿದುಬಂದಿತು. ಬರುವ ದಾರಿಯುದ್ದಕ್ಕೂ ಭಕ್ತರು ಅಂಬಲಿ, ಹಾಲು, ಮಜ್ಜಿಗೆ, ಬಾಳೆಹಣ್ಣು ಸೇರಿದಂತೆ ತಂಪು ಪಾನೀಯಗಳನ್ನು ಪಾದಯಾತ್ರೆಯಲ್ಲಿ ಪಾಲ್ಗೊಂಡ ಭಕ್ತರಿಗೆ ನೀಡಿ ತಮ್ಮ ಭಕ್ತಿಯನ್ನು ಸಮರ್ಪಿಸಿದರು.

ಕಾರ್ಯಕ್ರಮವನ್ನು ನ್ಯಾಯವಾದಿ ಸೋಮು ಹೊರಟ್ಟಿ ನಿರೂಪಿಸಿ ವಂದಿಸಿದರು.

ಈ ಸಂದರ್ಭದಲ್ಲಿ ಶ್ರೀಮಠದ ಹಿರಿಯರು, ಕಾರ್ಯಕರ್ತರು, ಅಪ್ಪಾಜಿ ಸೆಕ್ಯೂರಿಟಿ ಫೋರ್ಸ್ ಸೇ-ರಿದಂತೆ ಸಾವಿರಾರು ಭಕ್ತರು ಉಪಸ್ಥಿತರಿದ್ದರು.

## ಸಂವಿಧಾನ ರಕ್ಷಣೆಗೆ, ದೇಶದ ಐಕ್ಯತೆಗೆ

## ನಾವು ಹೋರಾಟ ಮಾಡಬೇಕು : ಮಲ್ಲಿಕಾರ್ಜುನ ಖರ್ಗೆ



ಬೆಂಗಳೂರು : "ದೇಶದ ಸಂವಿಧಾನ ರಕ್ಷಣೆ ಹಾಗೂ ಐಕ್ಯತೆಗೆ ನಾವು ಹೋರಾಟ ಮಾಡಬೇಕು" ಎಂದು ಎಐಸಿಸಿ ಅಧ್ಯಕ್ಷ ಮಲ್ಲಿಕಾರ್ಜುನ ಖರ್ಗೆ ಕರೆ ನೀಡಿದರು.

76ನೇ ಗಣರಾಜ್ಯೋತ್ಸವ ದಿನಾಚರಣೆ ಅಂಗವಾಗಿ ಕೆಪಿಸಿಸಿ ಕಚೇರಿಯಲ್ಲಿ ಧ್ವಜಾರೋಹಣ ನೆರವೇರಿಸಿ ಬಳಿಕ ಮಾತನಾಡಿದ ಅವರು, ?ಸಂವಿಧಾನ ರಕ್ಷಣೆ ಹಾಗೂ ಸಂವಿಧಾನದ ಪ್ರಕಾರವಾಗಿ ನಡೆದುಕೊಳ್ಳುವುದು ಅತಿ ಮುಖ್ಯ. ಆದರೆ ಈಗಿರುವ ಕೇಂದ್ರ ಸರಕಾರ ಸಂವಿಧಾನದ ಎಲ್ಲಾ ಮೌಲ್ಯಗಳನ್ನು ಮೂಲೆಗುಂಪು ಮಾಡುತ್ತಿದೆ. ಇದ-ರಿಂದ ನಾಗರಿಕರಿಗೆ ಸಿಗಬೇಕಾದ ಮೂಲಭೂತ ಹಕ್ಕುಗಳು, ಅದರಲ್ಲೂ ಮಹಿಳೆಯರಿಗೆ ವಿಶೇಷವಾಗಿ ಸಿಗುವ ಸ್ವಾತಂತ್ರ್ಯವನ್ನು ಮೊಟಕುಗೊಳಿಸಲಾಗುತ್ತಿದೆ ಎಂದು ಅಸಮಾಧಾನ ವ್ಯಕ್ತಪಡಿಸಿದರು.

ದೇಶಕ್ಕೆ ಸ್ವಾತಂತ್ರ್ಯ ಹಾಗೂ ಸಂವಿಧಾನ ಸಿಕ್ಕ ನಂತರ ನಮಗೆ ವಿಶೇಷವಾದ ಸ್ಥಾನಮಾನ ಸಿಕ್ಕಿದೆ. ಇದು ಅನೇಕ-ರಿಗೆ ಗೊತ್ತಿಲ್ಲ. ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಪ್ರತಿಯೊಬ್ಬರ ಮನೆ ಬಾಗಿಲಿಗೆ ಹೋಗಿ ಮತ ಕೇಳಲಾಗುತ್ತಿದೆ. ಇದು ಕಾಂಗ್ರೆಸ್ ಪಕ್ಷದ ಕೊಡುಗೆ. ಬಾಬಾ ಸಾಹೇಬ್ ಅಂಬೇಡ್ಕರ್ ಹಾಗೂ ಪಂಡಿತ್ ಜವಹಾರ್ ಲಾಲ್ ನೆಹರು ಅವರ ಕೊಡುಗೆ. ಇವರ ಕೊಡುಗೆಯಿಂದ ನಾವು ಈ ದೇಶವನ್ನು ಸ್ವಾತಂತ್ರ್ಯವಾಗಿ ಉಳಿಸಿ, ದೇಶದ ಐಕ್ಯತೆಗಾಗಿ ಹೋರಾಟ ಮಾಡುತ್ತಿದ್ದೇವೆ. ಆದರೆ ದುಃಖದ ವಿಚಾರ ಎಂದರೆ, ಅಮಿತ್ ಶಾರಂತಹ ದೇಶದ ಪ್ರಮುಖ ನಾಯಕರು ಸಂವಿಧಾನವನ್ನು ಹಿಯ್ಯಾಳಿಸುತ್ತಿದ್ದಾರೆ. ಸಂವಿಧಾನ ರಚಿಸಿದವರ ಬಗ್ಗೆ ಟೀಕೆ ಮಾಡಿ ಅವರಿಗೆ ಅಗೌರವ ತೋರುತ್ತಿದ್ದಾರೆ? ಎಂದು ಬೇಸರ ವ್ಯಕ್ತಪಡಿಸಿದರು.ಮೋದಿ ಅವರು ತಮ್ಮ ಭಾಷಣದಲ್ಲಿ ದೇಶವನ್ನು ಆರ್ಥಿಕವಾಗಿ ಮೂರನೇ ಸ್ಥಾನಕ್ಕೆ ತರಲು ಶಕ್ತಿ ತುಂಬುತ್ತಿದ್ದೇನೆ ಎಂದು ಹೇಳಿದ್ದಾರೆ. ಆದರೆ ದೇಶ 5ನೇ ಸ್ಥಾನದಿಂದ ಮುಂದಕ್ಕೆ ಹೋಗಲು ಸಾಧ್ಯವಾಗುತ್ತಿಲ್ಲ. ಯುಪಿಎ ಸರಕಾರದ ಶ್ರಮದಿಂದ ದೇಶವನ್ನು ಆರ್ಥಿಕವಾಗಿ ನಾಲ್ಕನೇ ಸ್ಥಾನಕ್ಕೆ ತರಲಾಗಿತ್ತು. ಆದರೆ ಈಗಿನ ಸರಕಾರಕ್ಕೆ ನಾಲ್ಕನೇ ಸ್ಥಾನಕ್ಕೆ ತರಲೂ ಸಾಧ್ಯವಾಗುತ್ತಿಲ್ಲ. ಕೇಂದ್ರ ಸರಕಾರ ದೇಶದ ಪ್ರಜೆಗಳನ್ನು ಬಹಳ ಹೀನಾಯವಾಗಿ ನೋಡುತ್ತಿದೆ. ಅತಿ ಶ್ರೀಮಂತರು ಹಾಗೂ ಪ್ರಭಾವಿ ವ್ಯಕ್ತಿಗಳಿಗೆ ಸರಕಾರ ಹೆಚ್ಚಿನ ಸೌಲಭ್ಯ ನೀಡುತ್ತಿದೆ. ಬಡವರನ್ನು ಕಡೆಗಣಿಸುತ್ತಿದೆ. ನೆಹರೂ, ಇಂದಿರಾಗಾಂಧಿ, ರಾಜೀವ್ ಗಾಂಧಿ ಅವರು ದೇಶಕ್ಕೆ ಮಾಡಿರುವುದನ್ನು ಮೋದಿ ಅವರಾಗಲಿ, ಅವರ ಜತೆಗಿರುವವರಾಗಲಿ ಮಾಡುತ್ತಿಲ್ಲ. ಅದಕ್ಕಾಗಿ ನಾವು ಹೋರಾಟ ಮಾಡಬೇಕಾಗಿದೆ ಎಂದು ಹೇಳಿದರು.ನಾಳೆ ಅಂಬೇಡ್ಕರ್ ಅವರ ಜನ್ಮಸ್ಥಳದಲ್ಲಿ ಲಕ್ಷಾಂತರ ಜನರನ್ನು ಸೇರಿಸಿ ದೊಡ್ಡ ಸಭೆ ನಡೆಸುತ್ತಿದ್ದು, ನಾನು ಅದರಲ್ಲಿ ಭಾಗವಹಿಸುತ್ತಿದ್ದೇನೆ. ಮೋದಿ ಹಾಗೂ ಅಮಿತ್ ಶಾ ಅವರು ದೇಶಕ್ಕೆ ಮಾಡುತ್ತಿರುವ ತೊಂದರೆ, ದೇಶದ ಸ್ವಾತಂತ್ರ್ಯಕ್ಕೆ ಧಕ್ಕೆ ತರುತ್ತಿರುವುದರ ವಿರುದ್ಧ ಧ್ವನಿ ಎತ್ತಲಾಗುವುದು? ಎಂದು ತಿಳಿಸಿದರು.

## ದೇಶದೊಳಗಿನ ಸಂವಿಧಾನ ವಿರೋಧಿಗಳ ವಿರುದ್ಧ

## ಮತ್ತೊಂದು ಹೋರಾಟ ನಡೆಸಬೇಕಾಗಿದೆ: ಮುಖ್ಯಮಂತ್ರಿ

ಬೆಂಗಳೂರು: "ಸಂವಿಧಾನ ಜಾರಿಗೊಳಿಸಿ ಪ್ರಜಾಪ್ರಭುತ್ವ ರಾಷ್ಟ್ರ ಎಂದು ಘೋಷಣೆ ಮಾಡಿಕೊಂಡ 75 ವರ್ಷಗಳ ನಂತರವೂ ಸಂವಿಧಾನ ಮತ್ತು ಪ್ರಜಾಪ್ರಭುತ್ವವನ್ನು ಉಳಿಸಲು ಹೋರಾಟ ನಡೆಸಬೇಕಾದ ವಿಷಾದನೀಯ ಸ್ಥಿತಿಯಲ್ಲಿ ನಾವು ಗಣ-ರಾಜ್ಯೋತ್ಸವ ಆಚರಿಸುತ್ತಿದ್ದೇವೆ" ಎಂದು ಸಿಎಂ ಸಿದ್ದರಾಮಯ್ಯ ತಮ್ಮ ಗಣ-ರಾಜ್ಯೋತ್ಸವ ಸಂದೇಶದಲ್ಲಿ ಬೇಸರ ವ್ಯಕ್ತಪಡಿಸಿದ್ದಾರೆ.

"ಇದು ಗತವೈಭವದಲ್ಲಿ ಮೈಮರೆಯದೆ ವರ್ತಮಾನದ ವಾಸ್ತವಗಳಿಗೆ ಮುಖಾಮುಖಿಯಾಗುವ ಕಾಲ. ಕಾರ್ಯಾಂಗ, ಶಾಸಕಾಂಗ ಮತ್ತು ನ್ಯಾಯಾಂಗಗಳೆಂಬ ಸಂವಿಧಾನದ ಮೂರು ಮುಖ್ಯ ಆಧಾರ ಸ್ಥಂಭಗಳು ಭದ್ರವಾಗಿದ್ದು, ಆರೋಗ್ಯಕರವಾಗಿ ಕಾರ್ಯನಿರ್ವಹಿಸಿದರೆ ಮಾತ್ರ ಸಂವಿಧಾನದ ಪಾಲನೆಯಾಗುತ್ತಿದೆ ಮತ್ತು ಪ್ರಜಾಪ್ರಭುತ್ವ ಸುರಕ್ಷಿತವಾಗಿದೆ ಎಂದು ಅರ್ಥ" ಎಂದಿದ್ದಾರೆ.



"ಕಟುವಾದ ಸತ್ಯ ಏನೆಂದರೆ ಸರ್ವಾಧಿಕಾರದ ದಂಡದಡಿ ನಮ್ಮ ಕಾರ್ಯಾಂಗ ಕರ್ತವ್ಯಭ್ರಷ್ಟಗೊಳ್ಳುತ್ತಿದೆ, ಶಾಸಕಾಂಗವನ್ನು ಖರೀದಿಸಲಾಗುತ್ತಿದೆ ಮತ್ತು ನ್ಯಾಯಾಂಗಕ್ಕೆ ಬೆದರಿಕೆ ಒಡ್ಡಿ ನಿಯಂತ್ರಣದಲ್ಲಿ ಇಟ್ಟುಕೊಳ್ಳುವ ಷಡ್ಯಂತ್ರ ನಡೆಯುತ್ತಿದೆ. ಕಾರ್ಯಾಂಗ, ಶಾಸಕಾಂಗ ಮತ್ತು ನ್ಯಾಯಾಂಗಗಳೆಂಬ ಆಧಾರ ಸ್ಥಂಭಗಳು ದುರ್ಬಲಗೊಂಡು ಶಕ್ತಿಹೀನವಾದಾಗ ಸಂವಿಧಾನವೇ ಅಪ್ರಸ್ತುತವಾಗಿ ಪ್ರಜಾಪ್ರಭುತ್ವ ವ್ಯವಸ್ಥೆ ಬುಡಮೇಲಾಗುವ ಸಾಧ್ಯತೆಗಳಿವೆ" ಎಂದು ಆತಂಕ ವ್ಯಕ್ತಪಡಿಸಿದ್ದಾರೆ.

"ಇಂತಹದ್ದೊಂದು ಅಪಾಯದ ಸ್ಥಿತಿಯಲ್ಲಿ ಭಾರತ ಇಂದು ನಿಂತಿದೆ. ಪ್ರಜಾಪ್ರಭುತ್ವವನ್ನು ಉಳಿಸುವ ದೊಡ್ಡ ಜವಾಬ್ದಾರಿ ಪ್ರತಿಯೊಬ್ಬ ಪ್ರಜೆಯ ಹೆಗಲ ಮೇಲಿದೆ. ಜಾತಿ, ಮತ, ಪಂಥ, ಪ್ರದೇಶದ ಭೇದಗಳನ್ನು ಮರೆತು ಇಡೀ ದೇಶ ಒಂದಾಗಿ ಹೊರಗಿನ ಶತ್ರುಗಳನ್ನು ಹೊಡೆದೋಡಿಸಲು ಹೇಗೆ ಸ್ವಾತಂತ್ರ್ಯ ಹೋರಾಟ ನಡೆಸಲಾಯಿತೋ, ಅಂತಹದ್ದೇ ಒಂದು ಹೋರಾಟವನ್ನು ದೇಶದೊಳಗಿನ ಸಂವಿಧಾನ ವಿರೋಧಿ ಶತ್ರುಗಳ ವಿರುದ್ಧ ನಡೆಸಬೇಕಾಗಿದೆ. ಇದಕ್ಕಾಗಿ ಎರಡನೇ ಸ್ವಾತಂತ್ರ್ಯ ಹೋರಾಟ ನಡೆಯದೆ ಹೋದರೆ ಮುಂದಿನ ಪೀಳಿಗೆಗೆ ಬದುಕುಳಿಯಲು ಪ್ರಜಾಪ್ರಭುತ್ವ ಇರುವುದಿಲ್ಲ" ಎಂದಿದ್ದಾರೆ. "ಇದೊಂದು ಜೀವನ್ಮರಣದ ಪ್ರಶ್ನೆಯಾಗಿದ್ದು, ಗಣ-ರಾಜ್ಯೋತ್ಸವದ ದಿನವಾದ ಇಂದು ನಾವೆಲ್ಲರೂ ಒಗ್ಗೂಡಿ ದೃಢಚಿತ್ತದಿಂದ ಸಂವಿಧಾನವನ್ನು ಉಳಿಸುವ ಸಂಕಲ್ಪ ಮಾಡಬೇಕಾಗಿದೆ. ಪ್ರಜಾಪ್ರಭುತ್ವ ಮತ್ತು ಸಂವಿಧಾನವನ್ನು ಉಳಿಸುವ ಮೂಲಕ ನಮ್ಮ ಭಾರತವನ್ನು ರಕ್ಷಿಸುವ ಹೋರಾಟಕ್ಕೆ ನಮಗಿರುವ ಅಸ್ತ್ರಗಳೆಂದರೆ ಗಾಂಧೀಜಿ ಮತ್ತು ಅಂಬೇಡ್ಕರ್ ಅವರ ಚಿಂತನೆಗಳು" ಎಂದು ತಿಳಿಸಿದ್ದಾರೆ. "ಈ ಹಿನ್ನೆಲೆಯಲ್ಲಿ ಸ್ವಾತಂತ್ರ್ಯ ಹೋರಾಟದ ನೇತೃತ್ವ ವಹಿಸಿದ್ದ ನಮ್ಮ ಕಾಂಗ್ರೆಸ್ ಪಕ್ಷ ಜೈ ಬಾಪು, ಜೈ ಭೀಮ್ ಮತ್ತು ಜೈ ಸಂವಿಧಾನ ಎಂಬ ಅಭಿಯಾನ ಪ್ರಾರಂಭಿಸಿದೆ. ನಾಡ ಬಾಂಧವರೆಲ್ಲರೂ ಪಕ್ಷ, ಪಂಥ, ಜಾತಿ-ಧರ್ಮಗಳ ಎಲ್ಲೆಯನ್ನು ಮೀರಿ ಈ ಅಭಿಯಾನದಲ್ಲಿ ಕೈ ಜೋಡಿಸಬೇಕೆಂದು" ಮನವಿ ಮಾಡಿದ್ದಾರೆ.

## ಗಣರಾಜ್ಯೋತ್ಸವ : ಕಲ್ಲಿನಲ್ಲಿ ಅರಳಿದ ಲಕ್ಕುಂಡಿ ಶಿಲ್ಪಕಲೆ

## ಕರ್ತವ್ಯ ಪಥದಲ್ಲಿ ನೆರೆದವರನ್ನು ಮಂತ್ರಮುಗ್ಧರನ್ನಾಗಿಸಿದ ರಾಜ್ಯದ ಸ್ತಬ್ಧಚಿತ್ರ

ನವದೆಹಲಿ, ರಾಷ್ಟ್ರದ ರಾಜಧಾನಿ ನವದೆಹಲಿಯ ಕರ್ತವ್ಯಪಥದಲ್ಲಿಂದು ನಡೆದ ಗಣರಾಜ್ಯೋತ್ಸ ಸ್ತುಬ್ಧಚಿತ್ರ ಪಥಸಂಚಲನದಲ್ಲಿ ಸರ್ವಜನಾಂಗದ ಶಾಂತಿಯ ತೋಟದಂತೆ ಕಂಗೊಳಿಸುತ್ತಿರುವ 'ಲಕ್ಕುಂಡಿ: ಶಿಲ್ಪಕಲೆಯ ತೊಟ್ಟಿಲು ರಾಜ್ಯದ ಸ್ತುಬ್ಧಚಿತ್ರವು ಅಲ್ಲಿ ನೆರೆದ ಜನಸ್ತೋಮವನ್ನು ಮಂತ್ರಮುಗ್ಧರನ್ನಾಗಿಸಿದ್ದಲ್ಲದೇ, ಚಪ್ಪಾಳೆಯ ಕರತಾಡನದ ಮೂಲಕ ಅದ್ಧೂರಿ ಸ್ವಾಗತ ದೊರೆಯಿತು. ರಾಜಧಾನಿಯ ಕರ್ತವ್ಯಪಥದಲ್ಲಿ ರಾಜ್ಯದ ಸ್ತುಬ್ಧಚಿತ್ರ ಸಾಗುವುದರೊಂದಿಗೆ ಕರ್ನಾಟಕ ರಾಜ್ಯದ ಹಿರಿಮೆ, ಸರ್ವಧರ್ಮ ಸಮನ್ವಯ. ಶಾಂತಿ, ಸಹಬಾಳ್ವೆಯನ್ನು ಪ್ರತಿಪಾದಿಸಿತು.

ಕರ್ನಾಟಕ ರಾಜ್ಯದ ಪರವಾಗಿ ಗಣರಾಜ್ಯೋತ್ಸವದ ಪಥಸಂಚಲನದಲ್ಲಿ ಪಾಲ್ಗೊಳ್ಳುವ ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯು ಪ್ರತಿ ವರ್ಷ ತನ್ನ ವೈಶಿಷ್ಟಪೂರ್ಣ ಸ್ತುಬ್ಧಚಿತ್ರಗಳ ಮೂಲಕವೇ ದೇಶದ ಗಮನ ಸೆಳೆಯುತ್ತಿದೆ. ನಮ್ಮ ರಾಜ್ಯವು ವರ್ಷದಿಂದ ವರ್ಷಕ್ಕೆ ಹೊಸ ಮೈಲಿಗಲ್ಲನ್ನು ಸ್ಥಾಪಿಸುತ್ತಲೇ ಸಾಗಿದ್ದು, ಈ ಬಾರಿ ಲಕ್ಕುಂಡಿಯ ಶಿಲ್ಪಕಲೆಯಿಂದ ಕೂಡಿರುವ ಐತಿಹಾಸಿಕ ದೇವಾಲಯಗಳು ಎಲ್ಲರನ್ನು ಮಂತ್ರಮುಗ್ಧರನ್ನಾಗಿಸಿತು.

ನಿಗದಿತ ರೂಪು ರೇಷೆಗಳಂತೆ ಈ ಸ್ತುಬ್ಧಚಿತ್ರ ದಿನಗಳ ಲೆಕ್ಕದಲ್ಲಿ ಮೈದಳೆದಿದೆ. ಕಡಿಮೆ ಅವಧಿಯಲ್ಲಿ ಅತ್ಯಂತ ಅಚ್ಚುಕಟ್ಟಾಗಿ ಸ್ತುಬ್ಧಚಿತ್ರ ಕಣ್ಣಿಗೆ ಕಟ್ಟುವ ರೀತಿಯಲ್ಲಿ ಮೂಡಿ ಬಂದಿದ್ದು ವಿಶೇಷ ಎನಿಸಿದೆ.

ಅಹಿಂಸಾವಾದಿಯ ನೆಲೆಬೀಡು,ಶಿಲ್ಪಕಲೆಯ ತೊಟ್ಟಿಲಾದ ಲಕ್ಕುಂಡಿಯಲ್ಲಿ ಶೈವ, ಜೈನ ಮತ್ತು ವೈಷ್ಣವ ದೇವಾಲಯಗಳಿವೆ. ಕಲಾತ್ಮಕತೆಯಿಂದ ಕಂಗೊಳಿಸುವ ಇಲ್ಲಿನ ದೇವಾಲಯಗಳು ಸ್ತುಬ್ಧಚಿತ್ರದಲ್ಲಿ ಅವುಗಳ ಪಡಿಯಚ್ಚಿನಂತೆ ಮೂಡಿಬಂದಿದ್ದು, ದೇವಾಲಯವೇ ಮರುಜೀವ ತಳೆದಂತಿದೆ. ರಾಜ್ಯವು ಪ್ರಸ್ತುತ ಪಡಿಸುತ್ತಿರುವ ಈ ಸ್ತುಬ್ಧಚಿತ್ರವು ಎಲ್ಲರ ಮೆಚ್ಚುಗೆಗೆ ಪಾತ್ರವಾಯಿತು.

ಸ್ತುಬ್ಧಚಿತ್ರದಲ್ಲಿ ಲಕ್ಕುಂಡಿಯ ದೇವಾಲಯಗಳು ಕರ್ನಾಟಕದ ಶ್ರೀಮಂತ ಸಾಂಸ್ಕೃತಿಕ ಪರಂಪರೆಯನ್ನು ಪ್ರತಿಬಿಂಬಿಸಿತು.

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆಯ ಆಯುಕ್ತರಾದ ಹೇಮಂತ್ ನಿಂಬಾಳ್ಕರ್ ಅವರ ಉಸ್ತುವಾರಿಯಲ್ಲಿ

ಅಂತರರಾಷ್ಟ್ರೀಯ ಖ್ಯಾತಿಯ ಕಲಾ ನಿರ್ದೇಶಕ



ಶಶಿಧರ ಅಡಪ ಅವರು ಕಲಾ ನಿರ್ದೇಶನ ಮಾಡಿದ್ದಾರೆ. ಸಂಗೀತ ನಿರ್ದೇಶಕ ಪ್ರವೀಣ್ ಡಿ.ರಾವ್ ಅವರು ಕನ್ನಡ ಸಾಹಿತ್ಯ ಇರುವ ಸುಮಧುರವಾದ ಸಂಗೀತ ಕರ್ತವ್ಯಪಥದಲ್ಲಿ ನಿನಾದಿಸಿ ಕೇಳುಗರ ಮನಸೂರಗೊಂಡಿತು. ಮೈಸೂರು,ಬೆಂಗಳೂರು,ಗದಗ ಮತ್ತು ಧಾರವಾಡದಿಂದ ಆಗಮಿಸಿದ 18 ಜನ ಕಲಾವಿದರಿರುವ ಸ್ತುಬ್ಧಚಿತ್ರದ ಇಕ್ಕೆಲಗಳಲ್ಲಿ ತಲಾ ನಾಲ್ಕು ಮಂದಿ ಮಹಿಳೆಯರು ಮತ್ತು ಪುರುಷರು ಜಗ್ಗಲಿಗೆ ಬಾರಿಸುತ್ತಾ,ಸಾಂಪ್ರದಾಯಿಕ ಉಡುಪಿನಲ್ಲಿ ಕರ್ತವ್ಯಪಥದಲ್ಲಿ ಕಂಗೊಳಿಸಿದರು. ಇನ್ನುಳಿದ 10 ಜನ ಕಲಾವಿದರು ಸ್ತುಬ್ಧಚಿತ್ರದ ಮೇಲುಭಾಗದಲ್ಲಿ ಪ್ರವಾಸಿಗರಾಗಿ ಗಮನಸೆಳೆದರು.

ಕರ್ನಾಟಕದ ಗದಗ ಜಿಲ್ಲೆಯಲ್ಲಿರುವ ಲಕ್ಕುಂಡಿಯನ್ನು ಅದರ ಅದ್ಭುತ ಕಲ್ಲಿನ ವಾಸ್ತುಶಿಲ್ಪಕ್ಕಾಗಿ 'ಶಿಲ್ಪಕಲೆಯ ತೊಟ್ಟಿಲು' ಎಂದು ಕರೆಯಲಾಗುತ್ತದೆ. ಇಲ್ಲಿನ ಸುಂದರವಾದ ದೇವಾಲಯಗಳು,ಮೆಟ್ಟಿಲು ಬಾವಿಗಳು ಮತ್ತು ಚಾಲುಕ್ಯ ರಾಜವಂಶದ ಶಾಸನಗಳಿಗೆ ನೆಲೆಯಾಗಿದೆ. ಸಾಂಸ್ಕೃತಿಕ ಶಕ್ತಿ ಕೇಂದ್ರವಾಗಿರುವುದರ ಜೊತೆಗೆ, 10 ರಿಂದ 12ನೇ ಶತಮಾನದ ನಡುವೆ ಲಕ್ಕುಂಡಿ ಒಂದು ದೊಡ್ಡ ವಾಣಿಜ್ಯ ಕೇಂದ್ರವಾಗಿತ್ತು. ಈ ನಗರವು ಹಲವಾರು ರಾಜವಂಶಗಳಿಂದ ಆಳಲ್ಪಟ್ಟಿತ್ತಾದರೂ ಅವುಗಳಲ್ಲಿ ಅತ್ಯಂತ ಪ್ರಮುಖವಾದದ್ದು ಚಾಲುಕ್ಯರ ರಾಜವಂಶ.

ಲಕ್ಕುಂಡಿಯು ಪ್ರಾಚೀನಾನ್ವೇಷಕರು ಮತ್ತು ವಾಸ್ತುಶಿಲ್ಪ ಪ್ರಿಯರ ಸ್ವರ್ಗವಾಗಿದೆ. ಇದು 50 ದೇವಾಲಯಗಳನ್ನು ಹೊಂದಿದ್ದು, ಅವುಗಳಲ್ಲಿ ಹೆಚ್ಚಿನವು ಶಿವನಿಗೆ ಸಮರ್ಪಿತವಾಗಿವೆ; 101 ಮೆಟ್ಟಿಲು ಬಾವಿಗಳು (ಕಲ್ಯಾಣಿ / ಪುಷ್ಕರಣಿ); ಮತ್ತು 29 ಶಾಸನಗಳು ಇಲ್ಲಿವೆ. ಇವುಗಳು ಕಲ್ಯಾಣಿ ಚಾಲುಕ್ಯರ ಕಲೆ, ಸಂಸ್ಕೃತಿ ಮತ್ತು ವಾಸ್ತುಶಿಲ್ಪದ ಶ್ರೇಷ್ಠತೆಯ ಸಂಕೇತವಾಗಿದೆ. ಭಾರತೀಯ ಪುರಾತತ್ವ ಸರ್ವೇಕ್ಷಣಾ ಇಲಾಖೆ ನಿರ್ವಹಿಸುತ್ತಿರುವ ವಸ್ತುಸಂಗ್ರಹಾಲಯವು ಲಕ್ಕುಂಡಿಯ ಶ್ರೀಮಂತ ಶಿಲ್ಪಕಲೆಯನ್ನು ಪ್ರದರ್ಶಿಸಿತು.

2022ರ ಇಲಾಖೆಯು ಪ್ರದರ್ಶಿಸಿದ್ದ ಸಾಂಪ್ರದಾಯಿಕ ಕಸೂತಿ ತೊಟ್ಟಿಲುಗೆ ದ್ವಿತೀಯ ಪ್ರಶಸ್ತಿ, 2015ರಲ್ಲಿ ರಾಜ್ಯವು ಚನ್ನಪಟ್ಟದ ಗೊಂಬೆಗಳಿಗೆ ತೃತೀಯ, 2012ರಲ್ಲಿ ದಕ್ಷಿಣ ಕನ್ನಡ ಭೂತಾರಾಧನೆಗೆ ತೃತೀಯ, 2011ರಲ್ಲಿ ಬೀದರ್‌ನ ಪಾರಂಪರಿಕ ಕಲೆಯಾದ 'ಬಿದರಿ' ಸ್ತುಬ್ಧಚಿತ್ರಕ್ಕೆ ದ್ವಿತೀಯ ಮತ್ತು 2008ರಲ್ಲಿ ಹೋಯ್ಸಳ ವಾಸ್ತುಶಿಲ್ಪಕ್ಕೆ ದ್ವಿತೀಯ ಪ್ರಶಸ್ತಿ ಸಂದಿತ್ತು.

2005ರಲ್ಲಿ ವೈರಾಗ್ಯ ಮೂರ್ತಿ ಬಾಹುಬಲಿಯ ಮಹಾಮಸ್ತಕಾಭಿ??ಕದ ಸ್ತುಬ್ಧಚಿತ್ರಕ್ಕೆ ಪ್ರಥಮ ಪ್ರಶಸ್ತಿ ದೊರೆತಿತ್ತು. 2008ರಲ್ಲಿ ಹೊಯ್ಸಳ ಕಲೆಯ ಸ್ತುಬ್ಧಚಿತ್ರವು ದ್ವಿತೀಯ ಪ್ರಶಸ್ತಿಯ ಜೊತೆಗೆ ಅತ್ಯುತ್ತಮ ನಿರೂಪಣೆ ಮತ್ತು ಅತ್ಯುತ್ತಮ ಫ್ಯಾಬ್ರಿಕೇಷನ್‌ಗಾಗಿ ಪ್ರಶಸ್ತಿ ಲಭಿಸಿತ್ತು. ಒಂದೇ ಸ್ತುಬ್ಧಚಿತ್ರಕ್ಕಾಗಿ ಮೂರು ಪ್ರಶಸ್ತಿಗಳನ್ನು ಪಡೆದಂತಹ ಅಪರೂಪದ ಸಾಧನೆಯನ್ನು ನಮ್ಮ ರಾಜ್ಯವು ಮಾಡಿದೆ ಎನ್ನುವುದು ಹೆಮ್ಮೆಯ ಸಂಗತಿಯಾಗಿದೆ.

# ಜ್ಯೋತಿರ್ಲಿಂಗ ಹೊನಕಟ್ಟಿಗೆ ಜಾನಪದ ಗಾರುಡಿಗ ಪ್ರಶಸ್ತಿ



ತಾಳಿಕೋಟೆ, ಬೆಂಗಳೂರಿನಲ್ಲಿ ಪೊಲೀಸ್ ಇಲಾಖೆಯ ಸಿ.ಪಿ.ಐ. ಡಾ.ಜ್ಯೋತಿರ್ಲಿಂಗ ಹೊನಕಟ್ಟಿ ಅವರಿಗೆ ರಾಜ್ಯದ ಪ್ರತಿಷ್ಠಿತ ಮಠವಾದ ಮುಗಳಖೋಡದ ಜಿಡಗಾ ಮಠದ ವತಿಯಿಂದ ಜಾನಪದ ಗಾರುಡಿಗ ಪ್ರಶಸ್ತಿ ನೀಡಿ ಗೌರವಿಸಲಾಗಿದೆ.

ಜ್ಯೋತಿರ್ಲಿಂಗ ಹೊನಕಟ್ಟಿ ಅವರು ಪೊಲೀಸ್ ಇಲಾಖೆಯಲ್ಲಿ ಸೇವೆ ಸಲ್ಲಿಸುತ್ತಿದ್ದರೂ ಕೂಡಾ ಜಾನಪದ ಸಾಹಿತ್ಯದ ಮೇಲಿನ ಅಭಿರುಚಿ ಅಲ್ಲದೇ ಅವರು ರಾಜ್ಯದ ಮೂಲೆ ಮೂಲೆಗಳಲ್ಲಿಯೂ ಜಾನಪದ ಸಾಹಿತ್ಯ ಉಳಿವಿಗಾಗಿ ಸಲ್ಲಿಸಿದ ಸೇವೆಯನ್ನು ಗುರುತಿಸಿ ಮುಗಳಖೋಡ ಜಿಡಗಾ ಮಠದ ಪೀಠಾಧಿಪತಿ ಪ.ಪೂ.ಶ್ರೀ ಷಡಕ್ಷರಿ ಶಿವಯೋಗಿ ಡಾ.ಮುರುಘರಾಜೇಂದ್ರ ಮಹಾಸ್ವಾಮಿಗಳು ಶ್ರೀಮಠದ ಸದ್ಗುರು ಶ್ರೀ ಯಲ್ಲಾಲಿಂಗ ಮಹಾಸ್ವಾಮಿಗಳವರ 39ನೇ ಪುಣ್ಯಾರಾಧನೆ ಸಮಾರಂಭದಲ್ಲಿ ಈ ಪ್ರಶಸ್ತಿಯನ್ನು ನೀಡಿ ಗೌರವಿಸಿದ್ದಾರೆ.

# ಮತದಾರರು ನೋಟು ಪಡೆದು ಓಟು ಹಾಕಿದರೆ ಭ್ರಷ್ಟಾಚಾರದ ಘಾಟು: ಎಫ್.ಬಿ.ತಳವಾರ




ಮಹಾಲಿಂಗಪುರ: ಮತದಾರರು ತಮ್ಮ ಪವಿತ್ರ ಮತ ಮಾರಿಕೊಳ್ಳಬಾರದು. ಮತದಾರರು ನೋಟು ಪಡೆದು ಓಟು ಹಾಕಿದರೆ ಭ್ರಷ್ಟಾಚಾರದ ಘಾಟು ಎದುರಿಸಬೇಕಾಗುತ್ತದೆ ಎಂದು ಬನಹಟ್ಟಿಯ ಎಸ್‌ಆರ್‌ಎ ಪಪೂ ಕಾಲೇಜಿನ ಉಪನ್ಯಾಸಕ ಎಫ್.ಬಿ.ತಳವಾರ ಹೇಳಿದರು.

ಸ್ಥಳೀಯ ಕೆಎಲ್‌ಇ ಸಂಸ್ಥೆಯ ಎಸ್‌ಸಿಪಿ ಪದವಿ ಕಾಲೇಜಿನಲ್ಲಿ ರಾಜ್ಯಶಾಸ್ತ್ರ ವಿಭಾಗ, ಎನ್‌ಎಸ್‌ಎಸ್ ಘಟಕ ಹಾಗೂ ಯುಥ್ ರೆಡ್ ಕ್ರಾಸ್ ವಿಂಗ್ ಸಹಯೋಗದಲ್ಲಿ ನಡೆದ ಮತದಾನ ಜಾಗೃತಿ ಕಾರ್ಯಕ್ರಮದಲ್ಲಿ ಮಾತನಾಡಿದರು.

ಜನಸಂಖ್ಯೆ ಹೆಚ್ಚಾದರೂ ಮತದಾರರ ಸಂಖ್ಯೆಯಾಗಲೀ ಮತದಾನದ ಪ್ರಮಾಣವಾಗಲೀ ಹೆಚ್ಚಾಗದೇ ಇರುವುದು ವಿಷಾದಕರ ಸಂಗತಿ. ಆದ್ದರಿಂದ ಮತದಾನ ಜಾಗೃತಿ ಮತ್ತಷ್ಟು ವ್ಯಾಪಕವಾಗಬೇಕು ಎಂದರು.

ರಾಜ್ಯಶಾಸ್ತ್ರ ಪ್ರಾಧ್ಯಾಪಕ ಎ.ಎಂ.ಉಗಾರೆ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು. ಟಿ.ಡಿ.ಡಂಗಿ, ಪಿ.ಎಂ.ಗೌಳಿ, ಆರ್.ಎಸ್.ಪೂಜಾರಿ, ಐ.ಸಿ.ಶಿರೋಳ, ಡಿ.ಎಂ.ಹೊಸಪೇಟಿ, ಸಂಗೀತಾ ತೇಲಿ, ರೇಖಾ ಒಡೆಯರ, ಬಸವರಾಜ ಪಾಗದ ಮತ್ತಿತರರು ಇದ್ದರು.



**ಗೋಕಾಕ: ನಗರದ ಲಕ್ಷ್ಮೀ ಎಜುಕೇಶನ್ ಟ್ರಸ್ಟ್ ನ ವಿವಿಧ ಅಂಗ ಸಂಸ್ಥೆಗಳ ಸಂಯುಕ್ತಾಶ್ರಯದಲ್ಲಿ ಹಮ್ಮಿಕೊಂಡಿ 76ನೇ ಗಣರಾಜ್ಯೋತ್ಸವದ ಧ್ವಜಾರೋಹಣವನ್ನು ಸಂಸ್ಥೆಯ ಪದವಿ ಮಹಾವಿದ್ಯಾಲಯದ ಪ್ರಾಚಾರ್ಯ ಐ.ಎಸ್.ಪವಾರ ನೇರವೇರಿಸಿದರು. ವ್ಯವಸ್ಥಾಪಕ ನಿರ್ದೇಶಕ ಸನತ್ ಜಾರಕಿಹೊಳಿ, ಆಡಳಿತಾಧಿಕಾರಿ ಬಿ.ಕೆ.ಕುಲಕರ್ಣಿ, ಅಂಗ ಸಂಸ್ಥೆಗಳ ಮುಖ್ಯಸ್ಥರುಗಳಾದ ಡಾ.ಎ.ಬಿ.ಪಾಟೀಲ, ಡಾ.ಜಿ.ಆರ್.ನಿಡೋಣಿ, ಅರುಣ ಪೂಜೇರ, ಎಚ್.ಎಸ್.ಅಡಿಬಟ್ಟಿ, ಎ.ಎಂ.ಸರಕಾವಸ, ಎಚ್.ಬಿ.ಪಾಗನಿಸ್, ಪಿ.ವ್ಹಿ. ಚಚಡಿ ಇದ್ದರು.**

# ಗುಣಮುಖರಾಗಿ ಆಸ್ಪತ್ರೆಯಿಂದ ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಡಿಸ್ಚಾರ್ಜ್

ಬೆಳಗಾವಿ: ರಸ್ತೆ ಅಪಘಾತದಿಂದಾಗಿ ಕಳೆದ 13 ದಿನಗಳಿಂದ ವಿಜಯ ಆಸ್ಪತ್ರೆಯಲ್ಲಿ ಚಿಕಿತ್ಸೆ ಪಡೆಯುತ್ತಿದ್ದ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ ಸಚಿವರಾದ ಲಕ್ಷ್ಮೀ ಹೆಬ್ಬಾಳಕರ್ ಅವರನ್ನು ಇಂದು ಡಿಸ್ಚಾರ್ಜ್ ಮಾಡಲಾಯಿತು.

ಆಸ್ಪತ್ರೆ ಬಳಿ ಸುದ್ದಿಗಾರರೊಂದಿಗೆ ಮಾತನಾಡಿದ ಸಚಿವರು, ರಸ್ತೆ ಅಪಘಾತದಲ್ಲಿ ಬದುಕಿ ಬಂದಿದ್ದು ನನಗೆ ಪುನರ್ಜನ್ಮ ಬಂದಂತಾಗಿದೆ. ವೈದ್ಯರು ಮೂರು ವಾರಗಳ ಕಾಲ ವಿಶ್ರಾಂತಿ ಪಡೆಯಲು ಸೂಚಿಸಿದ್ದಾರೆ. ಆದರೆ, ಸಚಿವೆಯಾಗಿ ನನಗೂ ಜವಾಬ್ದಾರಿ ಇದೆ. ಮಾರ್ಚ್ ತಿಂಗಳಲ್ಲಿ ಬಜೆಟ್ ಕೂಡ ಇದೆ. ಮಹಿಳಾ ಮತ್ತು ಮಕ್ಕಳ ಇಲಾಖೆ ಕೂಡ ಚನ್ನಾಗಿ ಕಾರ್ಯನಿರ್ವಹಿಸುತ್ತಿದೆ. ಮೂರು ವಾರ ವಿಶ್ರಾಂತಿ ಹೇಳಿದ್ದಾರೆ. ಆದಷ್ಟು ಬೇಗ ಸಾರ್ವಜನಿಕ ಜೀವನಕ್ಕೆ ಮರಳುತ್ತೇನೆ ಎಂದು ಸಚಿವರು ತಿಳಿಸಿದರು.

**ವೈದ್ಯರಿಗೆ ಕೃತಜ್ಞತೆ ಸಲ್ಲಿಸಿದ ಸಚಿವರು**

ಕಳೆದ 13 ದಿನಗಳಿಂದ ಚಿಕಿತ್ಸೆ ನೀಡಿದ ವಿಜಯ ಆಸ್ಪತ್ರೆ ವೈದ್ಯ ಡಾ. ರವಿ ಪಾಟೀಲ್ ಅವರಿಗೆ ಸಚಿವರು ಕೃತಜ್ಞತೆ ಸಲ್ಲಿಸಿದರು. ಕಳೆದ 13 ದಿನಗಳು ನನಗೆ ಆಸ್ಪತ್ರೆಗಿಂತ ಮನೆಯಂತೆ ಭಾಸವಾಯಿತು. ನನ್ನ ಕುಟುಂಬಕ್ಕಿಂತ ಹೆಚ್ಚಾಗಿ ನನ್ನನ್ನು ನೋಡಿಕೊಂಡರು. ನನ್ನ ಕಷ್ಟದ ಸಮಯದಲ್ಲಿ, ವೈದ್ಯರು ನನ್ನ ಪಕ್ಕದಲ್ಲಿ ನಿಂತು, ಬೆಂಬಲ ಮತ್ತು ಕಾಳಜಿಯನ್ನು ತೋರಿದರು. ವೈದ್ಯರ ದಯೆ, ತಾಳ್ಮೆ ಮತ್ತು ಸಮರ್ಪಣೆ ಹೃದಯಸ್ಪರ್ಶಿಯಾಗಿತ್ತು.



ಧೈರ್ಯ ಕಳೆದುಕೊಳ್ಳದಂತೆ ವೈದ್ಯರು ಹಾಗೂ ಆಸ್ಪತ್ರೆಯ ಸಿಬ್ಬಂದಿ ನನ್ನ ಜೊತೆ ನಿಂತರು ಎಂದು ಸಚಿವರು ಹೇಳಿದರು.

ನನ್ನ ಪುಣ್ಯವೇನೋ ಗೊತ್ತಿಲ್ಲ, ಇಲ್ಲಿನ ವೈದ್ಯರ ಕಾಳಜಿಯಿಂದ ಬೇಗ ಗುಣಮುಖ ಆದೆ. ಅಪಘಾತದ ಭಾವನೆ, ಆತಂಕ ಬಾರದಂತೆ ನೋಡಿಕೊಂಡರು, ಧೈರ್ಯ ತುಂಬಿದರು. ತಾಯಿ, ತಮ್ಮ, ಸೊಸೆ, ಮಗ ಕುಟುಂಬ ಸದಸ್ಯರಿಗೆ ಧನ್ಯವಾದ ಹೇಳುವೆ ಎಂದರು.

**ಕಾರ್ಯಕರ್ತರು, ಕ್ಷೇತ್ರದ ಜನರಿಗೆ ಋಣಿ**

ಆಸ್ಪತ್ರೆಯಲ್ಲಿದ್ದ ವೇಳೆ ನನ್ನ ಚೇತರಿಕೆಗೆ ಹಾರೈಸಿದ ನಾಡಿನ ಮಠಾಧೀಶರು, ಕಾರ್ಯಕರ್ತರು, ಬೆಳಗಾವಿ ಗ್ರಾಮೀಣ ಕ್ಷೇತ್ರದ ಜನತೆ, ಬೆಳಗಾವಿ ಜಿಲ್ಲೆಯ ಜನರಿಗೆ ಋಣಿಯಾಗಿದ್ದೇನೆ. ಪೂಜೆ ಪುನಸ್ಕಾರಗಳನ್ನು ಮಾಡುವ ಮೂಲಕ ನನ್ನ ಚೇತರಿಕೆಗೆ ಹಾರೈಸಿದರು. ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್, ಪ್ರಧಾನ ಕಾರ್ಯದರ್ಶಿ ರಣದೀಪ್ ಸುರ್ಜೆವಾಲಾ, ಸಚಿವ ಸಂಪುಟದ ಸಹೋದ್ಯೋಗಿಗಳು ಸೇರಿದಂತೆ ಅಪಾರ ಸಂಖ್ಯೆಯಲ್ಲಿ ಕಾಂಗ್ರೆಸ್ ನಾಯಕರು ನನ್ನನ್ನು ಭೇಟಿಯಾಗಿ ಧೈರ್ಯ ತುಂಬಿದರು. ಅವರಿಗೆ ಎಂದಿಗೂ ಕೃತಜ್ಞಳಾಗಿರುತ್ತೇನೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ತಿಳಿಸಿದರು.

**ಕಲ್ಲು ಹೃದಯದವರ ಆರೋಪಕ್ಕೆ ಉತ್ತರವಿಲ್ಲ**

ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಅವರು ಪ್ರಯಾಣಿಸುತ್ತಿದ್ದ ಕಾರಿನಲ್ಲಿ ಹಣವಿತ್ತು ಎಂಬ ಬಿಜೆಪಿ ನಾಯಕರ ಆರೋಪಕ್ಕೆ ಪ್ರತಿಕ್ರಿಯಿಸಿದ ಸಚಿವರು, ಕಲ್ಲು ಹೃದಯದವರು, ಹೃದಯ ಇಲ್ಲದವರಿಗೆ ಉತ್ತರ ಕೊಡಲ್ಲ. ಸಾವಿನಲ್ಲೂ ರಾಜಕೀಯ ಮಾಡುವವರಿಗೆ ಉತ್ತರ ಕೊಡುವ ಅವಶ್ಯಕತೆ ಇಲ್ಲ ಎಂದರು. ಸಕ್ರಾಂತಿ ದಿನ ಬೆಳಗ್ಗೆ 7 ಗಂಟೆಯೊಳಗೇ ಮಲಪ್ರಭಾ ನದಿಯಲ್ಲಿ ಪುಣ್ಯಸ್ನಾನ ಮಾಡೋಣ ಅಂತ ಜನವರಿ 13ರಂದು ರಾತ್ರಿ 10.30ರ ವೇಳೆಗೆ ನಿರ್ಧಾರ ಮಾಡಿ ಬೆಂಗಳೂರಿನಿಂದ ಹೊರಡಲಾಯಿತು. ಬಳಿಕ ಕುಟುಂಬ ಸದಸ್ಯರೊಂದಿಗೆ ಹಿರೇಹಟ್ಟಿಹೊಳಿಗೆ ಹೋಗಲು ತೀರ್ಮಾನಿಸಿದ್ದೇವು. ಪ್ರವಾಸ ದಿಢೀರ್ ನಿರ್ಧಾರ ಆಗಿದ್ದಕ್ಕೆ ಬೆಂಗಾವಲು ಪಡೆ ತೆಗೆದುಕೊಂಡಿರಲಿಲ್ಲ ಎಂದು ಸಚಿವರು ಸ್ಪಷ್ಟಪಡಿಸಿದರು.

ಬಿಜೆಪಿ ನಾಯಕರ ಆರೋಪಕ್ಕೆ ಉತ್ತರ ಕೊಡಲ್ಲ. ಆರೋಪ ಮಾಡಿದವರಿಗೆ ಬುದ್ಧಿ ಭ್ರಮಣೆ ಆಗಿರಬೇಕು. ಅಪಘಾತದ ಬಳಿಕ ಪ್ರಾಣಾಪಾಯದಿಂದ ಗೆದ್ದು ಬಂದಿರುವೆ. ಚೇತರಿಕೆ ಬಳಿಕ ಸಂಪೂರ್ಣ ಸಕ್ರಿಯವಾಗಿ ಸಾರ್ವಜನಿಕ ಜೀವನದಲ್ಲಿ ಪಾಲ್ಗೊಳ್ಳುವೆ. ಈಗಾಗಲೇ ವಿಡಿಯೋ ಕಾನ್ಫರೆನ್ಸ್ ಮೂಲಕ ಬಜೆಟ್ ಸಂಬಂಧ ಕಾರ್ಯಪ್ರವೃತ್ತನಾಗಿರುವೆ ಎಂದು ಸಚಿವೆ ಲಕ್ಷ್ಮೀ ಹೆಬ್ಬಾಳಕರ್ ಹೇಳಿದರು.

ಮೈಕ್ರೋ ಫೈನಾನ್ಸ್ ಹಾವಳಿ ನಡೆಯುತ್ತಿರುವುದು ನನ್ನ ಗಮನಕ್ಕೆ ಆರು ತಿಂಗಳ ಹಿಂದೆಯೇ ಬಂದಿತ್ತು. ಆಗಲೇ ನಾನು ನಗರ ಪೊಲೀಸ್ ಇಲಾಖೆ ಆಯುಕ್ತರ ಗಮನಕ್ಕೆ ತಂದಿದ್ದೆ. ಯಮಕನಮರಡಿಯಲ್ಲಿ ಮೈಕ್ರೋ ಫೈನಾನ್ಸ್ ಹಾವಳಿ ಹೆಚ್ಚಾಗಿದೆ. ಇದಕ್ಕೆ ಕಡಿವಾಣ ಹಾಕಬೇಕೆಂದು ಸೂಚಿಸಿದ್ದೆ ಎಂದರು.

ಈ ವೇಳೆ ಸಚಿವರ ಸಹೋದರ ಹಾಗೂ ವಿಧಾನ ಪರಿಷತ್ ಸದಸ್ಯರಾದ ಚನ್ನರಾಜ ಹಟ್ಟಿಹೊಳಿ, ವೈದ್ಯ ರವಿ ಪಾಟೀಲ್ ಹಾಗೂ ಸಚಿವರ ಕುಟುಂಬ ಸದಸ್ಯರು ಉಪಸ್ಥಿತರಿದ್ದರು.

*****

# 76ನೇ ಗಣರಾಜ್ಯೋತ್ಸವ ಸಂವಿಧಾನದ ಆಶಯಗಳು ಸಾಕಾರಗೊಳ್ಳಬೇಕ

## ಜನ ಸಮಾನ್ಯನ ಬದುಕು ಸುಂದರವಾಗಬೇಕು-ಸಚಿವ ಶಿವಾನಂದ ಪಾಟೀಲ ಜಿಲ್ಲಾ ಪ್ರವಾಸ

ಹಾವೇರಿ: ಸ'ಂ ವಿ ಧ ಾ ನ' ದ' ಆಶಯಗಳು ಸಾಕಾರಗೊಳ್ಳಬೇಕು, ಈ ದೇಶದ ಸಾರ್ವಭೌಮನಾದ ಜನ ಸಾಮಾನ್ಯನ ಬದುಕು ಸುಂದರವಾಗಬೇಕು ಎಂದು ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶನಾಲಯ ಹಾಗೂ ಕೃಷಿ ಮಾರುಕಟ್ಟೆ ಸಚಿವರು ಹಾಗೂ ಹಾವೇರಿ ಜಿಲ್ಲಾ ಉಸ್ತುವಾರಿ ಸಚಿವರಾದ ಶಿವಾನಂದ ಪಾಟೀಲ ಅವರು ಹೇಳಿದರು.

ನಗರದ ದಿ.ಹೊಸಮನಿ ಸಿದ್ದಪ್ಪ ಜಿಲ್ಲಾ ಕ್ರೀಡಾಂಗಣದಲ್ಲಿ ರವಿವಾರ 76ನೇ ಗಣರಾಜ್ಯೋತ್ಸವ ದಿನಾಚರಣೆ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಭಾರತದ ಸಂವಿಧಾನದ ಆಶಯಗಳಿಗೆ ಅನುಗುಣವಾಗಿ ನಮ್ಮ ಸರ್ಕಾರ ಸರ್ವರನ್ನೂ ಒಳಗೊಂಡ, ಸರ್ವರನ್ನು ಬೆಸೆಯುವ ಮತ್ತು ಸರ್ವರಿಗೂ ಸಮಪಾಲು-ಸಮಬಾಳು ನೀಡಬೇಕೆಂಬ ಪ್ರಾಮಾಣಿಕ ಆಶಯದ ಸರ್ಕಾರವಾಗಿ ಬಡವರ, ದಮನಿತರ, ಶೋಷಿತರ ಏಳಿಗೆಗಾಗಿ ವಿಶೇಷ ಒತ್ತು ನೀಡಿದೆ ಎಂದು ಹೇಳಿದರು.

ಭಾರತದ ಪ್ರಜೆಗಳಾದ ನಾವು ನಮ್ಮ ಸಂವಿಧಾನವನ್ನು ಸಾರ್ವಭೌಮ, ಸಮಾಜವಾದಿ, ಜಾತ್ಯಾತೀತ, ಪ್ರಜಾಸತ್ತಾತ್ಮಕ ಗಣರಾಜ್ಯವಾಗಿ ಆತ್ಮಾರ್ಪಿತ ಮಾಡಿಕೊಂಡಿದ್ದೇವೆ. "ನ್ಯಾಯ, ಸ್ವಾತಂತ್ರ್ಯ, ಸಮಾನತೆ, ಭ್ರಾತೃತ್ವ" ಇವು ಭಾರತ ರಾಜಕೀಯ ಪದ್ಧತಿಯ ನಾಲ್ಕು ಆಧಾರ ಸ್ಥಂಬಗಳು. ರಾಷ್ಟ್ರದ ಎಲ್ಲ ಪ್ರಜೆಗಳಿಗೂ ಸಾಮಾಜಿಕ ನ್ಯಾಯ, ಆರ್ಥಿಕ ನ್ಯಾಯ ಮತ್ತು ರಾಜಕೀಯ ನ್ಯಾಯವನ್ನು ದೊರಕಿಸಿಕೊಡುವುದೇ ನಮ್ಮ ಸಂವಿಧಾನದ ಮುಖ್ಯ ಗುರಿಯಾಗಿದೆ" ಎಂದರು.

ನಮ್ಮ ಸಂವಿಧಾನ, ನಮಗೆ ಅಪರಿಮಿತ ಹಕ್ಕುಗಳನ್ನು ಕೊಟ್ಟಿರುವಂತೆ, ಕರ್ತವ್ಯಗಳನ್ನೂ ಸೂಚಿಸಿದೆ. ನಮ್ಮ ಸಂವಿಧಾನದ ನಿರ್ದೇಶಕ ಸೂತ್ರಗಳು, ಭಾರತೀಯರಾದ ನಾವು ಎಂಥ ದೇಶವನ್ನು ರೂಪುಗೊಳಿಸಬೇಕೆಂಬ ಕನಸುಗಳನ್ನು ನೀಡಿದೆ. ಅದಕ್ಕಾಗಿ ಕೇಂದ್ರ ಹಾಗೂ ರಾಜ್ಯ ಸರಕಾರಗಳು ಜಾರಿಗೊಳಿಸಿರುವ ಕಲ್ಯಾಣ ಕಾರ್ಯಕ್ರಮಗಳು ಸಮಾಜದ ಕಟ್ಟಕಡೆಯ ವ್ಯಕ್ತಿಯನ್ನು ತಲುಪವಂತಾಗಬೇಕು ಎಂದರು.

ಸಂಪತ್ತು, ಅಧಿಕಾರ ಮತ್ತು ಅವಕಾಶ ಸಮನಾಗಿ ಎಲ್ಲರಿಗೂ ಹಂಚಿಕೆಯಾಗಬೇಕು ಎಂಬ ಆಶಯದೊಂದಿಗೆ ಕಾರ್ಯನಿರ್ವಹಿಸಿಕೊಂಡು ಬಂದಿದ್ದೇವೆ. ನುಡಿದಂತೆ ನಡೆದಿದ್ದೇವೆ ಹಾಗೂ ಐದು ಗ್ಯಾರಂಟಿಗಳನ್ನು ಈಡೇರಿಸಿದ್ದೇವೆ.

ಜನತೆಗೆ ಕೊಟ್ಟ ಮಾತನ್ನು ಉಳಿಸಿಕೊಂಡಿದ್ದೇವೆ. ನಾವು ಜನತೆಗೆ ನೀಡಿದ ಭರವಸೆಯಂತೆ ಐದು ಗ್ಯಾರಂಟಿ ಯೋಜನೆಗಳನ್ನು ಅನುಷ್ಠಾನಗೊಳಿಸಲಾಗಿದೆ. ಉಚಿತ ಸಾರಿಗೆ ಪ್ರಯಾಣದ ಶಕ್ತಿಯೋಜನೆಯಡಿ ಜಿಲ್ಲೆಯಲ್ಲಿ ಈವರೆಗೆ 9.54 ಕೋಟಿ ಮಹಿಳಾ ಪ್ರಯಾಣಿಕರು ಉಚಿತವಾಗಿ ಪ್ರಯಾಣಿಸಿದ್ದಾರೆ. ಪ್ರಯಾಣಿಕರ ಅನುಕೂಲಕ್ಕಾಗಿ ಹಾವೇರಿ ವಿಭಾಗಕ್ಕೆ 86 ಹೊಸ ಬಸ್‌ಗಳನ್ನು ನೀಡಲಾಗಿದೆ ಎಂದರು.

"ಗೃಹಜ್ಯೋತಿ" ಯೋಜನೆಯಡಿ ಜಿಲ್ಲೆಯ 4.2 ಲಕ್ಷ ಗ್ರಾಹಕರು ನೋಂದಾಯಿಸಿಕೊಂಡಿದ್ದಾರೆ. ಈ ಕುಟುಂಬಗಳಿಗೆ ಶೂನ್ಯ ವಿದ್ಯುತ್ ಬಿಲ್ ವಿತರಿಸಲಾಗುತ್ತಿದೆ.

"ಗೃಹಲಕ್ಷ್ಮೀ" ಯೋಜನೆಯಡಿ ಜಿಲ್ಲೆಯ 3.80 ಲಕ್ಷ ಕುಟುಂಬದ ಯಜಮಾನತಿಯರಿಗೆ ಪ್ರತಿ ಮಾಹೆ ರೂ.2000ರಂತೆ ಒಟ್ಟು ವರ್ಷಕ್ಕೆ ರೂ.92 ಕೋಟಿ ಜಮೆ ಮಾಡಲಾಗಿದೆ. ಸರ್ಕಾರದ ಐದನೇ ಗ್ಯಾರಂಟಿ "ಯುವನಿಧಿ" ಜಿಲ್ಲೆಯಲ್ಲಿ 5,104 ಪದವಿ ಹಾಗೂ ಡಿಪ್ಲೋಮೊ ಅಭ್ಯರ್ಥಿಗಳು ನೊಂದಾಯಿಸಿಕೊಂಡಿದ್ದಾರೆ. ಜನವರಿ-2024 ರಿಂದ ನವೆಂಬರ್ ತಿಂಗಳವರೆಗೆ ರೂ. 5.68 ಕೋಟಿ ಮೊತ್ತ ಫಲಾನುಭವಿಗಳ ಖಾತೆಗೆ ನೇರ ನಗದು ವರ್ಗಾವಣೆ ಮಾಡಲಾಗಿದೆ.

ಪ್ರಸಕ್ತ ಸಾಲಿನಲ್ಲಿ ಜಿಲ್ಲೆಯಲ್ಲಿ ಅತಿವೃಷ್ಟಿ ಹಾಗೂ ಮಳೆಯಿಂದ ಹಾನಿಯಾದ 414 ಮನೆ ಹಾಗೂ 31,070 ಹೆಕ್ಟೇರ್‌ಕ್ಷೇತ ಬೆಳೆಹಾನಿಯಾದ ಸಂತ್ರಸ್ಥರಿಗೆ ಎಸ್.ಡಿ.ಆರ್.ಎಫ್ ಹಾಗೂ ಎನ್.ಡಿ.ಆರ್.ಎಫ್ ಮಾರ್ಗಸೂಚಿ ಅನುಸಾರ ರೂ.23.47 ಕೋಟಿ ಪರಿಹಾರ ಪಾವತಿಸಲಾಗಿದೆ.

ಬೇಸಿಗೆಯಲ್ಲಿ ನಗರ ಹಾಗೂ ಗ್ರಾಮೀಣ ಪ್ರದೇಶದಲ್ಲಿ ಕುಡಿಯುವ ನೀರು ಹಾಗೂ ಜಾನುವಾರುಗಳಿಗೆ ಮೇವಿನ ಕೊರತೆ ಉಂಟಾಗದಂತೆ ಅಗತ್ಯ ಕ್ರಮಗಳನ್ನು ಕೈಗೊಳ್ಳಲು ಈಗಾಗಲೇ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಜಿಲ್ಲೆಯಲ್ಲಿ 7.45 ಲಕ್ಷ ಟನ್ ಮೇವು ಲಭ್ಯವಿದೆ. ಮುಂದಿನ 46 ವಾರಗಳವರೆಗೆ ಜಾನುವಾರುಗಳಿಗೆ ಯಾವುದೇ ಮೇವಿನ ಕೊರತೆ ಇರುವುದಿಲ್ಲ.

ಪ್ರಸಕ್ತ ಸಾಲಿನಲ್ಲಿ ಪ್ರಕೃತಿ ವಿಕೋಪದಿಂದ ಮೃತಪಟ್ಟ 98 ಜಾನುವಾರುಗಳ ಮಾಲೀಕರಿಗೆ ರೂ.2.20ಲಕ್ಷ ಪರಿಹಾರ ಮೊತ್ತ ಪಾವತಿಸಲಾಗಿದೆ. 11.32 ಲಕ್ಷ ಜಾನುವಾರುಗಳಿಗೆ ವಿವಿಧ ಲಸಿಕೆ ನೀಡಲಾಗಿದೆ ಎಂದರು.

ಕುಡಿಯುವ ನೀರಿನ ಸಮಸ್ಯೆಗಳಿಗೆ ಶಾಶ್ವತ ಪರಿಹಾರ ಕಂಡುಕೊಳ್ಳುವ ನಿಟ್ಟಿನಲ್ಲಿ ಜಲಜೀವನ್ ಮಿಷನ್ ಯೋಜನೆಯಡಿ 726 ಕಾಮಗಾರಿಗಳನ್ನು ಆರಂಭಿಸಿ, ಈಗಾಗಲೇ 649 ಕಾಮಗಾರಿಗಳನ್ನು ಪೂರ್ಣಗೊಳಿಸಲಾಗಿದೆ. ಉಳಿದ 77 ಕಾಮಗಾರಿಗಳನ್ನು ಮಾರ್ಚ್-2025ರೊಳಗಾಗಿ ಪೂರ್ಣಗೊಳಿಸಿ ಜಿಲ್ಲೆಯ ಎಲ್ಲ ಕುಟುಂಬಗಳಿಗೆ ಶುದ್ಧ ಕುಡಿಯುವ ನೀರು ಪೂರೈಸಾಗುವುದು ಎಂದು ಹೇಳಿದರು.

ಸನ್ಮಾನ: ಕ್ರೀಡೆ, ಶಿಕ್ಷಣ, ಸಾಮಾಜಿಕ, ಪರಿಸರ, ಮಾಧ್ಯಮ ಹಾಗೂ ಸೇರಿದಂತೆ ವಿವಿಧ ಕ್ಷೇತ್ರಗಳಲ್ಲಿ ಸಾಧನೆಮಾಡಿದ 18 ಜನ ಸಾಧಕರನ್ನು ಜಿಲ್ಲಾಡಳಿತದಿಂದ ಸನ್ಮಾನಿಸಲಾಯಿತು.

ಪಥಸಂಚಲನ: ಪರೇಡ ಕಮಾಂಡೆಂಟ್ ಶಂಕರಗೌಡ ಪಾಟೀಲ ಅವರ ನೇತೃತ್ವದಲ್ಲಿ ಸಶಸ್ತ್ರ ಮೀಸಲು ಪಡೆ, ನಾಗರೀಕ ಸೇವಾ, ಅಗ್ನಿಶಾಮಕ, ಅಬಕಾರಿ ದಳ, ಅರಣ್ಯ ರಕ್ಷಕ ದಳ, ಹೊಮ್ ಗಾರ್ಡ್ ಹಾಗೂ ವಿವಿಧ ಶಾಲೆಗಳ ವಿದ್ಯಾರ್ಥಿಗಳು ಸೇರಿದಂತೆ ವಿವಿಧ 14 ತಂಡಗಳಿಂದ ಆಕರ್ಷಕ ಪಥಸಂಚಲನ ಜರುಗಿತು.

ಮಕ್ಕಳಿಂದ ನೃತ್ಯ: ವಿವಿಧ ಶಾಲಾ ಮಕ್ಕಳು "ವಂದೇ ಮಾತರಂ", ದೇಶ ಮೇರಾ ರಂಗೀಲಾ" ಸೇರಿದಂತೆ ವಿವಿಧ ದೇಶ ಭಕ್ತಿಗೀತೆಗಳಿಗೆ ಆಕರ್ಷಕ ನೃತ್ಯ ಮಾಡಿದರು.

ಕಾರ್ಯಕ್ರಮದಲ್ಲಿ ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಎಂ.ಹಿರೇಮಠ, ನಗರಸಭೆ ಅಧ್ಯಕ್ಷೆ ಶ್ರೀಮತಿ ಶಶಿಕಲಾ ಮಾಳಗಿ, ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಎಸ್.ಎಫ್.ಎನ್. ಗಾಜಿಗೌಡ್ರ, ತಾಲೂಕು ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಪ್ರಾಧಿಕಾರದ ಅಧ್ಯಕ್ಷ ಎಂ.ಎಂ.ಮೈದೂರ, ನಗರಸಭೆ ಸದಸ್ಯ ಸಂಜೀವಕುಮಾರ ನೀರಲಗಿ, ಜಿಲ್ಲಾಧಿಕಾರಿ ಡಾ.ವಿಜಯಮಹಾಂತೇಶ ದಾನಮ್ಮನವರ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅಂಶುಕುಮಾರ, ಅಪರ ಜಿಲ್ಲಾಧಿಕಾರಿ ಡಾ.ನಾಗಾರಜ ಎಲ್., ಹೆಚ್ಚುವರಿ ಪೊಲೀಸ್ ವರಿಷ್ಠಾಧಿಕಾರಿ ಲಕ್ಷ್ಮಣ ಶಿರಕೋಳ, ಉಪ ವಿಭಾಗಾಧಿಕಾರಿ ಚನ್ನಪ್ಪ, ತಹಶೀಲ್ದಾರ ಶ್ರೀಮತಿ ಶರಣಮ್ಮ ಇತರರು ಉಪಸ್ಥಿತರಿದ್ದರು.

# 76 ನೇ ಗಣರಾಜ್ಯೋತ್ಸವ ಸಂವಿಧಾನವನ್ನು ಪ್ರತಿಯೊಬ್ಬರು ಓದಬೇಕು

## ಸೌಹಾರ್ದತೆ ಸಹಬಾಳ್ವೆಯ ಪಾಠವನ್ನು ಸಂವಿಧಾನ ಪೀಠಿಕೆಯಿಂದ ಕಲಿಯುತ್ತೇವೆ: ಸಚಿವ ಸಂತೋಷ ಎಸ್.ಲಾಡ್

ಧಾರವಾಡ : ಭಾರತದ ಸಂವಿಧಾನವನ್ನು ಪ್ರತಿಯೊಬ್ಬರು ಓದಬೇಕು. ಸಂವಿಧಾನ ಪೀಠಿಕೆಯಲ್ಲಿ ಹೇಳಿರುವ ಮೌಲ್ಯಗಳನ್ನು ಅಳವಡಿಸಿಕೊಳ್ಳುವುದರ ಮೂಲಕ ದೇಶದ ಅಭಿವೃದ್ಧಿಗೆ ವಿಶೇಷವಾಗಿ ಯುವ ಸಮೂಹ ತೊಡಗಿಸಿಕೊಳ್ಳಬೇಕೆಂದು ಕಾರ್ಮಿಕ ಇಲಾಖೆ ಹಾಗೂ ಧಾರವಾಡ ಜಿಲ್ಲಾ ಉಸ್ತುವಾರಿ ಸಚಿವ ಸಂತೋಷ ಎಸ್.ಲಾಡ್ ಅವರು ಹೇಳಿದರು.

ಅವರು ಇಂದು ಬೆಳಿಗ್ಗೆ ಆರ್.ಎನ್.ಶೆಟ್ಟಿ ಜಿಲ್ಲಾ ಕ್ರೀಡಾಂಗಣದಲ್ಲಿ ಜಿಲ್ಲಾಡಳಿತದಿಂದ ಆಯೋಜಿಸಿದ್ದ 76 ನೇ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ರಾಷ್ಟ್ರ ಧ್ವಜಾರೋಹಣ ನೇರವೆರಿಸಿ ಸಾರ್ವಜನಿಕರನ್ನು ಉದ್ದೇಶಿಸಿ, ಮಾತನಾಡಿದರು.

ಭಾರತ ದೇಶವು ಎಲ್ಲ ಧರ್ಮದವರಿಗೂ ಸೇರಿದ್ದು, ಯಾವುದೇ ಪಕ್ಷ, ಧರ್ಮಗಳಿಗೆ ಮೀಸಲಾಗಿಲ್ಲ. ಡಾ. ಬಿ.ಆರ್. ಅಂಬೇಡ್ಕರ ಅವರು ರಚಿಸಿರುವ ಸಂವಿಧಾನವು ಪ್ರತಿಯೊಬ್ಬರ ಸಮಗ್ರ ಅಭಿವೃದ್ಧಿಗೆ ಮತ್ತು ಸಮಾಜದ ಹಿತಕ್ಕೆ ಪೂರಕವಾದ ಅಂಶಗಳನ್ನು ನೀಡಿದೆ. ಪ್ರತಿಯೊಬ್ಬರು ಪ್ರತಿದಿನ ಸಂವಿಧಾನ ಪೀಠಿಕೆಯನ್ನು ಓದುಬೇಕು. ಪಿಠೀಕೆಯಲ್ಲಿ ಇರುವ ಮೌಲ್ಯಗಳನ್ನು ಅರ್ಥೈಸಿಕೊಂಡು ಜೀವನದಲ್ಲಿ ಅಳವಡಿಸಿಕೊಳ್ಳಬೇಕೆಂದು ಸಚಿವ ಸಂತೋಷ ಲಾಡ್ ಅವರು ತಿಳಿಸಿದರು.

ಗ್ಯಾರಂಟಿ ಯೋಜನೆಗಳ ಪ್ರಗತಿ: ಕರ್ನಾಟಕ ಸರ್ಕಾರ ಬಡವರ ಏಳಿಗೆಗಾಗಿ 5 ಗ್ಯಾರಂಟಿ ಯೋಜನೆಗಳನ್ನು ಜಾರಿ ಮಾಡಿದೆ. ಧಾರವಾಡ ಜಿಲ್ಲೆಯಲ್ಲಿ ಶಕ್ತಿ ಯೋಜನೆಯಡಿ 3.22 ಲಕ್ಷ ಮಹಿಳೆಯರು ಪ್ರತಿ ದಿನ ಉಚಿತವಾಗಿ ಪ್ರಯಾಣ ಮಾಡಿದ್ದು, ರೂ. 67.33 ಲಕ್ಷ ಮೊತ್ತದ ಸೇವೆಯನ್ನು ಪಡೆದಿದ್ದಾರೆ. ಇಲ್ಲಿಯವರೆಗೆ ರೂ. 383.75 ಕೋಟಿ ಶಕ್ತಿ ಯೋಜನೆಗೆ ವೆಚ್ಚವಾಗಿರುತ್ತದೆ.

ಗೃಹಲಕ್ಷ್ಮೀ ಯೋಜನೆಯಲ್ಲಿ 3,87,201 ಮಹಿಳೆಯರಿಗೆ ರೂ.1,065 ಕೋಟಿ ಗಳನ್ನು ನೀಡಲಾಗಿದೆ. ಗೃಹಜ್ಯೋತಿ ಯೋಜನೆಯಲ್ಲಿ 4,94,943 ಬಳಕೆದಾರರಿಗೆ ರೂ.359.57 ಕೋಟಿ ಗಳ ನೆರವನ್ನು ನೀಡಲಾಗಿದೆ. ಅನ್ನಭಾಗ್ಯ ಯೋಜನೆಯಲ್ಲಿ 3,50,324 ಕುಟುಂಬಗಳ ಪ್ರತಿ ಸದಸ್ಯರಿಗೆ 5 ಕೆಜಿ ಅಕ್ಕಿಯನ್ನು ಉಚಿತವಾಗಿ ಹಾಗೂ ತಲಾ ರೂ.170 ಗಳನ್ನು ನೇರವಾಗಿ ಡಿ.ಬಿ.ಟಿ ಮೂಲಕ ನೀಡಲಾಗಿದೆ. ಇಲ್ಲಿಯವರೆಗೆ ರೂ. 276.64 ಕೋಟಿಗಳ ನೆರವು ನೀಡಲಾಗಿದೆ. ಮತ್ತು ಯುವ ನಿಧಿ ಯೋಜನೆಯಲ್ಲಿ 4,388 ಫಲಾನುಭವಿಗಳಿಗೆ ರೂ.5.77 ಕೋಟಿ ಗಳ ನೆರವನ್ನು ನೀಡಲಾಗಿದೆ ಎಂದು ಸಚಿವ ಸಂತೋಷ ಲಾಡ್ ಅವರು ಹೇಳಿದರು.

ವಿವಿಧ ಯೋಜನೆಗಳಡಿ ಅಭಿವೃದ್ಧಿ: ಗ್ರಾಮೀಣ ಕುಡಿಯುವ ನೀರಿನ ಯೋಜನೆಯಲ್ಲಿ 2,01,116 ಮನೆಗಳಿಗೆ ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಮಾಡಲಾಗಿದೆ. ಸ್ವಚ್ಛ ಭಾರತ ಯೋಜನೆಯಡಿ 2024-25ನೇ ಸಾಲಿನಲ್ಲಿ 4,548 ವೈಯುಕ್ತಿಕ ಶೌಚಾಲಯಗಳನ್ನು ನಿರ್ಮಿಸಲಾಗಿದೆ. ಜಿಲ್ಲೆಯಲ್ಲಿರುವ 1,33,684 ಅಂಗನವಾಡಿ ಮಕ್ಕಳಿಗೆ ವಿವಿಧ ಸೌಲಭ್ಯಗಳನ್ನು ನೀಡಲಾಗುತ್ತಿದೆ. 1,86,760 ಶಾಲಾ ಮಕ್ಕಳಿಗೆ ಪ್ರತಿ ದಿನ ಬಿಸಿಯೂಟ ಹಾಗು ಬಿಸಿ ಹಾಲು ನೀಡಲಾಗುತ್ತಿದೆ. ಜನನಿ ಸುರಕ್ಷಾ ಯೋಜನೆಯಡಿ 16,258 ಗರ್ಭಿಣಿ ಸ್ತ್ರೀಯರಿಗೆ ಹೆರಿಗೆ ಭತ್ಯೆ ವಿತರಿಸಲಾಗಿದೆ ಎಂದು ಸಚಿವರು ಹೇಳಿದರು.

ಸಮಾಜ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳ ಸೌಲಭ್ಯವನ್ನು 8,903 ವಿದ್ಯಾರ್ಥಿಗಳು ಪಡೆದಿದ್ದು, ಅವರ ವಿದ್ಯಾಭ್ಯಾಸಕ್ಕೆ ಅನುಕೂಲವಾಗಿದೆ. ಎಸ್‌ಸಿಪಿ ಮತ್ತು ಟಿಎಸ್‌ಪಿ ಯೋಜನೆಯಡಿ ರೂ.30.87 ಕೋಟಿ ಅನುದಾನವನ್ನು ವೆಚ್ಚ ಮಾಡಲಾಗಿದೆ. 8,520 ವಿದ್ಯಾರ್ಥಿಗಳು ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆಯ ಹಾಸ್ಟೆಲ್‌ಗಳ ಸೌಲಭ್ಯವನ್ನು ಪಡೆದಿದ್ದು, ಅವರ ವಿದ್ಯಾಭ್ಯಾಸಕ್ಕೆ ಅನುಕೂಲವಾಗಿದೆ ಎಂದರು.

ಜಿಲ್ಲೆಯಲ್ಲಿ ಈ ಸಾಲಿನಲ್ಲಿ ಉತ್ತಮ ಮಳೆಯಾಗಿದ್ದು, ಮುಂಗಾರು ಹಾಗೂ ಹಿಂಗಾರು ಹಂಗಾಮಿನಲ್ಲಿ ಒಟ್ಟು 4.78 ಲಕ್ಷ ಹೆಕ್ಟೇರ ಪ್ರದೇಶದಲ್ಲಿ ಬಿತ್ತನೆ ಮಾಡಲಾಗಿದೆ. 69,573 ರೈತರಿಗೆ ರೂ.48.45 ಕೋಟಿಗಳ ಬೆಳೆ ಪರಿಹಾರವನ್ನು ವಿತರಿಸಲಾಗಿದೆ. ಹುಬ್ಬಳ್ಳಿ ಧಾರವಾಡ ಸ್ಮಾರ್ಟ್ ಸಿಟಿ ಯೋಜನೆಯಲ್ಲಿ ಈವರೆಗೂ ರೂ.914.75 ಕೋಟಿಗಳನ್ನು ವೆಚ್ಚ ಮಾಡಲಾಗಿದೆ. ನರೇಗಾ ಯೋಜನೆಯಲ್ಲಿ 102 ಗ್ರಾಮ ಪಂಚಾಯತಿಗಳಲ್ಲಿ ಕೂಸಿನ ಮನೆಗಳನ್ನು ಸ್ಥಾಪಿಸಲಾಗಿದೆ ಎಂದು ಸಚಿವ ಸಂತೋಷ ಲಾಡ್ ಹೇಳಿದರು.

ಇತಿಹಾಸದ ಸ್ಮರಣೆ: ದೇಶದ ಇತಿಹಾಸದಲ್ಲಿ ಆಗಸ್ಟ್ 15 ಮತ್ತು ಜನವರಿ 26 ಅತ್ಯಂತ ಪ್ರಮುಖ ದಿನಗಳಾಗಿವೆ. ಇವೆರಡೂ ದಿನಗಳನ್ನು ನಾವೆಲ್ಲರೂ ರಾಷ್ಟ್ರೀಯ ಹಬ್ಬಗಳಾಗಿ ಸಡಗರದಿಂದ ಆಚರಿಸುತ್ತೇವೆ. ಆದರಲ್ಲೂ 1950ರ ಜನವರಿ 26 ಮೂರು ಮುಖ್ಯ ಘಟನೆಗೆ ಸಾಕ್ಷಿಯಾಗಿದೆ. ಮುಖ್ಯವಾಗಿ, ಭಾರತ ದೇಶವನ್ನು ಗಣರಾಜ್ಯವೆಂದು ಘೋಷಿಸಲಾಯಿತು. ಡಾ. ಬಾಬಾಸಾಹೇಬ್



ಅಂಬೇಡ್ಕರ್ ಅವರು ರಚಿಸಿದ ಭಾರತದ ಸಂವಿಧಾನ ಜಾರಿಗೊಳಿಸಲಾಯಿತು. ಸಾರಾನಾಥದಲ್ಲಿರುವ ಅಶೋಕನ ಕಾಲದ ಸಿಂಹ ಶಿಖರ ಮತ್ತು ಸತ್ಯಮೇವ ಜಯತೆ ಅನ್ನು ರಾಷ್ಟ್ರ ಲಾಂಛನವನ್ನಾಗಿ ಮಾಡಲಾಯಿತು.

ಗಣರಾಜ್ಯೋತ್ಸವ ಭಾರತದ ಒಂದು ರಾಷ್ಟ್ರೀಯ ಹಬ್ಬ. ದೇಶಕ್ಕೆ ಪ್ರಜಾಪ್ರಭುತ್ವದ ಆಡಳಿತ ಪದ್ಧತಿಯನ್ನು ಅಳವಡಿಸಿಕೊಂಡ ಸಂಭ್ರಮದ ದಿನವಾಗಿದೆ. ಡಾ. ಬಿ. ಆರ್. ಅಂಬೇಡ್ಕರ್ ಅವರನ್ನು ಭಾರತ ಸಂವಿಧಾನದ ಪಿತಾಮಹ ಎನ್ನುತ್ತಾರೆ. ನಮ್ಮ ಸ್ವಾತಂತ್ರ್ಯ ಹೋರಾಟಗಾರರು, ನಮ್ಮ ನಾಯಕರು ಮತ್ತು ನಮ್ಮ ಸಂವಿಧಾನದ ರಚನೆಗೆ ಕೊಡುಗೆ ನೀಡಿದ ಪ್ರತಿಯೊಬ್ಬ ವ್ಯಕ್ತಿಯನ್ನು ನೆನಪಿಸಿಕೊಳ್ಳಲು ಈ ಅವಕಾಶವನ್ನು ಬಳಸಿಕೊಳ್ಳೋಣ ಎಂದು ಸಚಿವರು ತಿಳಿಸಿದರು.

ನಾವು ಸಂವಿಧಾನವನ್ನು ಗೌರವಿಸಬೇಕು. ಅದರಲ್ಲಿ ಇರುವ ನಿಯಮಗಳನ್ನು ಅನುಸರಿಸಬೇಕು. ದೇಶದ ಪ್ರಜೆಗಳಿಗೆ ಮೂಲಭೂತ ಹಕ್ಕುಗಳಿರುವಂತೆ ಮೂಲಭೂತ ಕರ್ತವ್ಯಗಳು ಸಹ ಇರುತ್ತವೆ. ಭಾರತ ದೇಶವನ್ನು ಇನ್ನಷ್ಟು ಅಭಿವೃದ್ಧಿಯತ್ತ ಸಾಗಿಸೋಣ. ಆರ್ಥಿಕವಾಗಿ ಅಭಿವೃದ್ಧಿ ಹೊಂದುವುದು ಮಾತ್ರವಲ್ಲದೆ ಸಾಮಾಜಿಕ ಸಾಮರಸ್ಯ ಮತ್ತು ಸಾಂಸ್ಕೃತಿಕ ಶ್ರೀಮಂತಿಕೆಯಲ್ಲಿ ಬೆಳೆಯುತ್ತಿರುವ ಭಾರತಕ್ಕಾಗಿ ಕೆಲಸ ಮಾಡಲು ನಾವು ಇಂದು ಪ್ರತಿಜ್ಞೆ ಮಾಡೋಣ ಎಂದು ಸಚಿವ ಸಂತೋಷ ಲಾಡ್ ನುಡಿದರು.

ಒಂದು ದೇಶವಾಗಿ ನಾವು ಸಾಕಷ್ಟು ಆರ್ಥಿಕ ಸುಧಾರಣೆಗಳು ಮತ್ತು ಯಶಸ್ಸನ್ನು ಕಂಡಿದ್ದರೂ, ಬಡತನ ಮತ್ತು ನಿರುದ್ಯೋಗದಂತಹ ಸವಾಲುಗಳು ಈಗಲೂ ನಮ್ಮ ಮುಂದಿವೆ. ಈ ಸವಾಲುಗಳನ್ನು ಎದುರಿಸಿ ಹೊರಬರುವುದು ನಮ್ಮೆಲ್ಲರ ಕರ್ತವ್ಯವಾಗಿದೆ ಎಂದು ಸಚಿವರು ತಿಳಿಸಿದರು.

ಆಕರ್ಷಕ ಪಥ ಸಂಚಲನ: ಜಿಲ್ಲಾಡಳಿತದಿಂದ ಇಂದು ನಗರದ ಆರ್.ಎನ್.ಶೆಟ್ಟಿ ಕ್ರೀಡಾಂಗಣದಲ್ಲಿ ಆಯೋಜಿಸಿದ್ದ, ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ವಿವಿಧ ಇಲಾಖೆ ಮತ್ತು ಶಾಲಾ ಕಾಲೇಜುಗಳ ವಿದ್ಯಾರ್ಥಿಗಳು ಸಮವಸ್ತ್ರದಲ್ಲಿ ಶಿಸ್ತುಬದ್ದವಾಗಿ ಪಥಸಂಚಲನ ಮಾಡುವದರೊಂದಿಗೆ ಅತಿಥಿಗಳಿಗೆ ಗೌರವ ವಂದನೆ ಸಲ್ಲಿಸಿ, ಕಾರ್ಯಕ್ರಮದಲ್ಲಿ ನೆರೆದ ಸಾರ್ವಜನಿಕರ ಗಮನ ಸೆಳೆದರು.

ಪಥ ಸಂಚಲನದ ಸ್ಪರ್ಧೆಯಲ್ಲಿ ಎನ್.ಎ.ಮುತ್ತಣ್ಣ ಪೊಲೀಸ್ ಮಕ್ಕಳ ವಸತಿ ಶಾಲೆ-ಪ್ರಥಮ, ಸೇಂಟ್ ಜೊಸೆಪ್ಸ್ ಶಾಲೆ-ದ್ವಿತೀಯ ಹಾಗೂ ಕೆ.ಎನ್.ಕೆ. ಹೈಸ್ಕೂಲ್ ಶಾಲೆಗಳು ತೃತೀಯ ಸ್ಥಾನ ಪಡೆದಿದ್ದು, ಜಿಲ್ಲಾ ಉಸ್ತುವಾರಿ ಸಚಿವರಿಂದ ಹಾಗೂ ಜಿಲ್ಲಾಧಿಕಾರಿಗಳಿಂದ ವಿಜೇತರು ಪ್ರಮಾಣ ಪತ್ರ, ಬಹುಮಾನ ಮತ್ತು ಪಾರಿತೋಷಕ ಪಡೆದುಕೊಂಡರು.

ಸಂವಿಧಾನ ಪೀಠಿಕೆಯ ಸಾಮೂಹಿಕ ವಾಚನ: ಇಂದಿನ ಗಣರಾಜ್ಯೋತ್ಸವ ಕಾರ್ಯಕ್ರಮದಲ್ಲಿ ಭಾರತ ಸಂವಿಧಾನದ ಶ್ರೇಷ್ಠತೆಯನ್ನು ಸಾರುವ ಸಂವಿಧಾನ ಪೀಠಿಕೆಯ ಸಾಮೂಹಿಕ ವಾಚನ ಜರುಗಿತು. ಅಪರ ಜಿಲ್ಲಾಧಿಕಾರಿ ಗೀತಾ ಸಿ.ಡಿ. ಅವರು ಗಣರಾಜ್ಯೋತ್ಸವ ಕಾರ್ಯಕ್ರಮದ ಅತಿಥಿಗಳಿಗೆ, ಜಿಲ್ಲಾ ಹಾಗೂ ತಾಲೂಕಾ ಮಟ್ಟದ ಅಧಿಕಾರಿ ಹಾಗೂ ಸಿಬ್ಬಂದಿಗಳಿಗೆ, ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಸಂವಿಧಾನ ಪೀಠಿಕೆಯನ್ನು ಬೋಧಿಸಿದರು.

ಜಿಲ್ಲೆಯ ಸಾಧಕರಿಗೆ ಸನ್ಮಾನ: ಜಿಲ್ಲಾಡಳಿತದಿಂದ ನಗರದ ಆರ್.ಎನ್.ಶೆಟ್ಟಿ ಕ್ರೀಡಾಂಗಣದಲ್ಲಿ ಜರುಗಿದ ಗಣರಾಜ್ಯೋತ್ಸವದ ದಿನಾಚರಣೆಯಲ್ಲಿ ವಿವಿಧ ಕ್ಷೇತ್ರಗಳಲ್ಲಿ ಗಣನೀಯ ಸಾಧನೆ ಮಾಡಿದ ಸಾಧಕರಿಗೆ ಸನ್ಮಾನಿಸಿ, ಗೌರವಿಸಲಾಯಿತು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವತಿಯಿಂದ ದಿವಗಂತ ರೋಹಿತ ಕುಂಬಾರ ಇವರ ಅಂಗಾಂಗ ದಾನ ಮಾಡಿದ ಕುಟುಂಬಕ್ಕೆ, ಮಾನವ ಸರಪಳಿ ಕಾರ್ಯಕ್ರಮದಲ್ಲಿ ವಿಶೇಷ ಸೇವೆ ಸಲ್ಲಿಸಿದ್ದಾಕ್ಕಾಗಿ ಶ್ರೀ ಸಿದ್ಧಾರೋಢ ಟ್ರಸ್ಟ್‌ಗೆ ಹಾಗೂ ಇಸ್ಕಾನ ಸಂಸ್ಥೆಗಳಿಗೆ ಕಾರ್ಮಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಸಂತೋಷ ಎಸ್. ಲಾಡ್ ಅವರು ಸನ್ಮಾನಿಸಿ, ಪ್ರಮಾಣ ಪತ್ರದೊಂದಿಗೆ ಗೌರವಿಸಿದರು.

ಭಾಷಣ ಸ್ಪರ್ಧೆಯ ವಿಜೇತರಿಗೆ ಪ್ರಶಸ್ತಿ ವಿತರಣೆ: ಗಣರಾಜ್ಯೋತ್ಸವದ ನಿಮಿತ್ತ ಜಿಲ್ಲಾಡಳಿತ ಮತ್ತು ಶಾಲಾ ಶಿಕ್ಷಣ ಇಲಾಖೆಯಿಂದ ಆಯೋಜಿಸಿದ್ದ ಭಾಷಣ ಸ್ಪರ್ಧೆಯ ಜಿಲ್ಲಾ ಮಟ್ಟದಲ್ಲಿ ಪ್ರಥಮ ಸ್ಥಾನವನ್ನು ಕೆ.ಜೆ.ಎಸ್.ಗರಗ ಶಾಲೆಯ ಸಂಜನಾ ಕರಲಿಂಗನವರ, ಬೆಂಗೇರಿ ಸೇಂಟ್ ಮೈಕಲ್ ಶಾಲೆಯ ಧ್ವನಿ ಪವಾರ, ಭಾರದ್ವಾಡದ ಸ.ಉ.ಹಿ.ಪ್ರಾ ಶಾಲೆಯ ತಹಶೀನ ಅತ್ತಾರ, ಹಾಗೂ ಪ್ರೌಢಶಾಲಾ ವಿಭಾಗದಲ್ಲಿ ಜಿ.ಎಚ್.ಎಸ್.ಕುರವಿನಕೊಪ್ಪ ಶಾಲೆಯ ದೇವಕ್ಕ ರಾಮಜಿ, ದಾಸ್ತಿಕೊಪ್ಪದ ಆದರ್ಶ ವಿದ್ಯಾಲಯ ಶಾಲೆಯ ಸಂಜನಾ ಧನಿಗೊಂಡ, ಕಲಘಟಗಿಯ ಸ.ಉ.ಹಿ.ಪ್ರಾ ಶಾಲೆಯ ಸೈನಾಜ ಗುರನಳ್ಳಿ ವಿದ್ಯಾರ್ಥಿಗಳಿಗೆ ಪ್ರಶಸ್ತಿ ವಿತರಿಸಲಾಯಿತು.

ಶಾಲಾ ಮಕ್ಕಳಿಂದ ಜರುಗಿದ ಸಾಂಸ್ಕೃತಿಕ ಕಾರ್ಯಕ್ರಮ: ಶಾಲಾ ಶಿಕ್ಷಣ ಇಲಾಖೆಯ ವಿವಿಧ ಮಾಧ್ಯಮಿಕ ಮತ್ತು ಪ್ರೌಢ ಶಾಲೆಯ ವಿದ್ಯಾರ್ಥಿಗಳು ಗಣರಾಜ್ಯೋತ್ಸವದ ನಿಮಿತ್ತ ಆರ್.ಎನ್.ಶೆಟ್ಟಿ ಕ್ರೀಡಾಂಗಣದಲ್ಲಿ ಸಾಮೂಹಿಕ ನೃತ್ಯ, ದೇಶ ಭಕ್ತಿಗೀತೆ, ಗಾಯನ ಮತ್ತು ಛದ್ಮವೇಷದಾರಿಗಳಾಗಿ ವಿವಿಧ ಕಾರ್ಯಕ್ರಮಗಳನ್ನು ಪ್ರದರ್ಶಿಸಿದರು.

ಬಾಸೆಲ್ ಮಿಶನ್ ಬಾಲಕರ ಪ್ರೌಢಶಾಲೆಯಿಂದ ನನ್ನ ನೆಲ ನನ್ನ ಜಲ ಎಂಬ ಸಮೂಹ ನೃತ್ಯ, ಧಾರವಾಡ ನಾರಾಯಣಪೂರದ ಯುವ ಡ್ಯಾನ್ಸ್ ಅಕಾಡೆಮಿಯ ರಮೇಶ ಪಾಟೀಲ ಮತ್ತು ತಂಡದಿಂದ ಭಾರತಾಂಬೆಯ ಮಕ್ಕಳು ನಾವು ನೀವು ಎಂಬ ದೇಶ ಭಕ್ತಿ ಗೀತೆಗೆ ಸಮೂಹ ನೃತ್ಯ, ಪ್ರಜೆಂಟೇಶನ ಪಿ.ಯು. ಕಾಲೇಜು ವಿದ್ಯಾರ್ಥಿಗಳಿಂದ ಕುಚ್ ಕರಿಯೇ ಹಾಡಿಗೆ ಸಮೂಹ ನೃತ್ಯ, ಹುಬ್ಬಳ್ಳಿಯ ಸ್ವರ್ಣ ಮಯೂರಿ ಸಾಂಸ್ಕೃತಿಕ ಸಂಸ್ಥೆಯ ಚನ್ನಯ್ಯ ವಸ್ತ್ರದ ಮತ್ತು ತಂಡದವರಿಂದ ಒಂದೇ ಮಾತರಂ ಯಕ್ಷಗಾನ ಶೈಲಿಯ ಸಮೂಹ ನೃತ್ಯ ಹಾಗೂ ಧಾರವಾಡ ವಿದ್ಯಾರಣ್ಯ ಕಾಲೇಜು ವಿದ್ಯಾರ್ಥಿಗಳಿಂದ ಪುಲ್ವಾಮಾದಾಳಿಯ ದೇಶಭಕ್ತಿಗೀತೆಗೆ ಸಮೂಹ ನೃತ್ಯವನ್ನು ಪ್ರದರ್ಶಿಸಿದರು.

ಈ ಸಂದರ್ಭದಲ್ಲಿ ಮಾಜಿ ಸಭಾಪತಿ ವೀರಣ್ಣ ಮತ್ತಿಗಟ್ಟಿ, ಹುಬ್ಬಳ್ಳಿ ಧಾರವಾಡ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಶಾಕೀರ್ ಸನದಿ, ಜಿಲ್ಲಾ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿಯ ಅಧ್ಯಕ್ಷ ಎಸ್.ಆರ್.ಪಾಟೀಲ, ಜಿಲ್ಲಾಧಿಕಾರಿ ದಿವ್ಯ ಪ್ರಭು, ಮಹಾನಗರ ಪೊಲೀಸ್ ಆಯುಕ್ತರಾದ ಎನ್.ಶಶಿಕುಮಾರ, ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ ಭುವನೇಶ ಪಾಟೀಲ, ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಡಾ.ಗೋಪಾಲ ಬ್ಯಾಕೋಡ, ಹೆಚ್ಚುವರಿ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ನಾರಾಯಣ ಬರಮನಿ, ಉಪಪೊಲೀಸ್ ಆಯುಕ್ತರಾದ ರವೀಶ ಸಿ.ಆರ್., ಮತ್ತು ಮಾನಿಂಗ ನಂದಗಾವಿ, ಅಪರ ಜಿಲ್ಲಾಧಿಕಾರಿ ಗೀತಾ.ಸಿ.ಡಿ., ಉಪವಿಭಾಗಾಧಿಕಾರಿ ಶಾಲಂ ಹುಸೇನ್, ಜಿಲ್ಲಾ ಪಂಚಾಯತ ಉಪಕಾರ್ಯದರ್ಶಿ ಬಿ.ಎಸ್. ಮೂಗನೂರಮಠ, ಮುಖ್ಯ ಯೋಜನಾ ನಿರ್ದೇಶಕ ದೀಪಕ ಮಡಿವಾಳರ, ಜಿಲ್ಲಾ ನಗರಾಭಿವೃದ್ಧಿ ಕೋಶದ ಯೋಜನಾ ನಿರ್ದೇಶಕ ಅಜೀಜ ದೇಸಾಯಿ, ಜಿಲ್ಲಾ ಆರೋಗ್ಯಾಧಿಕಾರಿ ಡಾ. ಶಶಿ ಪಾಟೀಲ, ಶಾಲಾ ಶಿಕ್ಷಣ ಇಲಾಖೆಯ ಉಪ ನಿರ್ದೇಶಕ ಎಸ್.ಎಸ್.ಕೆಳದಿಮಠ, ಧಾರವಾಡ ತಹಶೀಲ್ದಾರ ಡಿ.ಎಚ್.ಹೂಗಾರ, ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಾಯಕ ನಿರ್ದೇಶಕ ಕುಮಾರ ಬೆಕ್ಕೇರಿ, ಯುವಜನ ಸೇವೆ ಮತ್ತು ಕ್ರೀಡಾ ಇಲಾಖೆಯ ಸಹಾಯಕ ನಿರ್ದೇಶಕ ಮಂಜುನಾಥಸ್ವಾಮಿ ಸೇರಿದಂತೆ ಜಿಲ್ಲಾ ಹಾಗೂ ತಾಲೂಕು ಮಟ್ಟದ ವಿವಿಧ ಇಲಾಖೆಗಳ ಅಧಿಕಾರಿ ಸಿಬ್ಬಂದಿಗಳು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು. ನಗರದ 150 ಕ್ಕೂ ಹೆಚ್ಚು ವಿವಿಧ ಶಾಲಾ ಕಾಲೇಜು ವಿದ್ಯಾರ್ಥಿಗಳು, ಇತರ ಸಂಘ ಸಂಸ್ಥೆಗಳ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ವಿಟಮಿನ್ ಕೆ ಇರುವ ಇಂತಹ ಆಹಾರಗಳು, ಇಮ್ಯೂನಿಟಿ ಹೆಚ್ಚು ಮಾಡಿ ಹೃದಯದ ಆರೋಗ್ಯ ಕಾಪಾಡುತ್ತೆ



ದೇಹಕ್ಕೆ ಬೇಕಾಗುವ ವಿಟಮಿನ್ ಹಾಗೂ ಖನಿಜಾಂಶಗಳು ನೈಸರ್ಗಿಕ ರೀತಿಯಿಂದ ಆಹಾರದ ಮೂಲಕ ಸಿಕ್ಕರೆ ಅದು ತುಂಬಾ ಒಳ್ಳೆಯದು. ಹೀಗಾಗಿ ವಿಟಮಿನ್ ಕೆ ಇರುವ ಕೆಲವು ಆಹಾರಗಳ ಬಗ್ಗೆ ತಿಳಿಯಲೇಬೇಕು. ಅದರಲ್ಲೂ ಪ್ರಮುಖವಾಗಿ ದೇಹದ ಮೂಳೆಗಳು ಗಟ್ಟಿಯಾಗಿರಬೇಕು ಹಾಗೂ ಹೃದಯ ದೀರ್ಘ ಕಾಲ ಚೆನ್ನಾಗಿ ಕೆಲಸ ಮಾಡಬೇಕು ಎಂದರೆ, ದೇಹಕ್ಕೆ ವಿಟಮಿನ್ ಕೆ ಅಂಶ ಸೇರಬೇಕು, ಇದಕ್ಕಾಗಿ ಇಂತಹ ಆರೋಗ್ಯಕಾರಿ ಪೋಷಕಾಂಶ ಇರುವ ಆಹಾರಗಳನ್ನು ತಮ್ಮ ಆಹಾರಪದ್ಧತಿಯಲ್ಲಿ ಸೇರಿಸಲೇಬೇಕು

ಹೃದಯ ಮತ್ತು ಪ್ರತಿರೋಧಕ ಶಕ್ತಿಯು ಸರಿಯಾಗಿರಬೇಕಾದರೆ ಆಗ ಇದಕ್ಕೆ ದೇಹದಲ್ಲಿ ಕೆಲವೊಂದು ವಿಟಮಿನ್ ಗಳು ಅಗತ್ಯವಾಗಿ ಬೇಕೇಬೇಕು. ಇಂತಹ ವಿಟಮಿನ್ ಗಳಲ್ಲಿ ವಿಟಮಿನ್ ಕೆ ಕೂಡ ಒಂದಾಗಿದೆ. ವಿಟಮಿನ್ ಕೆ ನೆನಪಿನ ಶಕ್ತಿ ಸುಧಾರಣೆ ಮಾಡುವುದು ಮತ್ತು ರಕ್ತದೊತ್ತಡವನ್ನು ಸಮತೋಲನದಲ್ಲಿಡುವುದು.

ವಿಟಮಿನ್ ಕೆ ಕೊರತೆ ಇದ್ರೆ ಆಗ ಇದರಿಂದ ಹಲವಾರು ಸಮಸ್ಯೆಗಳು ಕಾಡಬಹುದು, ಮೂಳೆಗಳು ಕೂಡ ದುರ್ಬಲವಾಗಬಹುದು.



ವಿಟಮಿನ್ ಕೆ ಕೊರತೆ ಇದ್ದರೆ ಆಗ ಸಪ್ಲಿಮೆಂಟ್ ಗಳು ಲಭ್ಯವಿದ್ದು, ಇದನ್ನು ಸೇವನೆ ಮಾಡಬಹುದು. ಆದರೆ ನೈಸರ್ಗಿಕವಾಗಿ ದೇಹಕ್ಕೆ ವಿಟಮಿನ್ ಕೆ ಸಿಗಬೇಕಾದರೆ ಆಗ ಕೆಲವೊಂದು ವಿಧಾನಗಳನ್ನು ಅನುಸರಿಸಿಕೊಂಡು ಹೋಗಬೇಕು. ನಿತ್ಯದ ಆಹಾರ ಕ್ರಮದಲ್ಲಿ ಈ ಆಹಾರಗಳನ್ನು ಸೇರ್ಪಡೆ ಮಾಡಿಕೊಂಡರೆ ಆಗ ಖಂಡಿತವಾಗಿಯೂ ತುಂಬಾ ನೆರವಾಗಲಿದೆ.

**ದೇಹಕ್ಕೆ ವಿಟಮಿನ್ ಕೆ ಯಾಕೆ ಅಗತ್ಯ?**

ವಿಟಮಿನ್ ಕೆ ಕೊಬ್ಬಿನಲ್ಲಿ ಕರಗುವ ಪ್ರಮುಖ ವಿಟಮಿನ್ ಆಗಿದ್ದು, ಇದರಲ್ಲಿ ಪ್ರೊಥ್ರಾಮ್ಬಿನ್ ಇದೆ. ಇದು ರಕ್ತ ಹೆಪ್ಪುಗಟ್ಟುವುದನ್ನು ತಡೆಯುವುದು, ಮೂಳೆಗಳ ಚಯಾಪಚಯ ಸುಧಾರಿಸುವುದು ಮತ್ತು ರಕ್ತದಲ್ಲಿನ ಕ್ಯಾಲ್ಸಿಯಂ ಮಟ್ಟವನ್ನು ನಿಯಂತ್ರಿಸುವುದು. ವಿಟಮಿನ್ ಕೆ ವಯಸ್ಸಾದವರಲ್ಲಿ ನೆನಪಿನ ಶಕ್ತಿ ಹೆಚ್ಚಿಸುವುದು ಮತ್ತು ರಕ್ತದೊತ್ತಡವನ್ನು ಸಮತೋಲನದಲ್ಲಿಡಲು ಸಹಕಾರಿ ಆಗಿದೆ.

ವಿಟಮಿನ್ ಕೆ ಕೊರತೆ ಇದ್ದರೆ ಆಗ ಇದರಿಂದ ಒಸಡಿನಲ್ಲಿ ರಕ್ತಸ್ರಾವ ಕಂಡು ಬರುವುದು.

ವಿಟಮಿನ್ ಕೆ ಕೊರತೆಯಿಂದಾಗಿ ಮೂಳೆಗಳಲ್ಲಿ ಖನಿಜೀಕರಣ ಕಡಿಮೆ ಆಗುವುದು ಮತ್ತು ಇದರಿಂದಾಗಿ ಅಸ್ಥಿರಂಧ್ರತೆ ಕಂಡುಬರುವುದು. ಇನ್ನು ತಮ್ಮ ದೈನಂದಿನ ಆಹಾರ ಕ್ರಮದಲ್ಲಿ ಈ ಆಹಾರಗಳನ್ನು ಸೇರ್ಪಡೆ ಮಾಡಿದರೆ ಆಗ ಇದರಿಂದ ವಿಟಮಿನ್ ಕೆ ಅಂಶವು ದೇಹಕ್ಕೆ ಸರಿಯಾಗಿ ಸಿಗುವುದು.

**ಬ್ರಾಕೋಲಿ**

ವಿಟಮಿನ್ ಕೆ ಉತ್ತಮ ಪ್ರಮಾಣದಲ್ಲಿ ಹೊಂದಿರುವ ಆಹಾರವೆಂದರೆ ಅದು ಬ್ರಾಕೋಲಿ. ಇದರಲ್ಲಿ ವಿಟಮಿನ್ ಕೆ ಸಮೃದ್ಧವಾಗಿರುವುದು ಮಾತ್ರವಲ್ಲದೆ, ನಾರಿನಾಂಶ, ಪ್ರೋಟೀನ್, ಕಬ್ಬಿಣಾಂಶ, ಪೊಟಾಶಿಯಂ, ಕ್ಯಾಲ್ಸಿಯಂ, ಸೆಲೆನಿಯಂ ಮತ್ತು ಮೆಗ್ನೀಸಿಯಮ್ ಕೂಡ ಇದೆ. ಹೀಗಾಗಿ ಇದು ಮೂಳೆಯ ಸಾಂದ್ರತೆ ಹೆಚ್ಚು ಮಾಡುವ ಜತೆಗೆ ಸ್ನಾಯುಗಳನ್ನು ಬಲಪಡಿಸುವುದು. ಬ್ರಾಕೋಲಿ ದೇಹದ ಆರೋಗ್ಯಕ್ಕೆ ತುಂಬಾ ಒಳ್ಳೆಯದು.

**ಬಾಳೆಹಣ್ಣು**

ಈ ಹಣ್ಣಿನಲ್ಲಿ ಕೂಡ ವಿಟಮಿನ್ ಕೆ ಉತ್ತಮ ಪ್ರಮಾಣದಲ್ಲಿದೆ. ಇದರಲ್ಲಿ ಇರುವಂತಹ ಪ್ರಮುಖ ಪೋಷಕಾಂಶಗಳು ಜೀರ್ಣಕ್ರಿಯೆಗೆ ಸಹಕಾರಿ ಮತ್ತು ತೂಕ ನಿರ್ವಹಣೆ ಮಾಡುವುದು.

ವಿಟಮಿನ್ ಕೆ ಅಂಶವು ಬಾಳೆ ಹಣ್ಣಿನಲ್ಲಿದ್ದು, ಇದನ್ನು ದೇಹವು ಹೀರಿಕೊಳ್ಳುವುದು ಮತ್ತು ಕಾರ್ಬೋ ಹೈಡ್ರೇಟ್ಸ್ ಮತ್ತು ಕೊಬ್ಬನ್ನು ಚಯಾಪಚಯಗೊಳಿಸಿ ಶಕ್ತಿಯಾಗಿ ಪರಿವರ್ತಿಸಲು ನೆರವಾಗುವುದು.

ಕಿಡ್ನಿ ಮತ್ತು ಯಕೃತ್ ನಲ್ಲಿ ಇರುವ ರಾಸಾಯನಿಕವನ್ನು ಇದು ತೆಗೆದು ನರ ವ್ಯವಸ್ಥೆಯು ಆರೋಗ್ಯಕಾರಿಯಾಗಿ ಇರುವಂತೆ ಮಾಡುವುದು.?

**ಅವಕಾಡೊ ಹಣ್ಣು**

?ಅವಕಾಡೊದಲ್ಲಿ ವಿಟಮಿನ್ ಕೆ ಅಂಶವು ಉತ್ತಮ ಪ್ರಮಾಣದಲ್ಲಿದ್ದು, ಇದು ಉರಿಯೂತ ವಿರುದ್ಧ ಹೋರಾಡುವುದು, ಕೊಲೆಸ್ಟ್ರಾಲ್ ಮಟ್ಟವನ್ನು ಸುಧಾರಣೆ ಮಾಡುವ ಜತೆಗೆ ಒಳ್ಳೆಯ ವಿಟಮಿನ್ ಕೆ ಮತ್ತು ಮೆಗ್ನೀಸಿಯಮ್ ಅಂಶವು ಇದರಲ್ಲಿದೆ.

ಈ ಹಣ್ಣಿನಲ್ಲಿ ಪೊಟ್ಯಾಶಿಯಂ ಮತ್ತು ನಾರಿನಾಂಶವು ಕೂಡ ಇದೆ. ಹೀಗಾಗಿ ದೀರ್ಘಕಾಲ ಹೊಟ್ಟೆ ತುಂಬಿದಂತೆ ಮಾಡುವುದು.

**ಬ್ಲೂಬೆರ್ರಿಗಳು**

ಬ್ಲೂಬೆರ್ರಿಗಳಲ್ಲಿ ಕೂಡ ವಿಟಮಿನ್ ಕೆ ಅಂಶವು ಉತ್ತಮ ಪ್ರಮಾಣದಲ್ಲಿದೆ. ಇದರಲ್ಲಿ ಕ್ಯಾಲರಿ ಅಂಶವು ಕಡಿಮೆ ಇದ್ದು, ಪೋಷಕಾಂಶ ಮತ್ತು ಆ?ಯಂಟಿ ಆಕ್ಸಿಡೆಂಟ್ ಸಮೃದ್ಧವಾಗಿದೆ. ವಿಟಮಿನ್ ಕೆ ಮತ್ತು ಆ?ಯಂಟಿ ಆಕ್ಸಿಡೆಂಟ್ ಇರುವ ಬ್ಲೂಬೆರ್ರಿಯು ಹೃದಯದ ಕಾಯಿಲೆ ಅಪಾಯವನ್ನು ಕಡಿಮೆ ಮಾಡುವುದು. ಎಲ್ ಡಿಎಲ್ ಕೊಲೆಸ್ಟ್ರಾಲ್ ಮಟ್ಟ ಮತ್ತು ರಕ್ತದೊತ್ತಡವನ್ನು ತಗ್ಗಿಸುವುದು.



**ಗೋಡಂಬಿ**

ಬಾದಾಮಿ ಮತ್ತು ಗೋಡಂಬಿಯಲ್ಲಿ ಉತ್ತಮ ಪ್ರಮಾಣದ ವಿಟಮಿನ್ ಕೆ ಅಂಶವು ಇದೆ. ಇವುಗಳಲ್ಲಿ ಅಧಿಕ ಪ್ರಮಾಣದ ವಿಟಮಿನ್ ಮತ್ತು ಮೆಗ್ನಿಶಿಯಂ ಅಂಶವಿದ್ದು, ಇದು ಹೃದಯದ ಆರೋಗ್ಯಕ್ಕೆ ಒಳ್ಳೆಯದು ಮತ್ತು ಹಸಿವನ್ನು ತಗ್ಗಿಸುವುದು.

ಬೀಜದಲ್ಲಿ ಏಕಪರ್ಯಾಪ್ತ ಕೊಬ್ಬಿನಾಂಶ ವಿದ್ದು, ಇದು ರಕ್ತದಲ್ಲಿನ ಸಕ್ಕರೆ ಮಟ್ಟವನ್ನು ಸುಧಾರಣೆ ಮಾಡುವುದು ಮತ್ತು ಉರಿಯೂತ ಶಮನಕಾರಿ ಗುಣಗಳು ಇದರಲ್ಲಿದೆ.

**ಮೊಟ್ಟೆ**

ಪ್ರೋಟೀನ್ ಅಧಿಕವಾಗಿ ಇರುವ ಮೊಟ್ಟೆಯಲ್ಲಿ ವಿಟಮಿನ್ ಕೆ ಮತ್ತು ಇತರ ಕೆಲವು ಪ್ರಮುಖ ವಿಟಮಿನ್ ಮತ್ತು ಖನಿಜಾಂಶಗಳಾಗಿರುವಂತಹ ಫಾಲಟೆ ಮತ್ತು ಸೆಲೆನಿಯಂ ಕೂಡ ಇದೆ.

ಸ್ನಾಯುಗಳು ಸರಿಯಾಗಿ ಬೆಳವಣಿಗೆ ಆಗಲು ಮತ್ತು ಮೂಳೆಗಳ ಶಕ್ತಿಯನ್ನು ಕಾಪಾಡಿಕೊಳ್ಳಲು ಮೊಟ್ಟೆಯಲ್ಲಿ ಪ್ರಮುಖ ಪೋಷಕಾಂಶಗಳು ಇವೆ. ಮೊಟ್ಟೆಯು ಎಚ್ ಡಿಎಲ್ ಕೊಲೆಸ್ಟ್ರಾಲ್ ಮಟ್ಟ ಹೆಚ್ಚಿಸುವುದು. ಇದರಿಂದ ಹೃದಯದ ಕಾಯಿಲೆ ಅಪಾಯವು ಕಡಿಮೆ ಆಗುವುದು.



## ಚಳಿಗಾಲದಲ್ಲಿ ಗಟ್ಟಿಯಾದ ತೆಂಗಿನೆಣ್ಣೆಯನ್ನು ಸುಲಭವಾಗಿ ಕರಗಿಸುವುದು ಹೇಗೆ?



ಚಳಿಗಾಲದಲ್ಲಿ ತಾಪಮಾನದ ಕುಸಿತದಿಂದಾಗಿ, ಫ್ರಿಜ್ ನ ಹೊರಗೆ ಇಟ್ಟಾಗಲೂ ಅನೇಕ ವಸ್ತುಗಳು ಹೆಪ್ಪುಗಟ್ಟುತ್ತವೆ. ಅವುಗಳಲ್ಲಿ ಒಂದು ತೆಂಗಿನ ಎಣ್ಣೆ. ಚರ್ಮವನ್ನು ಒಣಗದಂತೆ ರಕ್ಷಿಸಲು, ಕೂದಲನ್ನು ದಪ್ಪವಾಗಿ, ಗಾಢವಾಗಿ ಮತ್ತು ಉದ್ದವಾಗಿಸಲು ತೆಂಗಿನೆಣ್ಣೆಯನ್ನು ಹಚ್ಚುತ್ತೇವೆ. ಚಳಿಗಾಲದಲ್ಲಿ ಎಣ್ಣೆ ಗಟ್ಟಿಯಾಗುವುದರಿಂದ ನಮಗೆ ಕೂಡಲೇ ಬಳಸಲು ಸಾಧ್ಯವಾಗುವುದಿಲ್ಲ. ಎಣ್ಣೆಯನ್ನು ಸಹಜ ಸ್ಥಿತಿಗೆ ತರಲು ಇಲ್ಲಿವೆ ಕೆಲವು ಸಲಹೆಗಳು.

ಚಳಿಗಾಲದಲ್ಲಿ ತೆಂಗಿನ ಎಣ್ಣೆ ಹೆಪ್ಪುಗಟ್ಟುವುದು ಬಹಳ ಸಾಮಾನ್ಯ ಸಮಸ್ಯೆಯಾಗಿದೆ. ತಾಪಮಾನವು 24 ರಿಂದ 25 ಡಿಗ್ರಿ ಸೆಲ್ಸಿಯಸ್ ಆಗಿರುವುದರಿಂದ, ಶೀತದಲ್ಲಿ ಎಣ್ಣೆ ಹೆಪ್ಪುಗಟ್ಟಲು ಪ್ರಾರಂಭಿಸುತ್ತದೆ. ಕಿರಿದಾದ ಬಾಯಿಯ ಬಾಟಲಿಯಲ್ಲಿ ನೀವು ಎಣ್ಣೆ ತುಂಬಿಸಿಟ್ಟಿದ್ದರೆ ಅದನ್ನು ತಕ್ಷಣವೇ ತೆಗೆಯಲು ಸಾಧ್ಯವಾಗುವುದಿಲ್ಲ. ನಾವು ತರಾತುರಿಯಲ್ಲಿದ್ದಾಗ ಇಂತಹ ಸಮಸ್ಯೆಗಳನ್ನು ಎದುರಿಸುವುದು ತುಂಬಾ ಕಿರಿಕಿರಿಯನ್ನುಂಟು ಮಾಡುತ್ತದೆ. ಚಳಿಗಾಲದಲ್ಲಿ ಚರ್ಮ ಒರಟಾಗುತ್ತದೆ ಮತ್ತು ಒಡೆಯುತ್ತದೆ. ಇದರಿಂದ ತಪ್ಪಿಸಿಕೊಳ್ಳಲು ನಾವು ಸುಲಭವಾಗಿ ಸಿಗುವ ಮನೆಯಲ್ಲೇ ಲಭ್ಯವಿರುವ ತೆಂಗಿನೆಣ್ಣೆಯನ್ನು ಹಚ್ಚುತ್ತೇವೆ. ಆದರೆ ಚಳಿಗಾಲದಲ್ಲಿ ಎಣ್ಣೆ ಗಟ್ಟಿಯಾಗುವುದರಿಂದ ನಮಗೆ ಕೂಡಲೇ ಬಳಸಲು ಆಗುವುದಿಲ್ಲ. ಅಲ್ಲದೆ ಅಡುಗೆ ಮಾಡಲು ಹೊರಟಾಗ ಎಣ್ಣೆ ಬಗ್ಗಿಸುವಾಗ ಎಣ್ಣೆ ಹೊರಬರುವುದಿಲ್ಲ. ನಾವು ತೆಂಗಿನ ಎಣ್ಣೆಯನ್ನು ಸುಲಭವಾಗಿ ಕರಗಿಸುವ ಕೆಲವು ಮಾರ್ಗಗಳ ಬಗ್ಗೆ ಇಲ್ಲಿದೆ ಮಾಹಿತಿ.

**ತೆಂಗಿನೆಣ್ಣೆ ಬಾಟಲಿಯನ್ನು ಬಿಸಿನೀರಿನಲ್ಲಿಡಿ**

ತೆಂಗಿನ ಎಣ್ಣೆಯನ್ನು ಕರಗಿಸಲು, ನೀವು ಎಣ್ಣೆ ಬಾಟಲಿ ಅಥವಾ ಪಾತ್ರೆಯನ್ನು ನೇರವಾಗಿ ಬಿಸಿ ನೀರಿನಲ್ಲಿ ಹಾಕಬಹುದು. ಆದರೆ ನೀರು ತುಂಬಾ ಬಿಸಿಯಾಗಿಲ್ಲ ಎಂಬುದನ್ನು ಖಚಿತಪಡಿಸಿಕೊಳ್ಳಿ, ಇಲ್ಲದಿದ್ದರೆ ಬಾಟಲಿ ಕರಗಬಹುದು.

ನೀವು ಎಣ್ಣೆಯನ್ನು ಅಗಲವಾದ ಬಾಯಿಯ ಪಾತ್ರೆಯಲ್ಲಿ ಇಟ್ಟಿದ್ದರೆ, ಚಮಚದ ಸಹಾಯದಿಂದ ಅದನ್ನು ಒಂದು ಸಣ್ಣ ಪಾತ್ರಕ್ಕೆ ಹಾಕಿಕೊಳ್ಳಿ ನಂತರ ಬಿಸಿನೀರಿನಲ್ಲಿಟ್ಟು ಕರಗಿಸಬಹುದು. ಇದು ನಿಮ್ಮ ಕೆಲಸವನ್ನು ಸುಲಭವಾಗಿಸುತ್ತದೆ.

**ಇತರ ಎಣ್ಣೆಯನ್ನು ಸೇರಿಸಿಡಿ**

ತೆಂಗಿನ ಎಣ್ಣೆ ಮತ್ತೆ ಗಟ್ಟಿಯಾಗುವುದನ್ನು ತಡೆಯಲು ನೀವು ಗಟ್ಟಿಯಾಗದ ಇತರ ಕೆಲವು ಎಣ್ಣೆಯನ್ನು ಸಹ ಸೇರಿಸಬಹುದು. ಇದಕ್ಕಾಗಿ ಆಲಿವ್ ಎಣ್ಣೆ, ಬಾದಾಮಿ ಎಣ್ಣೆ ಅಥವಾ ಸಾಸಿವೆ ಎಣ್ಣೆಯನ್ನು ತೆಗೆದುಕೊಳ್ಳಿ. ಈ ಯಾವುದೇ ಎಣ್ಣೆಗಳನ್ನು ಸ್ವಲ್ಪ ಪ್ರಮಾಣದಲ್ಲಿ ತೆಂಗಿನ ಎಣ್ಣೆಯೊಂದಿಗೆ ಬೆರೆಸುವುದರಿಂದ ಗಟ್ಟಿಯಾಗುವುದನ್ನು ತಡೆಯುತ್ತದೆ. ನಿಮಗೆ ಕೂಡಲೇ ಬಳಕೆಗೆ ಲಭ್ಯವಾಗುವಂತೆ ಸಹಾಯ ಮಾಡುತ್ತದೆ.

**ಬೆಚ್ಚಗಿನ ಸ್ಥಳದಲ್ಲಿಡಿ**

ಅಡುಗೆಮನೆಯಲ್ಲಿ ಅಡುಗೆ ಮಾಡುವಾಗ ತೆಂಗಿನ ಎಣ್ಣೆಯನ್ನು ಗ್ಯಾಸ್ ಒಲೆಯಂತಹ ಬೆಚ್ಚಗಿನ ಸ್ಥಳದಲ್ಲಿ ಇಟ್ಟರೆ, ಎಣ್ಣೆ ಸುಲಭವಾಗಿ ಕರಗುತ್ತದೆ. ನಿಮ್ಮ ಬಾಟಲಿ ಪ್ಲಾಸ್ಟಿಕ್ ಅಲ್ಲ ಎಂದು ಖಚಿತಪಡಿಸಿಕೊಳ್ಳಿ.

ಯಾಕೆಂದರೆ ಬಿಸಿಗೆ ಬಾಟಲಿಯೂ ಕರಗಬಹುದು. ಆದ್ದರಿಂದ ಸ್ಟೀಲ್ ಅಥವಾ ಗಾಜಿನ ಬಾಟಲಿಗಳಲ್ಲಿ ಎಣ್ಣೆ ತುಂಬಿಸಿಟ್ಟಿದ್ದರೆ ಮಾತ್ರ ಒಲೆಯ ಹತ್ತಿರ ಇಡ ಬಹುದು. ಆದ'ರೆ ಬೆಂಕಿ ತಾಗದಂತೆ ಜಾಗರೂಕತೆ ವಹಿಸಬೇಕು. ಗ್ಯಾಸ್ ಸ್ಟೌವ್ ನಿಂದ ಸ್ವಲ್ಪ ದೂರದಲ್ಲಿ ಬಾಟಲಿ ಇಡಬಹುದು. ನಿಮಗೆ ಅಡುಗೆ ಮಾಡಲು ತೆಂಗಿನೆಣ್ಣೆ ಬೇಕಿದ್ದರೆ ಸ್ವಲ್ಪ ಹೊತ್ತಿನ ಮೊದಲು ಬಾಟಲಿಯನ್ನು ಬೆಚ್ಚಗಿನ ಸ್ಥಳದಲ್ಲಿಡಿ.?

**ಅಗಲವಾದ ಬಾಯಿಯ ಬಾಟಲಿಯಲ್ಲಿಡಿ**

ಚಳಿಗಾಲದಲ್ಲಿ ತೆಂಗಿನ ಎಣ್ಣೆಯನ್ನು ಯಾವಾಗಲೂ ಅಗಲವಾದ ಬಾಯಿಯ ಬಾಟಲಿಯಲ್ಲಿ ಇಡಬೇಕು.

ಅಗಲವಾದ ಬಾಯಿಯ ಬಾಟಲಿಯಲ್ಲಿ ಹಾಕಿಟ್ಟರೆ ಚಮಚದ ಸಹಾಯದಿಂದ ಎಣ್ಣೆಯನ್ನು ತೆಗೆಯಲು ಸುಲಭವಾಗುತ್ತದೆ.

ತೆಂಗಿನ ಎಣ್ಣೆಯನ್ನು ಪ್ಲಾಸ್ಟಿಕ್ ಬದಲಿಗೆ ಸ್ಟೀಲ್ ಪಾತ್ರದಲ್ಲಿ ಹಾಕಿಟ್ಟರೆ, ಸುಲಭವಾಗಿ ಕರಗಿಸಲು ಸಾಧ್ಯವಾಗುತ್ತದೆ ಮತ್ತು ಬಾಟಲಿಗೆ ಹಾನಿಯಾಗುವುದಿಲ್ಲ.

**ಸೂರ್ಯನ ಶಾಖಕ್ಕೆ ಇಡಿ**

ನಿಮ್ಮ ಅಡುಗೆ ಕೋಣೆಗೆ ಸೂರ್ಯನ ಕಿರಣ ಬೀಳುವಂತಿದ್ದರೆ ಅದೇ ಜಾಗದಲ್ಲಿ ಬಾಟಲಿಯನ್ನು ಸ್ವಲ್ಪ ಸಮಯ ಇಟ್ಟರೆ ಎಣ್ಣೆ ಕರಗುತ್ತದೆ.

ಅಥವಾ ಹೊರಗಡೆ ಬಿಸಿಲಿದ್ದರೆ ಕಿಟಕಿಂಯ ಹತ್ತಿರ ತೆಂಗಿನೆಣ್ಣೆ ಬಾಟಲಿ ಇಟ್ಟು ಬಿಡಿ. ಸ್ವಲ್ಪ ಹೊತ್ತಿನಲ್ಲಿ ಎಣ್ಣೆ ಕರಗುತ್ತದೆ.



## ಆಹಾರ ತಿನ್ನಬೇಕಾದರೆ ಅಪ್ಪಿತಪ್ಪಿ ನೆಲದ ಮೇಲೆ ಬಿದ್ದರೆ, ಅದನ್ನು ತಿನ್ನಬೇಡಿ! ಇಲ್ಲಾಂದ್ರೆ ಕರುಳು ಒಣಗುತ್ತೆ, ವಾಂತಿ ನಿಲ್ಲಲ್ಲ

ಆಹಾರ ತಿನ್ನಬೇಕಾದರೆ ಅಪ್ಪಿ ತಪ್ಪಿ ನೆಲದ ಮೇಲೆ ಬಿದ್ದರೆ ಅದನ್ನು ಎತ್ತಿಕೊಂಡು ತಿನ್ನಬಾರದು. ಅದರಲ್ಲಿ ಕೊಳೆ ಮತ್ತು ರೋಗಾಣುಗಳು ಕಂಡು ಬರುತ್ತವೆ. ಯಾವ ಪ್ರದೇಶದ ಮೇಲೆ ಆಹಾರ ಬಿದ್ದಿದೆ ಎನ್ನುವುದರ ಮೇಲೆ ಸೋಂಕು ಅವರಂಬಿತವಾಗಿರುತ್ತದೆ. ಡಾಕ್ಟರ್ ಹೇಳುವ ಹಾಗೆ ನೆಲದ ಮೇಲೆ ಬಿದ್ದಿರುವ ಆಹಾರ ತಿನ್ನುವುದು ತುಂಬಾ ಡೇಂಜರ್!

ನೀವು ನೆಲದ ಮೇಲೆ ಬಿದ್ದಿರುವ ಆಹಾರ ತಿನ್ನುತ್ತೀರಾ? ತಪ್ಪು ತಿಳಿದುಕೊಳ್ಳಬೇಡಿ. ತುಂಬಾ ಜನರು ತಿನ್ನುವ ತಟ್ಟೆಯಿಂದ ಆಹಾರ ಕೆಳಗೆ





ಬಿದ್ದ ತಕ್ಷಣ ಅದನ್ನು ಎತ್ತಿಕೊಂಡು ತಿಂದು ಬಿಡುತ್ತಾರೆ. ನೆಲಕ್ಕೆ ಬಿದ್ದ ಆಹಾರಕ್ಕೆ ಏನು ಆಗಿರುವುದಿಲ್ಲ ಎಂದು ಅವರು ತಪ್ಪು ತಿಳಿದುಕೊಂಡಿರುತ್ತಾರೆ. ಆದರೆ ತಜ್ಞರು ಹೇಳುವುದೇ ಬೇರೆ. ಆಹಾರ ತಜ್ಞರು ಹೇಳುವ ಹಾಗೆ, ಆಹಾರ ಬಿದ್ದಂತಹ ಮೂರು ಅಥವಾ ಐದು ಸೆಕೆಂಡ್ ಒಳಗಾಗಿ ಅದನ್ನು ಎತ್ತಿಕೊಂಡು ತಿಂದರೆ ಅದರಲ್ಲಿ ಯಾವುದೇ ರೋಗಕಾರಕ ಅಂಶಗಳು ಇರುವುದಿಲ್ಲ. ಹಾಗೆಂದು ಇದನ್ನು ಆರೋಗ್ಯಕರ ಎಂದು ನಂಬಲು ಸಾಧ್ಯವೇ ಎಂದು ಗೊಂದಲ ಮೂಡುತ್ತದೆ.

**ಕ್ಯಾನ್ಸರ್ ಮತ್ತು ರಕ್ತ ಸಮಸ್ಯೆ**

ಆರೋಗ್ಯ ತಜ್ಞರಾದ ಡಾ. ರವಿ ಕೆ ಗುಪ್ತ ಹೇಳುವ ಹಾಗೆ ಇದು ಆರೋಗ್ಯಕ್ಕೆ ನಿಜಕ್ಕೂ ಡೇಂಜರ್. ಹಾಗಾಗಿ ಇದರ ಹೊರತಾಗಿ ಬೇರೆ ಆಲೋಚಿಸುವುದು ಒಳ್ಳೆಯದು. ಅವರ ಪ್ರಕಾರ ಕೆಲವೊಂದು ಆಹಾರಗಳನ್ನು ನೆಲಕ್ಕೆ ಬಿದ್ದ ನಂತರದಲ್ಲಿ ತಿನ್ನಲೇಬಾರದು. ಏಕೆಂದರೆ...

**ಹೊಟ್ಟೆ ಮತ್ತು ಕರುಳಿಗೆ ಬಹಳ ಸಮಸ್ಯೆ**

ನಮ್ಮ ಜೀರ್ಣಾಂಗ ವ್ಯವಸ್ಥೆ ಹೇಗೆ ಕೆಲಸ ಮಾಡುತ್ತದೆ ಎಂದರೆ ನಾವು ಸೇವಿಸುವ ಆಹಾರವನ್ನು ಜೀರ್ಣ ಮಾಡುತ್ತದೆ ಮತ್ತು ಅದರಲ್ಲಿರುವ ಪೌಷ್ಟಿಕಾಂಶಗಳನ್ನು ನಮ್ಮ ದೇಹಕ್ಕೆ ಹೀರಿಕೊಳ್ಳುವಂತೆ ಮಾಡುತ್ತದೆ.

ಒಂದು ವೇಳೆ ಆಹಾರದಲ್ಲಿ ರೋಗಾಣುಗಳು ಅಥವಾ ಕೊಳೆ ಇದ್ದರೆ, ನಮ್ಮ ಕರುಳು ಅದನ್ನು ಜೀರ್ಣ ಮಾಡಿಕೊಳ್ಳಲು ಸಾಧ್ಯವಿರುವುದಿಲ್ಲ. ಇದು ಫುಡ್ ಪಾಯಿಸನಿಂಗ್ ಆಗಲು ಕಾರಣವಾಗುತ್ತದೆ. ಆನಂತರದಲ್ಲಿ ಹೊಟ್ಟೆ ನೋವು, ಹೊಟ್ಟೆಯ ಸೆಳೆತ, ಕರುಳಿನ ಭಾಗದಲ್ಲಿ ನೋವು, ವಾಂತಿ ಭೇದಿ ಹೆಚ್ಚಿನ ಪ್ರಮಾಣದಲ್ಲಿ ಶುರು ವಾಗುತ್ತದೆ.

**ತಿನ್ನುವ ಆಹಾರದಿಂದಲೂ ತೊಂದರೆ**

ಬ್ಯಾಕ್ಟೀರಿಯಾ, ವೈರಸ್ ಮತ್ತು ಇನ್ನಿತರ ರಾಸಾಯನಿಕ ಅಂಶಗಳು ಆಹಾರವನ್ನು ಕಲುಷಿತಗೊಳಿಸುತ್ತವೆ. ವಿಶ್ವ ಆರೋಗ್ಯ ಸಂಸ್ಥೆ ಹೇಳುವ ಹಾಗೆ ಆಹಾರದಿಂದಲೇ 200 ಬಗೆಯ ಕಾಯಿಲೆಗಳು ಬರುತ್ತವೆ. ಸಾಧಾರಣ ಪ್ರಮಾಣದ ವಾಂತಿ ಭೇದಿಯಿಂದ ಹಿಡಿದು ಕ್ಯಾನ್ಸರ್‌ವರೆಗೆ ಕಾಯಿಲೆಗಳು ಕಾಡುತ್ತವೆ ಎಂದು ಹೇಳಲಾಗಿದೆ.





**ನೆಲದ ಮೇಲೆ ಆಹಾರ ಬಿದ್ದರೆ**

ಡಾ. ರವಿ ಗುಪ್ತ ಹೇಳುವ ಹಾಗೆ ಆಹಾರವನ್ನು ಟೈಲ್ಸ್, ಕಾರ್ಪೆಟ್ಸ್ ಮತ್ತು ಬೇರೆ ಬೇರೆ ಪ್ರದೇಶಗಳ ಮೇಲೆ ಬೀಳಿಸಿ ಸಂಶೋಧನೆ ಮಾಡಲಾಯಿತು. ಕೊಳೆ ಅಥ'ವಾ ಧೂಳು ಆಹಾರಕ್ಕೆ ಅಂಟಿಕೊಳ್ಳುವಲ್ಲಿ ಇದರಿಂದ ಬಂದಂತಹ ಫಲಿತಾಂಶ ಯಾವುದೇ ಪ್ರಭಾವ ಬೀರಿರಲಿಲ್ಲ. ಇದು ಕೇವಲ ಪ್ರದೇಶದ ವಿಧ ಮತ್ತು ಆಹಾರದ ವಿಧದ ಮೇಲೆ ಅವಲಂಬಿತವಾಗಿರುತ್ತದೆ. ನೆನಪಿರಲಿ ಗಾಳಿಯಲ್ಲೂ ಮಾರಕ ಸೂಕ್ಷ್ಮಾಣುಗಳು ಕಂಡು ಬರುತ್ತದೆ.

**ತಿನ್ನಬಹುದಾದ ಮತ್ತು ತಿನ್ನಬಾರದ ಆಹಾರಗಳು**

ಹೆಚ್ಚು ತೇವಾಂಶ ಇರುವ ಹಣ್ಣು, ಪಿಜ್ಜಾ ಇವುಗಳು ನೆಲಕ್ಕೆ ಬಿದ್ದರೆ ತಿನ್ನಲು ಹೋಗಬೇಡಿ. ಏಕೆಂದರೆ ಇವುಗಳಲ್ಲಿ ತೇವಾಂಶ ಜಾಸ್ತಿ ಇರುತ್ತದೆ. ಆದರೆ ಒಣ ಆಹಾರ ಎಂದು ಕರೆಯಲ್ಪಡುವ ಬಿಸ್ಕೆಟ್, ರಸ್ಕ್ ಇಂತಹ ಆಹಾರಗಳು ಬಿದ್ದರೆ, ಅವುಗಳಿಗೆ ಸೂಕ್ಷ್ಮಾಣುಗಳು ಬೇಗನೆ ಅಂಟಿಕೊಳ್ಳುವುದಿಲ್ಲ. ಹಾಗಾಗಿ ಇವುಗಳನ್ನು ಜಾಗೃತೆಯಿಂದ ತಿನ್ನಬಹುದು. ಪಬ್ಲಿಕ್ ಸ್ಥಳಗಳಲ್ಲಿ ಮತ್ತು ಧೂಳು ಸಹಿತ ಇರುವ ಪ್ರದೇಶಗಳಲ್ಲಿ ತೇವಾಂಶ ಇರುವ ಆಹಾರಗಳು ಬಿದ್ದರೆ ಅದನ್ನು ತಿನ್ನಲು ಹೋಗಬೇಡಿ. ಮುಖ್ಯವಾಗಿ ಮಕ್ಕಳಿಗೆ ತಿನ್ನಲು ಕೊಡಬೇಡಿ.

**ಕೊನೆಯ ಮಾತು**

ಆಹಾರ ಸೇವನೆಯ ಪ್ರಮುಖ ಉದ್ದೇಶ ನಮ್ಮ ಆರೋಗ್ಯವನ್ನು ರಕ್ಷಣೆ ಮಾಡಿಕೊಳ್ಳುವುದು ಮತ್ತು ಪ್ರತಿ ದಿನ ನಮ್ಮ ದಿನನಿತ್ಯದ ಕೆಲಸ ಕಾರ್ಯ ಗಳಲ್ಲಿ ಉತ್ತಮವಾಗಿ ಕಾರ್ಯಚಟುವಟಿಕೆಯನ್ನು ಕೈಗೊಳ್ಳಲು ಅನುಕೂಲ ವಾಗುವಂತೆ ಮಾಡಿಕೊಳ್ಳುವುದು. ಹೀಗಾಗಿ ಆಹಾರ ಸೇವನೆಯ ವಿಚಾರ ದಲ್ಲಿ ಯಾವಾಗಲೂ ಕೂಡ ಎಚ್ಚರಿಕೆಯನ್ನು ವಹಿಸಿಬೇಕು.

ಒಂದು ವೇಳೆ ನಾವು ಸೇವನೆ ಮಾಡುವ ಆಹಾರ ಪೌಷ್ಟಿಕ ಸತ್ವಗಳಿಂದ ಕೂಡಿರದೆ ಇದ್ದರೆ, ಅದರಿಂದ ನಮ್ಮ ಆರೋಗ್ಯಕ್ಕೆ ಯಾವುದೇ ಪ್ರಯೋಜನಗಳು ಇರುವುದಿಲ್ಲ. ದೈಹಿಕವಾಗಿ ಸಹ ನಾವು ಕುಗ್ಗಿ ಹೋಗುತ್ತೇವೆ. ಅನಾರೋಗ್ಯ ನಮ್ಮ ದೇಹದಲ್ಲಿ ಮನೆಮಾಡುತ್ತದೆ.



# ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ

## ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪ್ರತಿಭಾ ಕಾರಂಜಿ ಸಹಕಾರಿ



ಗದಗ : ಮಕ್ಕಳ ಸರ್ವತೋಮುಖ ಬೆಳವಣಿಗೆಗೆ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮಗಳು ಸಹಕಾರಿಯಾಗಲಿವೆ ಎಂದು ವಿಧಾನ ಪರಿಷತ್ ಶಾಸಕ ಎಸ್.ವಿ.ಸಂಕನೂರ ತಿಳಿಸಿದರು.

ಗದಗ ಬೆಟಗೇರಿಯ ಲೊಯೊಲಾ ಪ್ರಾಥಮಿಕ ಹಾಗೂ ಪ್ರೌಢಶಾಲೆ ಆವರಣದಲ್ಲಿ ಶನಿವಾರ ಗದಗ ಜಿಲ್ಲಾ ಪಂಚಾಯತ್, ಶಾಲಾ ಶಿಕ್ಷಣ ಇಲಾಖೆ ವತಿಯಿಂದ ಹಮ್ಮಿಕೊಳ್ಳಲಾಗಿದ್ದ ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಹಾಗೂ ಕಲೋತ್ಸವ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ಮಕ್ಕಳ ಮಾನಸಿಕ, ದೈಹಿಕ ಹಾಗೂ ಭಾವನಾತ್ಮಕ ಬೆಳವಣಿಗೆಗೆ ಸರ್ಕಾರದಂದ ಅನೇಕ ಕಾರ್ಯಕ್ರಮಗಳನ್ನು ಹಮ್ಮಿಕೊಳ್ಳಲಾಗುತ್ತದೆ. ಪ್ರತಿಭಾ ಕಾರಂಜಿಯೂ ಸಹ ಒಂದು ಮಹತ್ವದ ಕಾರ್ಯಕ್ರಮವಾಗಿದ್ದು ಮಕ್ಕಳಲ್ಲಿ ಸುಪ್ತವಾಗಿರುವ ಪ್ರತಿಭೆಯನ್ನು ತಿಳಿದುಕೊಂಡು ಅದನ್ನು ಪ್ರೋತ್ಸಾಹಿಸಿ ಬೆಳೆಸುವುದು ಅವಶ್ಯಕವಾಗಿದೆ. ಮಕ್ಕಳು ಯಾವುದೇ ಕ್ಷೇತ್ರದಲ್ಲಿ ಸಾಧನೆ ಮಾಡಬೇಕಾದರೆ ಉದಾಸೀನ ಮನೋಭಾವನೆ ಹೊಂದದೇ ಉತ್ಸಾಹದಿಂದ ಮುನ್ನುಗ್ಗಬೇಕು ಕರೆ ನೀಡಿದರು.

ಸ್ವಾಮಿ ವಿವೇಕಾನಂದರು ಹೇಳಿದಂತೆ ದೇವರು ಪ್ರತಿಯೊಬ್ಬರಿಗೂ ಒಂದೊಂದು ತರಹ ಶಕ್ತಿ ಸಾಮರ್ಥ್ಯ ಕೊಟ್ಟಿರುತ್ತಾನೆ. ಆ ಸಾಮರ್ಥ್ಯದಿಂದ ಜೀವನದಲ್ಲಿ ನಾವು ಏನನ್ನಾದರೂ ಸಾಧಿಸಿ ಸಮಾಜಕ್ಕೆ ಕೊಡುಗೆ ನೀಡಬೇಕು. ಸಂಗೀತ ಕ್ಷೇತ್ರಕ್ಕೆ ಗದಗ ಜಿಲ್ಲೆಯ ಕೊಡುಗೆ ಅಪಾರವಾಗಿದ್ದು, ಡಾ. ಭೀಮಸೇನ ಜೋಶಿ, ವೀರೇಶ್ವರ ಪುಣ್ಯಾಶ್ರಮದ ಪಂಡಿತ ಪುಟ್ಟರಾಜ ಗವಾಯಿಗಳು ಹಾಗೂ ಕ್ರೀಡಾ ಕ್ಷೇತ್ರದಲ್ಲಿ ಜಿಲ್ಲೆಯ ರಾಜು ಬಗಾಡೆ, ಸುನೀಲ ಜೋಶಿ ಹೀಗೆ ಅನೇಕರು ವಿವಿಧ ಕ್ಷೇತ್ರಗಳಲ್ಲಿ ತಮ್ಮದೇ ಆದ ಕೊಡುಗೆ ನೀಡಿದ್ದಾರೆ. ಜಿಲ್ಲಾ ಮಟ್ಟದ ಪ್ರತಿಭಾ ಕಾರಂಜಿ ಸ್ಪರ್ಧೆಯಲ್ಲಿ ವಿಜೇತರಾದವರು ರಾಜ್ಯ ಮಟ್ಟದಲ್ಲಿ ಪಾಲ್ಗೊಂಡು ಗದಗ ಜಿಲ್ಲೆಗೆ ಕೀರ್ತಿ ತಂದುಕೊಡಬೇಕು ಎಂದು ಶಾಸಕ ಎಸ್.ವಿ.ಸಂಕನೂರ ಮಕ್ಕಳನ್ನು ಹುರಿದುಂಬಿಸಿದರು.

ತಾಲೂಕು ಗ್ಯಾರಂಟಿ ಸಮಿತಿ ಸದಸ್ಯರಾದ ಕೃಷ್ಣಗೌಡ ಎಚ್. ಪಾಟೀಲ ಮಾತನಾಡಿ ಮಕ್ಕಳು ಪಠ್ಯ ಹಾಗೂ ಪಠ್ಯೇತರ ಚಟುವಟಿಕೆಗಳಲ್ಲಿ ಪಾಲ್ಗೊಳ್ಳುವ ಮನೋಭಾವನೆ ಹೊಂದಬೇಕು. ಮಕ್ಕಳಲ್ಲಿ ಹುದುಗಿರುವ ಕಲೆಗಳನ್ನು ಪ್ರೋತ್ಸಾಹಿಸುವುದು ಪಾಲಕರ ಹಾಗೂ ಶಿಕ್ಷಕರ ಕರ್ತವ್ಯವಾಗಿದೆ. ಜಿಲ್ಲೆಯ ಮಕ್ಕಳು ಪ್ರತಿಭಾ ಕಾರಂಜಿ ಕಾರ್ಯಕ್ರಮದಲ್ಲಿ ಪಾಲ್ಗೊಂಡು ರಾಜ್ಯ ಮಟ್ಟದಲ್ಲಿಯೂ ಸಹ ಗದಗ ಜಿಲ್ಲೆಯ ಕೀರ್ತಿ ತರಬೇಕೆಂದು ಮಕ್ಕಳಿಗೆ ಪ್ರೋತ್ಸಾಹಕ ನುಡಿಗಳನ್ನಾಡಿದರು.

ಶಾಲಾ ಶಿಕ್ಷಣ ಇಲಾಖೆಯ ಉಪನಿರ್ದೇಶಕ ಆರ್.ಎಸ್.ಬುರಡಿ ಪ್ರಾಸ್ತಾವಿಕವಾಗಿ ಮಾತನಾಡಿ ಮಕ್ಕಳಲ್ಲಿ ಹುದುಗಿರುವ ಪ್ರತಿಭೆಯನ್ನು ಗುರುತಿಸುವುದು, ಕಲೆಯನ್ನು ಪ್ರೋತ್ಸಾಹಿಸುವುದು ಪ್ರತಿಭಾ ಕಾರಂಜಿ ಕಾರ್ಯಕ್ರಮದ ಉದ್ದೇಶವಾಗಿದೆ. ಮಕ್ಕಳ ಮಾನಸಿಕ ಹಾಗೂ ದೈಹಿಕ ಬೆಳವಣಿಗೆಗೆ ಇಂತಹ ಕಾರ್ಯಕ್ರಮಗಳು ಸಹಕಾರಿಯಾಗುತ್ತವೆ ಎಂದರು.

ಕಾರ್ಯಕ್ರಮದಲ್ಲಿ ಗದಗ ಬೆಟಗೇರಿ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ಅಕ್ಬರಸಾಬ ಬಬರ್ಜಿ, ಜಿಲ್ಲಾಧಿಕಾರಿ ಸಿ.ಎನ್.ಶ್ರೀಧರ್, ಜಿ.ಪಂ. ಮುಖ್ಯ ಕಾರ್ಯನಿರ್ವಹಣಾಧಿಕಾರಿ ಭರತ್ ಎಸ್, ಲೋಯಲಾ ಪ್ರಾಥಮಿಕ ಹಾಗೂ ಪ್ರೌಢಶಾಲೆಯ ಮುಖ್ಯೋಪಾಧ್ಯಾಯರುಗಳಾದ ಸಿಸ್ಟರ್ ಬೆಂಗೆರಾ ಬಿ.ಎಸ್, ಸಿಸ್ಟರ್ ಪಿಂಟೋ, ಶಿಕ್ಷಣಾಧಿಕಾರಿಗಳ ಸಂಘದ ಜಿಲ್ಲಾ ಅಧ್ಯಕ್ಷರಾದ ಜಿ.ಎಲ್. ಬಾರಾಟಕ್ಕೆ, ಬಿ.ಎಫ್. ಪೂಜಾರ, ವಿ.ಎಂ. ಹಿರೇಮಠ, ಎಂ.ಕೆ. ಲಮಾಣಿ, ವಿಜಯ ಕಿರೇಸೂರ, ಶಿವಾನಂದ ಗಿಡ್ನಂದಿ, ಬಿ.ಕೆ.ನಿಂಬನಗೌಡ್ರ , ವಸಂತ ಕಲಕಂಬಿ , ರವಿ ಕೋಟಿಯವರ, ಆರ್.ಎಂ. ಶಿರಹಟ್ಟಿ, ಹಾಲನಗೌಡ ಪಾಟೀಲ, ಎಂ.ಎಸ್. ಕುಚಬಾಳ, ರಾಜು ಚೌವ್ಹಾಣ, ಸರಸ್ವತಿ ಡಿ ಕನವಳ್ಳಿ , ವಿವಿಧ ಶಾಲಾ ಶಿಕ್ಷಕರು, ವಿದ್ಯಾರ್ಥಿಗಳು ಹಾಜರಿದ್ದರು.

ಶಿಕ್ಷಣ ಇಲಾಖೆಯ ಎಂ.ಎ. ಯರಗುಡಿ ಕಾರ್ಯಕ್ರಮ ನಿರೂಪಿಸಿದರು. ಎಂ.ಎಚ್. ಕಂಬಳಿ ವಂದಿಸಿದರು.

# ಫೋನ್ ಇನ್ ಕಾರ್ಯಕ್ರಮ

ಗೋಕಾಕ: ಗೋಕಾಕ ಶೈಕ್ಷಣಿಕ ವಲಯದ ಎಸ್‌ಎಸ್‌ಎಲ್‌ಸಿ ವಿದ್ಯಾರ್ಥಿಗಳಿಗೆ ಕಳೆದ 10 ವರ್ಷಗಳಿಂದ ನಡೆಸಿಕೊಂಡು ಬರುತ್ತಿರುವ ವಿನೂತನ ಕಾರ್ಯಕ್ರಮ ಮಿಸ್ ಕಾಲ್ ಮಾಡಿರಿ ಉತ್ತರ ಪಡೆಯಿರಿ ಫೆ.3 ರಿಂದ ಫೆ9ರ ವರೆಗೆ ಹಮ್ಮಿಕೊಳ್ಳಲಾಗಿದೆ ಎಂದು ಕ್ಷೇತ್ರ ಶಿಕ್ಷಣಾಧಿಕಾರಿ ಜಿ ಬಿ ಬಳಗಾರ ತಿಳಿಸಿದ್ದಾರೆ.

ಈ ಕುರಿತು ಪತ್ರಿಕಾ ಪ್ರಕಟನೆ ನೀಡಿರುವ ಅವರು, ಸೋಮವಾರ ದಿ.3ರಂದು ನಗರದ ಮಯೂರ ಆಂಗ್ಲ ಮಾಧ್ಯಮ ಶಾಲೆಯಲ್ಲಿ 6ಗಂಟೆಯಿಂದ 8ಗಂಟೆಯ ವರೆಗೆ ಫೋನ್ ಇನ್ ಕಾರ್ಯಕ್ರಮ ನಡೆಸಲಾಗುತ್ತಿದ್ದು, ಎಸ್‌ಎಸ್‌ಎಲ್‌ಸಿ ವ್ಯಾಸಾಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಎಲ್ಲ ಶಿಕ್ಷಕರು ತಮ್ಮ ತಮ್ಮ ವಿಷಯಗಳ ಬಗ್ಗೆ ವಿದ್ಯಾರ್ಥಿಗಳಲ್ಲಿರುವ ಸಮಸ್ಯೆಗಳ ಬಗ್ಗೆ ಉತ್ತರ ನೀಡಲಿದ್ದಾರೆ. ಆಯಾ ಶಿಕ್ಷಕರಿಗೆ ಕರೆ ಮಾಡಿ ಸಮಸ್ಯೆಗಳನ್ನು ಪರಿಹರಿಸಿಕೊಳ್ಳಬೇಕೆಂದು ಕೋರಿದ್ದಾರೆ.

ಕನ್ನಡ ಮಾಧ್ಯಮ

ವಿಷಯ ಕನ್ನಡ: ಟಿ ಬಿ ಬಿಲ್ಲ 9449181318, ಮಲ್ಲಿಕಾರ್ಜುನ ಮುಕಾರ್ತಿಹಾಳ 9611006919, ಬಿ ಬಿ ನಿರ್ವಾಣಿ 7406712663, ಎಮ್ ಆಯ್ ಗಾಣಿಗೇರ 7019913562, ಶ್ರೀಮತಿ ಎಸ್ ಬಿ ಮಾಳಿ 9845205105.

ಇಂಗ್ಲೀಷ: ಎ ಎನ್ ತೋಟಗಿ 9448700634, ಎಮ್ ಕೆ ಕುರಬೇಟ 9449578226, ಎಸ್ ಜಿ ಮುಚ್ಚಂಡಿಹಿರೇಮಠ 9731655705, ಬಿ ಎಸ್ ಮಾಠ 9113505864, ಎಸ್ ಬಿ ಬೆಕ್ಕನ್ನವರ 9740636625.

ವಿಜ್ಞಾನ: ಆರ್ ಎಸ್ ಹೆಬ್ಬಾಳೆ 8150887766, ಆರ್ ವ್ಹಿ ದೇಮಶೆಟ್ಟಿ 9448908010, ಆರ್ ಎಲ್ ಮಿರ್ಜಿ 8277035275, ಆರ್ ಎಮ್ ದೇಶಪಾಂಡೆ 8050250611, ಎಲ್ ವ್ಹಿ ಕಮತ 9481007030, ಬಿ ಎಮ್ ವಾಸೆದಾರ 9481746924, ಶ್ರೀಮತಿ ಎನ್ ಬಿ ನೇಸರಗಿ 9448758698.



ಗಣಿತ: ಬಿ ಕೆ ಕುಲಕರ್ಣಿ 9449949129, ಎಸ್ ಎಸ್ ತೇರಣಿ 9036187425, ಬಿ ಎಸ್ ಬೋಗೋಣಿ 9538063266, ಎಸ್ ಬಿ ಕ್ಯಾಸ್ತಿ 9886686801, ಎಸ್ ಎನ್ ಸತ್ತಿಗೇರಿ 7619671983.

ಸಮಾಜ ವಿಜ್ಞಾನ: ಬಿ ಎಸ್ ಜೋಲಾಪೂರೆ 9481739033, ಎನ್ ಬಿ ತೋರಣಗಟ್ಟಿ 9900349986, ಬಿ ಜಿ ಮಾನೆ 6360081223, ಶ್ರೀಮತಿ ಪಿ ಐ ಇಂಗಳೆ 9449106520, ಶ್ರೀಮತಿ ಎಸ್ ಬಿ ತಳವಾರ 8151812433.

ಹಿಂದಿ: ಎಮ್ ಎಮ್ ಕೊಡ್ಲೊಳ್ಳಿ 9972616050, ಶ್ರೀಮತಿ ಪಿ ಬಿ ಖನ್ನೂರ 9481007020, ಶ್ರೀಮತಿ ಆರ್ ಎಸ್ ನಾಯಿಕ 9900945753, ಶ್ರೀ ಎಚ್ ಬಿ ಹುಲ್ಲೋಳಿ 9449504636.

ಉರ್ದು ಮಾಧ್ಯಮ

ಕನ್ನಡ ಶ್ರೀಮತಿ ಜಿ ಆಯ್ ಮುರಕುಂಬಿ 8277330812, ಬಿ ಎಮ್ ಕೊಪ್ಪದ 7411057680. ಇಂಗ್ಲೀಷ ಶ್ರೀಮತಿ ಬಿ ಎ ಜಮಾದಾರ 8123778977. ಉರ್ದು ಶ್ರೀಮತಿ ಪಿ ಎಮ್ ಮೊಮಿನ 8050033387. ಗಣಿತ ಶ್ರೀಮತಿ ಎಫ್ ಎಮ್ ಖೈರದಿ 9902877807, ಶ್ರೀಮತಿ ಎಸ್ ಎಮ್ ಖಾಜಿ 7829027187. ವಿಜ್ಞಾನ ಶ್ರೀಮತಿ ಎನ್ ಜೆ ಚೌಧರಿ 8884257522. ಸಮಾಜ ವಿಜ್ಞಾನ ಶ್ರೀಮತಿ ಎನ್ ಎನ್ ಕಮನಾ 8050814627.

ಆಂಗ್ಲ ಮಾಧ್ಯಮ

ಕನ್ನಡ ಬಿ ಎಮ್ ಕೊಪ್ಪ 9411057680, ಬಿ ಜಿ ಪಾಟೀಲ 9845129420. ಇಂಗ್ಲೀಷ ಶ್ರೀಮತಿ ಸುಚಿತ್ರಾ ಹತಪಾಕಿ 9986295194, ಶ್ರೀಮತಿ ಎಸ್ ಸಿ ಹನಮಿನಾಳ 7411120078. ಹಿಂದಿ ಶ್ರೀಮತಿ ಎಸ್ ಕೆ ಪಾಟೀಲ 9902037406. ಗಣಿತ ಆರ್ ವಿ ನಾಯಿಕ 8310847733, ವಿನೋದ ವೈದು 861854721. ವಿಜ್ಞಾನ ಅಲ್ತಾಫ ಮುಲ್ತಾನಿ 7683021084. ಜೈನಬಿ ಹುದಲಿ 6364305016. ಸಮಾಜವಿಜ್ಞಾನ ಶ್ರೀಮತಿ ವಿಜಯಶ್ರೀ ಹೊಸಕೋಟಿ 8971817271.

ಪರೀಕ್ಷಾ ಭಯ ನಿವಾರಣೆ, ಮಾನಸಿಕ ಸ್ಥೈರ್ಯ, ಆತ್ಮ ವಿಶ್ವಾಸ ಹೆಚ್ಚಿಸಲು ಕ್ಷೇತ್ರ ಶಿಕ್ಷಣಾಧಿಕಾರಿ ಜಿ ಬಿ ಬಳಗಾರ 9902715414, 9480695043ಗೆ ಹಾಗೂ ಈ ಎಲ್ಲ ಶಿಕ್ಷಕರು ಕಾರ್ಯಕ್ರಮದಲ್ಲಿ ಭಾಗಿಯಾಗಲಿದ್ದು ವಿದ್ಯಾರ್ಥಿಗಳು ಶಿಕ್ಷಕರನ್ನು ಸಂಪರ್ಕಿಸಿ ಕಾರ್ಯಕ್ರಮದ ಸದುಪಯೋಗಪಡಿಸಿಕೊಳ್ಳುವಂತೆ ಕೋರಿದ್ದಾರೆ.



ಕಳೆದ 9 ವರ್ಷಗಳಿಂದ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿಗಳು ಉತ್ತಮ ಫಲಿತಾಂಶ ಪಡೆಯಲಿ ಎಂಬ ಸದ್ದುದ್ದೇಶದಿಂದ ಗೋಕಾಕ ವಲಯದ ಎಲ್ಲಾ ಶಿಕ್ಷಕರು ತಮ್ಮ ಶಾಲಾ ಅವಧಿ ಮುಗಿದ ನಂತರವೂ ಸಹ ಕಾಳಜಿಯಿಂದ ವಿದ್ಯಾರ್ಥಿಗಳ ಶ್ರೇಯೋಭಿವೃದ್ದಿಗೆ ಶ್ರಮಿಸುತ್ತಿರುವುದು ಶ್ಲಾಘನೀಯವಾಗಿದ್ದು, ಈ ಕಾರಣಕ್ಕಾಗಿ ವಲಯದ ಎಲ್ಲಾ ಶಿಕ್ಷಕ ಮಿತ್ರರು ಅಭಿನಂಧನಾರ್ಹರು.

**– ಶಾಸಕ ರಮೇಶ ಜಾರಕಿಹೊಳಿ**

# ಕಾನೂನು ಅರಿವು ನೆರವು ಕಾರ್ಯಕ್ರಮ ಉದ್ಘಾಟನೆ



ಸಿಂದಗಿ : 18 ವರ್ಷ ತುಂಬಿದ ನವ ಮತದಾರರು ಕೂಡಲೇ ಮತದಾರರ ಪಟ್ಟಿಯಲ್ಲಿ ಹೆಸರು ಸೇರ್ಪಡೆಗೊಳಿಸಬೇಕು ಯುವಕರು, ಯುವತಿಯರು ಜವಾಬ್ದಾರಿಯುತವಾಗಿ ಮುಂದೆ ಬರುವ ಚುನಾವಣೆಗಳಲ್ಲಿ ಕಡ್ಡಾಯವಾಗಿ ಮತದಾನ ಮಾಡಬೇಕು ಮತದಾನವು ನಮ್ಮ ಸಂವಿಧಾನದ ಹಕ್ಕು ಎಂದು ಹಿರಿಯ ನ್ಯಾಯಾಧೀಶರಾದ ನಾಗೇಶ ಮೊಗೇರ್ ಹೇಳಿದರು.

ಪಟ್ಟಣದ ಆರ್.ಡಿ.ಪಾಟೀಲ ಪದವಿ ಪೂರ್ವ ಕಲಾ, ವಾಣಿಜ್ಯ ಹಾಗೂ ವಿಜ್ಞಾನ ಪದವಿ ಪೂರ್ವ ಮಹಾವಿದ್ಯಾಲಯದಲ್ಲಿ ಹಮ್ಮಿಕೊಂಡ ತಾಲೂಕಾ ಕಾನೂನು ಸೇವಾ ಸಮಿತಿ, ವಕೀಲರ ಸಂಘ, ತಾಲೂಕಾಡಳಿತ ಸಿಂದಗಿ ಹಾಗೂ ಆರ್.ಡಿ.ಪಾಟೀಲ ಪ.ಪೂ. ಮಹಾವಿದ್ಯಾಲಯ ಸಿಂದಗಿ ಇವುಗಳ ಸಂಯುಕ್ತಾಶ್ರಯದಲ್ಲಿ ರಾಷ್ಟ್ರೀಯ ಯುವ ದಿನಾಚರಣೆ ಮತ್ತು ರಾಷ್ಟ್ರೀಯ ಮತದಾರರ ದಿನಾಚರಣೆ ಅಂಗವಾಗಿ ಕಾನೂನು ಅರಿವು ನೆರವು ಕಾರ್ಯಕ್ರಮವನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಯಾವುದೇ ಆಮಿಷಗಳಿಗೆ ಒಳಗಾಗಿ ಮತವನ್ನು ಮಾರಿಕೊಳ್ಳದೇ ಗೌಪ್ಯತೆ ಕಾಪಾಡಿಕೊಂಡು ಆತ್ಮಸಾಕ್ಷಿಗೆ ಅನುಗುಣವಾಗಿ ಮತದಾನ ಮಾಡಬೇಕು. ಜನಪ್ರತಿನಿಧಿಗಳನ್ನು ಆಯ್ಕೆ ಮಾಡುವ ಹಕ್ಕನ್ನು ನಮ್ಮ ಸಂವಿಧಾನ ನಮಗೆ ನೀಡಿದೆ. ದೇಶ ಮಾತ್ರವಲ್ಲ ದೇಶದ ಚುಕ್ಕಾಣಿ ಹಿಡಿಯುವ ನಾಯಕರ ಭವಿಷ್ಯವನ್ನು ಅಳೆಯುವ ಚುನಾವಣೆಯಲ್ಲಿ ನಿಮ್ಮ ಮತ ವ್ಯರ್ಥವಾಗಬಾರದು. ಸ್ವಾಮಿ ವಿವೇಕಾನಂದರ ಆದರ್ಶಗಳನ್ನು ಇಂದಿನ ಪ್ರಜ್ಞಾವಂತ ಯುವಜನತೆ ಮೈಗೂಡಿಸಿಕೊಳ್ಳಬೇಕು ಎಂದರು.

ಅಧ್ಯಕ್ಷತೆ ವಹಿಸಿದ್ದ ತಹಶೀಲದಾರ ಪ್ರದೀಪಕುಮಾರ ಹಿರೇಮಠ ಮಾತನಾಡಿ, ಪ್ರತಿಯೊಬ್ಬ ಮತದಾರ ಸಹ ಮತದಾನದ ಮಹತ್ವವನ್ನು ಅರಿತುಕೊಂಡು ಮತದಾನ ಮಾಡಬೇಕಾಗಿದೆ. ದೇಶದ ಭವಿಷ್ಯವನ್ನು ರೂಪಿಸುವಲ್ಲಿ ಪ್ರತಿಯೊಬ್ಬ ಮತದಾರನ ಧ್ವನಿ ಮುಖ್ಯವಾಗಿದೆ ಎಂದರು.

ಮುಖ್ಯ ಅತಿಥಿಗಳಾಗಿ ಎ.ಎಂ.ಅಂಗಡಿ, ಎಸ್.ಕೆ.ಪೂಜಾರಿ, ಎಸ್.ಬಿ.ಖಾನಾಪೂರ, ಎನ್.ಬಿ.ಪೂಜಾರಿ ರಾಷ್ಟ್ರೀಯ ಯುವ ದಿನಾಚರಣೆ ಮತ್ತು ರಾಷ್ಟ್ರೀಯ ಮತದಾರರ ದಿನಾಚರಣೆ ಬಗ್ಗೆ ಸವಿಸ್ತಾರವಾಗಿ ಮಾತನಾಡಿದರು. ವಕೀಲರ ಸಂಘದ ಅಧ್ಯಕ್ಷ ಎಸ್.ಬಿ.ಪಾಟೀಲ, ಆನಂದ ರಾಠೋಡ, ಎಸ್.ಎಂ.ಪಾಟೀಲ, ಬಿ.ಸಿ.ಪಾಟೀಲ, ಪ್ರಾಚಾರ್ಯ ಭೀಮನಗೌಡ ಸಿಂಗನಳ್ಳಿ ವೇದಿಕೆ ಮೇಲಿದ್ದರು.

ಇದೇ ಸಂದರ್ಭದಲ್ಲಿ ಮತಗಟ್ಟೆ ಅಧಿಕಾರಿ ಹಾಗೂ ಮತಗಟ್ಟೆ ಮೇಲ್ವಿಚಾರಕರಾಗಿ ಆಯ್ಕೆಗೊಂಡ ಶಿಕ್ಷಕರಾದ ರವಿ ಬಿರಾದಾರ, ಮತ್ತಯ ಎಸ್.ಎನ್.ಕೆಂಭಾವಿ ಅವರಿಗೆ ಸನ್ಮಾನಿಸಿ ಗೌರವಿಸಿದರು. ವಿವಿಧ ಸ್ಪರ್ಧೆಗಳಲ್ಲಿ ಭಾಗವಹಿಸಿದ ವಿದ್ಯಾರ್ಥಿಗಳಿಗೆ ಪ್ರಶಸ್ತಿ ಪತ್ರ ವಿತರಿಸಿದರು. ಮತದಾನದ ಜಾಗೃತಿ ಸಲುವಾಗಿ ವಿದ್ಯಾರ್ಥಿಗಳಿಗೆ ಪ್ರತಿಜ್ಞಾವಿಧಿ ಬೋಧಿಸಿದರು.

ಈ ಸಮಾರಂಭದಲ್ಲಿ ಶಿರಸ್ತೇದಾರ ಎಂ.ಎಂ.ಚಟ್ಟರಕಿ, ಶಿವಶರಣ ಬೂದಿಹಾಳ, ಪಿ.ವ್ಹಿ.ಮಹಲಿನಮಠ, ವ್ಹಿ.ಪಿ.ನಂದಿಕೋಲ, ಸುಭಾಸ ಹೊಸಮನಿ, ಶರಣು ಜೋಗೂರ, ಸುನೀಲ ಪಾಟೀಲ, ಎಸ್.ಎಚ್.ಜಾಧವ, ಉದಯ ಶಿವಸಿಂಪಿಗೇರ್, ಆರ್.ಎಂ.ಕೊಳ್ಳೂರೆ,

## ವಾರ್ತಾ ಇಲಾಖೆ; 76ನೇ ಗಣರಾಜ್ಯೋತ್ಸವ ಆಚರಣೆ

ಕಾರವಾರ: ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ ಕಾರವಾರ ಕಚೇರಿಯಲ್ಲಿ 76ನೇ ಗಣರಾಜ್ಯೋತ್ಸವ ದಿನಾಚರಣೆಯನ್ನು ಭಾನುವಾರ ಆಚರಿಸಲಾಯಿತು.

ಕಚೇರಿಯ ನಿವೃತ್ತ ಸಿಬ್ಬಂದಿ ಶ್ಯಾಮ ದತ್ತಾ ತಳೇಕರ ರಾಷ್ಟ್ರ ಧ್ವಜಾರೋಹಣ ನೆರವೇರಿಸಿದರು. ಈ ಸಂದರ್ಭದಲ್ಲಿ ವಾರ್ತಾ ಇಲಾಖೆಯ ಸಹಾಯಕ ನಿರ್ದೇಶಕ ಬಿ. ಶಿವಕುಮಾರ್, ಸಿಬ್ಬಂದಿಗಳಾದ ರಾಜು ಭೋವಿ, ಗಂಗಾಧರ ಚಲವಾದಿ, ಕಮಲಾ ನಾಯ್ಕ, ರಾಘವೇಂದ್ರ ತಡಸದ, ವಿ. ಮನೋಹರ, ಅಪ್ರೆಂಟಿಸ್‌ಗಳಾದ ಮುತ್ತುರಾಜ ಕೆ., ನಾಗರತ್ನ, ಪತ್ರಕರ್ತರು, ಹವಾಮಾನ ಇಲಾಖೆಯ ಸಿಬ್ಬಂದಿಗಳು ಮತ್ತಿತ್ತರರು ಇದ್ದರು.

## ವಸತಿ ಶಾಲೆಯಲ್ಲಿ ಪರೀಕ್ಷೆ ಇಲ್ಲದೆ ದಾಖಲಾತಿ ಕುರಿತು

ಕಾರವಾರ : ಜಿಲ್ಲೆಯ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ಅಧೀನದಲ್ಲಿ ನಡೆಯುತ್ತಿರುವ ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಕಲ್ಯಾಣ ಇಲಾಖೆಯ ವ್ಯಾಪ್ತಿಯ ವಸತಿ ಶಾಲೆಗಳಲ್ಲಿ 2025–26 ನೇ ಶೈಕ್ಷಣಿಕ ಸಾಲಿಗೆ ಸಪಾಯಿ ಕರ್ಮಚಾರಿ/ ಗುರುತಿಸಿರುವ ಮ್ಯಾನ್ಯುಯಲ್ ಸ್ಕ್ಯಾವೆಂಜರ್ /ಚಿಂದಿ ಆಯುವವರು /ಸ್ಮಶಾನ ಕಾರ್ಮಿಕ ಮಕ್ಕಳಿಗೆ /ಬಾಲ ಕಾರ್ಮಿಕರು/ ಜೀತವಿಮುಕ್ತ ಕಾರ್ಮಿಕರ ಮಕ್ಕಳು /ಗುರುತಿಸಿರುವ ಮಾಜಿ ದೇವದಾಸಿಯವರ ಮಕ್ಕಳಿಗೆ, ಶೇಕಡಾ 25 ಕ್ಕಿಂತ ಹೆಚ್ಚಿನ ಅಂಗವಿಕಲತೆ ಹೊಂದಿರುವ ಮಕ್ಕಳು / ಹೆಚ್.ಐ.ವಿ.ಗೆ ತುತ್ತಾದ ಪೋಷಕರ ಮಕ್ಕಳು ಒಬ್ಬ ಪೋಷಕರನ್ನು ಮಾತ್ರ ಹೊಂದಿರುವ ಅಥವಾ ಅನಾಥ ಮಕ್ಕಳಿಗೆ / ಗುರುತಿಸಿರುವ ಅಲೆಮಾರಿ/ ಅಲೆಅರೆಮಾರಿ / ಸೂಕ್ಷ್ಮ–ಅತೀ ಸೂಕ್ಷ್ಮ ಸಮುದಾಯದ /ಸೈನಿಕರು ಮತ್ತು ಮಾಜಿ ಸೈನಿಕರು ಸರ್ಕಾರಿ ಯೋಜನೆಗಳಿಂದ ಸ್ಥಳಾಂತರಗೊಂಡ ಪೋಷಕರ ಮಕ್ಕಳಿಗೆ, ಪರಿಶಿಷ್ಟ ಜಾತಿ, ಪರಿಶಿಷ್ಟ ಪಂಗಡಗಳ ಆಶ್ರಮ ವಸತಿ ಶಾಲೆಗಳಲ್ಲಿ 5ನೇ ತರಗತಿಯಲ್ಲಿ ಉತ್ತೀರ್ಣರಾದ ಮಕ್ಕಳಿಗೆ ಶೇಕಡಾ 10% ಪ್ರವೇಶ ಪರೀಕ್ಷೆ ಇಲ್ಲದೆ ಕರ್ನಾಟಕ ವಸತಿ ಶಿಕ್ಷಣ ಸಂಸ್ಥೆಗಳ ಸಂಘದ ವ್ಯಾಪ್ತಿಯಲ್ಲಿ ಕಾರ್ಯನಿರ್ವಹಿಸುತ್ತಿರುವ ವಸತಿ ಶಾಲೆಯಲ್ಲಿ ಪ್ರವೇಶ ಪರೀಕ್ಷೆ ಇಲ್ಲದೆ ದಾಖಲಾತಿ ಮಾಡಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

ಆಸಕ್ತ ಮೇಲ್ಕಂಡ ಅರ್ಹತೆ ಹೊಂದಿರುವ ವಿದ್ಯಾರ್ಥಿಗಳು ಎಲ್ಲಾ ದಾಖಲಾತಿಗಳೊಂದಿಗೆ ಫೆ. 10 ರೊಳಗೆ ಆಯಾ ತಾಲ್ಲೂಕಿನ ವಸತಿ ಶಾಲೆಯ ಪ್ರಾಂಶುಪಾಲರನ್ನು ಸಂಪರ್ಕಿಸಿ ಅರ್ಜಿ ಸಲ್ಲಿಸಬಹುದಾಗಿದೆ ಎಂದು ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

*********

# ನೂತನ ಅಧ್ಯಕ್ಷ ಮತ್ತು ಉಪಾಧ್ಯಕ್ಷರು ಹಾಗೂ ನಿರ್ದೇಶಕರಿಗೆ ಆದೇಶ ಪತ್ರ ವಿತರಣೆ



ಗೋಕಾಕ: ನಗರದ ದಿ.ಗೋಕಾಕ ಉಪ್ಪಾರರ ಔದ್ಯೋಗಿಕ ಸಹಕಾರಿ ಸಂಘ ನಿಯಮಿತ ಗೋಕಾಕ ಸೊಸೈಟಿಯ ನೂತನ ಅಧ್ಯಕ್ಷರಾಗಿ ಪರಶುರಾಮ ಶಿಂಗಳಾಪೂರ ಉಪಾಧ್ಯಕ್ಷೆಯಾಗಿ ಶ್ರೀಮತಿ ಲಕ್ಷ್ಮೀ ಬಸವರಾಜ ಖಾನಪ್ಪನವರ ಅವಿರೋಧವಾಗಿ ಆಯ್ಕೆಯಾಗಿದ್ದಾರೆ.

ಗುರುವಾರ ಸೊಸೈಟಿಯ ಸಭಾಂಗಣದಲ್ಲಿ ನಡೆದ ಚುನಾವಣೆ ಸಭೆಯಲ್ಲಿ ಆಡಳಿತ ಮಂಡಳಿ ಸಭೆಯಲ್ಲಿ ಅವಿರೋಧ ಆಯ್ಕೆ ನಡೆಯಿತು. ಚುನಾವಣೆ ಅಧಿಕಾರಿಯಾಗಿದ್ದ ಸುರೇಶ್ ಬಿರಾದಾರ ಪಾಟೀಲ ಅವರು ನೂತನ ಅಧ್ಯಕ್ಷ ಮತ್ತು ಉಪಾಧ್ಯಕ್ಷರು ಹಾಗೂ ನಿರ್ದೇಶಕರಿಗೆ ಆದೇಶ ಪತ್ರ ವಿತರಿಸಿ ಅಭಿನಂದಿಸಿದರು.

ಈ ಸಂದರ್ಭದಲ್ಲಿ ಮಾರುತಿ ಜಡೆನ್ನವರ, ಭೀಮಶಿ ಖಾನಪ್ಪನವರ, ಮಾಯಪ್ಪ ತಹಶೀಲ್ದಾರ್, ಬಸಪ್ಪ ರಂಕನಕೊಪ್ಪ, ಲಕ್ಷ್ಮೀ ಭಿ. ಕಿತ್ತೂರ, ನಿಂಗಪ್ಪ ಹುಳ್ಳಿ, ಸತೆಪ್ಪ ಬಡೆಪ್ಪಗೋಳ, ಗಣಪತಿ ತಹಶೀಲ್ದಾರ್, ಯಲಪ್ಪ ಹೆಜ್ಜಗಾರ, ಸಿದ್ಧಾರೂಢ ಪಾತ್ರೂಟ, ರಾಜು ಮೇದಾರ ಹಾಗೂ ಮುಖಂಡರುಗಳಾದ ಅಡಿವೆಪ್ಪ ಕಿತ್ತೂರು, ಬಸವರಾಜ ಖಾನಪ್ಪನವರ, ಜಗದೀಶ್ ಶಿಂಗಳಾಪೂರ, ಸಂಜು ಜಡೆನ್ನವರ ಉಪಸ್ಥಿತರಿದ್ದರು

*******

# ರಾಷ್ಟ್ರೀಯ ಮತದಾರರ ದಿನ ಆಚರಣೆ



ಗೋಕಾಕ: 'ಚುನಾವಣಾ ಪ್ರಕ್ರಿಯೆಯು ನಾಗರಿಕ ಜೀವನ ಶೈಲಿಯ ಒಂದು ಭಾಗ ಎಂಬ ಭಾವನೆ ನಮ್ಮಲ್ಲಿ ಮೂಡಿದಾಗ ಮಾತ್ರ ಸಾರ್ವತ್ರಿಕವಾಗಿ ಮತದಾನದ ಮಹತ್ವವನ್ನು ಅರಿಯಲು ಸಾಧ್ಯ' ಎಂದು ತಾಲ್ಲೂಕು ಚುನಾವಣಾ ಅಧಿಕಾರಿಗಳೂ ಆಗಿರುವ ತಹಶೀಲ್ದಾರ ಡಾ. ಮೋಹನ ಭಸ್ಮೆ ಹೇಳಿದರು.

ಶುಕ್ರವಾರ ಗೋಕಾಕ ತಾಲ್ಲೂಕು ಕಾನೂನು ಸೇವೆಗಳ ಸಮಿತಿ, ವಕೀಲರ ಸಂಘ, ತಾಲ್ಲೂಕು ಆಡಳಿತ, ಶಿಕ್ಷಣ ಮತ್ತು ಪಂಚಾಯತ್ ರಾಜ್ ಇಲಾಖೆ ಹಾಗೂ ಕೆಎಲ್‌ಇ ಶಿಕ್ಷಣ ಸಂಸ್ಥೆ ಇವರ ಸಂಯುಕ್ತ ಆಶ್ರಯದಲ್ಲಿ 'ರಾಷ್ಟ್ರೀಯ ಮತದಾರರ ದಿನ' ಆಚರಣೆ ಹಿನ್ನೆಲೆಯಲ್ಲಿ ಕೆಎಲ್‌ಇ ಸಂಸ್ಥೆಯ ಸಿ.ಎಸ್.ಅಂಗಡಿ ಪ.ಪೂ. ಮಹಾವಿದ್ಯಾಲಯದಲ್ಲಿ ಏರ್ಪಡಿಸಲಾಗಿದ್ದ ಕಾನೂನು ಸಾಕ್ಷರತಾ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿ ಯುವ ಮತದಾರರಿಗೆ ಮತದಾನ ಗುರ್ತಿನ ಚೀಟಿಗಳನ್ನು ವಿತರಿಸಿ ಮಾತನಾಡಿದ ಅವರು, ದಿನಾಚರಣೆ ಕಾರ್ಯಕ್ರಮವನ್ನು ಕಳೆದ 15 ವರ್ಷಗಳಿಂದ ಜನವರಿ 25ರಂದು ಆಚರಿಸಲಾಗುತ್ತಿದೆ ಆದರೆ ಈ ಬಾರಿ ದಿ. 25 ರಜಾ ದಿನವಾದ್ದರಿಂದ ಒಂದು ದಿನ ಮುಂಚಿತವಾಗಿ ಕಾರ್ಯಕ್ರಮ ಹಮ್ಮಿಕೊಳ್ಳಲಾಗಿದೆ ಎಂದು ವಿವರಿಸಿದರು.

ಇದಕ್ಕೂ ಮೊದಲು ಸಸಿಗೆ ನೀರುಣಿಸುವ ಮೂಲಕ ಕಾರ್ಯಕ್ರಮಕ್ಕೆ ಚಾಲನೆ ನೀಡಿದ ಸಮಿತಿ ಅಧ್ಯಕ್ಷರೂ ಆಗಿರುವ ಪ್ರಧಾನ ಹಿರಿಯ ಸಿವಿಲ್ ನ್ಯಾಯಾಧೀಶ ಉಮೇಶ ಆತ್ನುರೆ ಅವರು ಉದ್ಘಾಟನಾ ಪರ ನುಡಿಗಳನ್ನಾಡಿ, ಮತದಾರರು ಯಾವುದೇ ಆಸೆ–ಆಮಿಷಗಳಿಗೆ ಒಳಗಾಗದೇ ನಿಸ್ವಾರ್ಥ ಮನೋಭಾವದಿಂದ ತಮ್ಮ ಅಮೂಲ್ಯವಾದ ಮತವನ್ನು ಚಲಾಯಿಸುವ ಅವಶ್ಯಕತೆಯನ್ನು ವಿವರಿಸಿದರು.

ಅತಿಥಿಗಳಾಗಿ ಪಾಲ್ಗೊಂಡಿದ್ದ ವಕೀಲರ ಸಂಘದ ಅಧ್ಯಕ್ಷ ಸುಭಾಷ್‌ಚಂದ್ರ ಬಿ.ಪಾಟೀಲ ಅವರು ಮಾತನಾಡಿ, ಮತದಾನದ ಹಕ್ಕನ್ನು ಹೊಂದಿರುವ ವಿದ್ಯಾರ್ಥಿಗಳು ತಮ್ಮೊಂದಿಗೆ ನೆರೆಹೊರೆಯ ಮತದಾರರನ್ನೂ ನಿರ್ಭೀಡೆಯಿಂದ ಮತ ಚಲಾಯಿಸುವಂತೆ ಪ್ರೇರೇಪಿಸುವಂತೆ ಕಿವಿಮಾತು ಹೇಳಿದರು.

ಕೆಎಲ್‌ಇ ಸಂಸ್ಥೆಯ ಸಿ.ಎಸ್.ಅಂಗಡಿ ಪಿ.ಯು. ಕಾಲೇಜಿನ ಪ್ರಾಚಾರ್ಯ ಎಂ.ಎ.ಪಾಟೀಲ ಅವರು 'ಪ್ರಜಾಪ್ರಭುತ್ವ ವ್ಯವಸ್ಥೆಯಲ್ಲಿ ಮತದಾನದ ಮಹತ್ವ' ಎಂಬ ವಿಷಯ ಕುರಿತು ಉಪನ್ಯಾಸ ನೀಡಿದರು.

ವೇದಿಕೆಯಲ್ಲಿ ಸಮಿತಿ ಕಾರ್ಯದರ್ಶಿಗಳೂ ಆಗಿರುವ ಪ್ರಧಾನ ಜೆ.ಎಂ.ಎಫ್.ಸಿ. ನ್ಯಾಯಾಧೀಶ ರಾಜೀವ ಗೋಳಸಾರ, 1ನೇ ಹೆಚ್ಚುವರಿ ಜೆ.ಎಂ.ಎಫ್.ಸಿ. ನ್ಯಾಯಾಧೀಶೆ ಸೂರ್ಯಪ್ರಭ ಎಚ್.ಡಿ. ಮತ್ತು 2ನೇ ಹೆಚ್ಚುವರಿ ಜೆ.ಎಂ.ಎಫ್.ಸಿ. ನ್ಯಾಯಾಧೀಶೆ ಕು. ರೂಪಾ ಮಟ್ಟಿ ಹಾಗೂ ವಕೀಲರ ಸಂಘದ ಪದಾಧಿಕಾರಿಗಳು ಇದ್ದರು.

ಪಿಯು ಕಾಲೇಜ ಕನ್ನಡ ಉಪನ್ಯಾಸಕಿ ವಿ.ಆರ್.ಗುರವ ನಿರೂಪಿಸಿದರು. ಪ್ರೌಢಶಾಲೆ ಮುಖ್ಯೋಪಾಧ್ಯಾಯ ಜಿ.ಎಂ. ಬಿರಾದಾರ ವಂದಿಸಿದರು.

******

# ವೇಮನರ ಜಯಂತಿ ಆಚರಿಸದಕ್ಕೆ ಯುವಕರ ಪ್ರತಿಭಟನೆ

## ಸಂಭಂಧಿಸಿದ ಅಧಿಕಾರಿಗಳ ಅಮಾನತ್ತಿಗೆ ಯುವಕರ ಆಗ್ರಹ



ಮುಧೋಳ: ನಗರದ ಸರಕಾರಿ ಆಸ್ಪತ್ರೆಯಲ್ಲಿ ವೇಮನರ ಜಯಂತಿ ಆಚರಿಸದೇ ಅಧಿಕಾರಿಗಳು ಬೇಜವಾಬ್ದಾರಿ ತೋರಿದಕ್ಕೆ ಅವರನ್ನು ಅಮಾನತ್ತುಗೊಳಿಸಬೇಕು ಎಂದು ಆಗ್ರಹಿಸಿ ಹೇಮವೇಮ ಯುವಕ ಸಂಘಟಕರು ಸಾರ್ವಜನಿಕ ಆಸ್ಪತ್ರೆ ಎದುರು ರಾಜ್ಯ ಹೆದ್ದಾರಿ ಬಂದ ಮಾಡಿ ಪ್ರತಿಭಟನೆ ನಡೆಸಿದರು.

ಶುಕ್ರವಾರ ಸಂಜೆ ಆಸ್ಪತ್ರೆ ಎದುರು, ಮುಖ್ಯಾಧಿಕಾರಿ ಹಾಗು ತಹಸೀಲ್ದಾರ ಸ್ಥಳಕ್ಕೆ ಆಗಮಿಸುವವರೆಗೆ ಅರ್ಧ ಘಂಟೆಗಿಂತ ಹೆಚ್ಚು ರಸ್ತೆ ತಡೆದು ಅಧಿಕಾರಿಗಳ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದರು. ಅಧಿಕಾರಿಗಳ ಬೇಜವಾಬ್ದಾರಿಯಿಂದ ವೇಮನರಿಗೆ ಅವಮಾನ ವೆಸಗಿದ್ದಾರೆ. ಸಂಭಂಧಿಸಿದವರನ್ನು ಅಮಾನತ್ತುಗೊಳಿಸಲು ಅವರು ಒತ್ತಾಯಿಸಿದರು.

ಅಧಿಕಾರಿ ಮಾತಿಗೆ ಆಕ್ರೋಶ : ರಸ್ತೆ ತಡೆ ಮುಂಚೆ ಆಸ್ಪತ್ರೆ ಎದುರು ಪ್ರತಿಭಟನೆ ವೇಳೆ ದೂರವಾಣಿ ಮೂಲಕ ಸಮಜಾಯಿಷಿಗೆ ವೈದ್ಯಾಧಿಕಾರಿ ಎ.ಎ. ಸೂರ್ಯವಂಶಿ ಮುಂದಾದಾಗ ಜಯಂತಿ ಆಚರಿಸುವದು ಮರೆತ್ತಿದ್ದೆವೆ ಎಂದಾಗ ಯುವಕರು ಮತ್ತಷ್ಟು ಆಕ್ರೋಶಗೊಂಡರು.

ಮನವಿ : ಪ್ರತಿಭಟನಾಕಾರರಿಂದ ಮನವಿ ಸ್ವೀಕರಿಸಿ ತಹಸೀಲ್ದಾರ ಮಹಾದೇವ ಸನಮುರಿ ಮಾತನಾಡಿ, ವೇಮನರ ಜಯಂತಿ ಆಚರಿಸದೇ ಇರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳುವಂತೆ ಮೇಲಾಧಿಕಾರಿಗಳ ಗಮನಕ್ಕೆ ತರುವದಾಗಿ ಎಂದು ಅವರು ತಿಳಿಸಿದರು.

ಪ್ರಯಾಣಿಕರ ಪರದಾಟ : ಸರಕಾರಿ ಆಸ್ಪತ್ರೆ ಎದುರು ಧೀಡಿರನೇ ರಸ್ತೆ ಬಂದ್ ಮಾಡಿದ್ದರಿಂದ ಟ್ರಾಫೀಕ್ ಜಾಮ್ ಆಗಿ ವಾಹನ ಸವಾರರು ಪರದಾಡುವಂತಾಯಿತು, ಸಾರ್ವಜನಿಕರಿಗೆ ಕಿರಿಕಿರಿ ಉಂಟಾಯಿತು. ಕಬ್ಬು ಸಾಗಾಣಿಕೆ ವಾಹನಳು, ಬಸ್, ಖಾಸಗಿ ವಾಹನಗಳು ಟ್ರಾಫಿಕ್ ಜಾಮ್‌ನಿಂದ ಕೆಲವೇ ಸಮಯದಲ್ಲಿ ಎರಡು ಕಡೆ ಕಿಲೋಮೀಟರದಷ್ಟು ವಾಹನಗಳ ಸಾಲು ನಿಂತಿತ್ತು.

ರಡ್ಡಿ ಸಮುದಾಯದ ಪ್ರಮುಖರಾದ ದಯಾನಂದ ಪಾಟೀಲ, ಉದಯ ಸಾರವಾಡ, ಸಂತೋಷ ಪಾಟೀಲ, ಕುಮಾರ ಹುಲಕುಂದ, ರಾಜುಗೌಡ ಪಾಟೀಲ ಸೇರಿದಂತೆ ನೂರಾರು ಜನ ಪಾಲ್ಗೊಂಡಿದ್ದರು.

BELAGINA SURYODHYA KANNADA DAILY MORNING Editor, Printer, PUblisher and Owned By GURURAJ IRAPPA KADAM Plot No.2743 NEAR KEB POWER HOUSE RAMTEERTH NAGAR, SHIVAJI NAGAR BELAGAVI-590016
DIST-BELAGAVI,STATE KARNATAKA PRINTED At M/S LAXMI PRINTERS, No. 627,Auto Nagar,Belagavi,Dist- Belagavi Karnataka, RNI No. KARKAN/2019/77640, Volume : 06, Issue : 297, Postal Reg No. PMG/KA/NK/BM/135/25-26 / POST AT Vantamury Colony Post Office


ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ಗಾಂಧೀಜಿ ಕನಸು
ಕರ್ನಾಟಕದಲ್ಲಿ ನನಸು
ಶಕ್ತಿ
ಮಹಿಳೆಯರಿಗೆ
ಬಸ್ ಪ್ರಯಾಣ ಉಚಿತ
ಮಹಿಳೆಯರ ಸಬಲೀಕರಣಕ್ಕೆ
ಮಾದರಿ ಯೋಜನೆ
ಶ್ರೀ ಸಿದ್ದರಾಮಯ್ಯ
ಸನ್ಮಾನ್ಯ ಮುಖ್ಯಮಂತ್ರಿಗಳು
ಶ್ರೀ ಡಿ.ಕೆ. ಶಿವಕುಮಾರ್
ಮಾನ್ಯ ಉಪ ಮುಖ್ಯಮಂತ್ರಿಗಳು
ಫಲಾನುಭವಿಗಳ ಸಂಖ್ಯೆ: 359 ಕೋಟಿ
ಒಟ್ಟು ವೆಚ್ಚ: ರೂ.8,688 ಕೋಟಿ
*22ನೇ ಡಿಸೆಂಬರ್ 2024ಕ್ಕೆ
ನುಡಿದಂತೆ
ನಡೆದಿದ್ದೇವೆ...
ಗೃಹಜ್ಯೋತಿ
ಪ್ರತಿ ಮನೆಗೆ
200 ಯೂನಿಟ್‌ವರೆಗೆ ವಿದ್ಯುತ್ ಉಚಿತ
ಅನ್ನಭಾಗ್ಯ
ಬಡವರಿಗೆ ಪ್ರತಿ ತಿಂಗಳು 10 kg
5 ಕೆಜಿ ಆಹಾರಧಾನ್ಯ ಬದಲಿಗೆ ರೂ. 170
ಗೃಹಲಕ್ಷ್ಮಿ
ಪ್ರತಿ ಮನೆಯೊಡತಿಗೆ ಪ್ರತಿ ತಿಂಗಳು
₹2000
ಯುವನಿಧಿ
ಪ್ರತಿ ತಿಂಗಳು ನಿರುದ್ಯೋಗ ಭತ್ಯೆ
₹3000 ಪದವೀಧರರಿಗೆ
₹1500 ಡಿಪ್ಲೊಮಾ ಪದವೀಧರರಿಗೆ
ಪರಿಶಿಷ್ಟ ಜಾತಿ / ಪರಿಶಿಷ್ಟ ಪಂಗಡ / ಹಿಂದುಳಿದ ವರ್ಗಗಳ ಮಾಲೀಕತ್ವ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು
"ಸಾರ್ವಜನಿಕ ಆಸ್ತಿ ಪಾಸ್ತಿ ರಕ್ಷಿಸುವುದು ಮತ್ತು ಹಿಂಸೆಯನ್ನು ತ್ಯಜಿಸುವುದು ಪ್ರತಿಯೊಬ್ಬ ಭಾರತೀಯನ ಮೂಲಭೂತ ಕರ್ತವ್ಯ"
CMofKarnataka
https://dipr.karnataka.gov.in/
ಕರ್ನಾಟಕ ವಾರ್ತೆ